ಸಂಪುಟ: 04 ಸಂಚಿಕೆ: 290 ಪುಟಗಳು: 08 ಗುರುವಾರ 02 ಜನವರಿ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಒಂದು ದಿನದಲ್ಲಿ, ನೀವು ಯಾವುದೇ ಸಮಸ್ಯೆಗಳನ್ನು ಎದುರಿಸದಿದ್ದಾಗ - ನೀವು ತಪ್ಪು ದಾರಿಯಲ್ಲಿ ಪ್ರಯಾಣಿಸುತ್ತಿದ್ದೀರಿ ಎಂದು ನೀವು ಖಚಿತವಾಗಿ ಹೇಳಬಹುದು.

## ಉದಯವಾಹಿನಿ ಸಂಪಾದಕರಾದ ಹೊಂಬೇಗೌಡರಿಗೆ ಕಾಡು ಸಿದ್ದೇಶ್ವರ ಮಠದ ಶ್ರೀಗಳಿಂದ ಸನ್ಮಾನ

• ಉದಯವಾಹಿನಿ. ಬೆಂಗಳೂರು

ಪತ್ರಿಕಾ ರಂಗ ಮತ್ತು ಸಾಮಾಜಿಕ ಸೇವೆಯಲ್ಲಿ ತೊಡಗಿಸಿಕೊಂಡು ಸಮಾಜದಲ್ಲಿ ತುಳಿತಕ್ಕೆ ಒಳಗಾಗಿರುವ ಸಂಘ ಸಂಸ್ಥೆಗಳು, ಬಡ ಕಾರ್ಮಿಕರ ವರ್ಗ ಶೋಷಿತರ ಪರ ದನಿಯತ್ತಿ ಇವರ ಸಮಸ್ಯೆಗಳನ್ನು ಸರ್ಕಾರಕ್ಕೆ ಮುಟ್ಟಿಸಿ ಅತ್ಯಲ್ಪಕಾಲದಲ್ಲಿ ರಾಜ್ಯದ ಮೂಲೆ ಮೂಲೆಗಳಲ್ಲಿಯೂ ಸಹ ಪತ್ರಿಕಾ ರಂಗದಲ್ಲಿ ವಿಶಿಷ್ಟ ಛಾಪು ಮೂಡಿಸಿರುವ ಉದಯವಾಹಿನಿ ಪತ್ರಿಕೆ, ಭ್ರಷ್ಟ ಅಧಿಕಾರಿಗಳಿಗೂ ಸಹ ಬಿಸಿ ಮುಟ್ಟಿಸಿ ತನ್ನದೇ ಆದ ರೀತಿಯಲ್ಲಿ ಮೂಡಿ ಬರುತ್ತಿರುವ ಪತ್ರಿಕೆಯ ಯಶಸ್ಸಿಗೆ ಕಾರಣಕರ್ತರಾಗಿ, ರಾಜ್ಯದ ಮಠಮಾನ್ಯಗಳ ಪರವಾಗಿಯೂ ಸಹ ಸುದ್ದಿ ಬಿತ್ತರಿಸುತ್ತಾ



**ಪತ್ರಿಕಾ ರಂಗದಲ್ಲಿ ವಿಶಿಷ್ಟ ಛಾಪು ಮೂಡಿಸಿರುವ ಉದಯವಾಹಿನಿ ಪತ್ರಿಕೆ**

ಬರುತ್ತಿರುವ ಪತ್ರಿಕಾ ಸಂಪಾದಕರಾದ ಹೊಂಬೇಗೌಡರಿಗೆ ಅರಸೀಕೆರೆ ತಾಲ್ಲೂಕಿನಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮದಲ್ಲಿ ನಾಡಿನ ಖ್ಯಾತ ಪೀಠಾಧಿಪತಿಗಳಾದ ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂಕು, ನೊಣವಿನಕೆರೆ ಕಾಡು ಸಿದ್ದೇಶ್ವರ ಮಠದ ಶ್ರೀ ಮ. ನಿ. ಪ್ರ. ಕರಿ ಋಷಭ ದೇಶಿ ಕೇಂದ್ರ ಮಹಾ ಸ್ವಾಮೀಜಿಗಳು ಹೃದಯಸ್ಪರ್ಶಿ ಸನ್ಮಾನಿಸಿ ಗೌರವಿಸಿದರು. ನಂತರ ಮಾತನಾಡಿದ ಶ್ರೀಗಳು ಪತ್ರಿಕಾರಂಗದಲ್ಲಿ ರಾಜಕಾರಣಿಗಳಿಗಿಂತಲೂ ಸಮಾಜ ಸೇವೆಯಲ್ಲಿ ಪ್ರಭಾವ ಬೀರಿ ಸಮಾಜದಲ್ಲಿ ನಡೆಯುವ ಅಂಕುಡೊಂಕುಗಳನ್ನು ಗುರುತಿಸಿ ಆಗಾಗ ಎಚ್ಚರಿಸಿ ತಮ್ಮ ಕರ್ತವ್ಯವನ್ನು ನಿರ್ವಹಿಸಬೇಕು ಎಂದು ಶ್ರೀಗಳು ತಿಳಿಸಿದರು. ಇದಕ್ಕಾಗಿ ಟಿ. ಹೊಂಬೇಗೌಡರನ್ನು ಗುರುತಿಸಿ ಸನ್ಮಾನಿಸುತ್ತಿರುವುದು ಅತ್ಯಂತ ಸಂತೋಷಕರವಾಗಿದೆ ಎಂದರು. ಶ್ರೀ ಶ್ರೀ ನೀಲಲೋಚನ ಮಹಾ ಸ್ವಾಮಿಗಳು ಶ್ರೀ ಶ್ರೀ ತೋಟದಾರ್ಯ ಮಹಾಸ್ವಾಮೀಜಿಗಳ ಪುಣ್ಯಸ್ಮರಣೆ ಆರಾಧನೆ ಸಮಾರಂಭದಲ್ಲಿ ಶ್ರೀ ಗುರು ಶಿವಬಸವ ಕುಮಾರ ಆಶ್ರಮದಲ್ಲಿ ನಡೆಯಿತು. ಈ ಸಮಾರಂಭದಲ್ಲಿ ಹಲವಾರು ಶ್ರೀಗಳು ಭಾಗವಹಿಸಿದ್ದರು. ಮುಖ್ಯಮಂತ್ರಿಗಳ ನಿಕಟಪೂರ್ವ ಕಾರ್ಯದರ್ಶಿ ಎನ್ ಆರ್ ಸಂತೋಷ್ ಸೇರಿದಂತೆ ಹಲವಾರು ಗಣ್ಯರು ಉಪಸ್ಥಿತರಿದ್ದರು

## ಹೊಸ ವರ್ಷಕ್ಕೆ ಸಚಿವ ಸಂಪುಟ ಪುನಾರಚನೆ: ಸಿಎಂ ಸುಳಿವು

• ಉದಯವಾಹಿನಿ, ಬೆಂಗಳೂರು

ಹೊಸ ವರ್ಷಕ್ಕೆ ಸಂಪುಟ ಪುನರಚನೆ ಆಗುತ್ತಾ ಎನ್ನುವ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸುಳಿವು ನೀಡಿದ್ದು, ಸಚಿವ ಸಂಪುಟ ಪುನಾರಚನೆ ಕುರಿತಂತೆ ಹೈ ಕಮಾಂಡ್ ಜೊತೆಗೆ ಚರ್ಚಿಸಿ ನಿರ್ಧರಿಸುತ್ತೇನೆ ಎಂದು ತಿಳಿಸಿದರು. ಈ ಮೂಲಕ ಸಚಿವ ಸಂಪುಟ ಪುನಾರಚನೆ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸುಳಿವು ನೀಡಿದ್ದಾರೆ ಎನ್ನಲಾಗಿದೆ.

ಬೆಂಗಳೂರಿನ ವಿಧಾನಸೌಧದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಹೊಸ ವರ್ಷಕ್ಕೆ ಸಂಪುಟದಲ್ಲಿ ಸರ್ಜರಿ ಮಾಡುತ್ತೀರಾ, ಸಂಪುಟ ಪುನಾರಚನೆ ಆಗುತ್ತಾ ಎಂದು ಮಾಧ್ಯಮ ಪ್ರತಿನಿಧಿಗಳು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಸಂಪುಟ ಪುನರ್ ರಚನೆ ಕುರಿತಂತೆ ಹೈಕಮಾಂಡ್ ಜೊತೆಗೆ ಚರ್ಚಿಸಿ ನಿರ್ಧರಿಸಲಾಗುತ್ತದೆ ಎಂದು ತಿಳಿಸಿದರು. ಹಾಗಾಗಿ ಸಿಎಂ ಹೇಳಿಕೆಯಿಂದ ಇದೀಗ ಸಂಪುಟ ಸಭೆ ಪುನಾರಚನೆ ಮತ್ತೆ ಜೀವ ಪಡೆದಿದೆ. ಹೊಸ ವರ್ಷದಲ್ಲಿ ಹೊಸ ತಂಡ ಕಟ್ಟುವ ಬಗ್ಗೆ ಸಿಎಂ ಸಿದ್ದರಾಮಯ್ಯ ಸುಳಿವು ನೀಡಿದ್ದಾರೆ.

## ದಿ.ಮನಮೋಹನ್ ಸಿಂಗ್‌ಗೆ ಭಾರತ ರತ್ನ ನೀಡುವಂತೆ ಒತ್ತಡ

• ಉದಯವಾಹಿನಿ, ನವದೆಹಲಿ

ಮಾಜಿ ಪ್ರಧಾನಿ ದಿವಂಗತ ಮನಮೋಹನ್ ಸಿಂಗ್ ಅವರ ನಿಧನ ಬಳಿಕ ಅವರಿಗೆ ಭಾರತ ರತ್ನ ಪ್ರಶಸ್ತಿ ನೀಡಬೇಕು ಎನ್ನುವ ಒತ್ತಡ ಹೆಚ್ಚುತ್ತಿದೆ. ಭಾರತ ರತ್ನ ನೀಡುವಂತೆ ಒತ್ತಾಯಿಸಿ ತೆಲಂಗಾಣ ಸರ್ಕಾರ ವಿಧಾನಸಭೆಯಲ್ಲಿ ನಿರ್ಣಯ ಅಂಗೀಕರಿಸಿ ಕೇಂದ್ರಕ್ಕೆ ಒತ್ತಡ ಹಾಕಿದ ಬೆನ್ನಲ್ಲೇ ಈ ಚರ್ಚೆ ಮುನ್ನಲೆಗೆ ಬಂದಿದೆ. ಮನಮೋಹನ್ ಸಿಂಗ್ ಅವರು ನಮ್ಮ ದೇಶದ ಮಹಾನ್ ನಾಯಕರಾಗಿದ್ದು, ಅವರಿಗೆ ಭಾರತ ರತ್ನ ಪ್ರಶಸ್ತಿ ನೀಡಬೇಕು. ಕೇಂದ್ರ ಸರ್ಕಾರ ತೆಲಂಗಾಣ ವಿಧಾನಸಭೆ ನಿರ್ಣಯವನ್ನು ಅಂಗೀಕರಿಸುವಂತೆ ನಾನು ಕೇಂದ್ರವನ್ನು ಒತ್ತಾಯಿಸುತ್ತೇನೆ ಎಂದು ರಾಜ್ಯಸಭೆಯ ಕಾಂಗ್ರೆಸ್ ಉಪನಾಯಕ ಪ್ರಮೋದ್ ತಿವಾರಿ ಒತ್ತಾಯಿಸಿದ್ದಾರೆ. ಶಿಕ್ಷಣದ ಹಕ್ಕು, ಮಾಹಿತಿ ಹಕ್ಕು, ನರೇಗಾ ಮುಂತಾದ ಕಾರಣಗಳಿಗಾಗಿ ಮನಮೋಹನ್ ಸಿಂಗ್‌ಗೆ ಭಾರತ ರತ್ನ ನೀಡಬೇಕೆಂದು ತೆಲಂಗಾಣ ವಿಧಾನಸಭೆ ಒತ್ತಾಯಿಸಿದ್ದು ಸರಿಯಾಗಿದೆ ಎಂದು ಕಾಂಗ್ರೆಸ್ ರಾಷ್ಟ್ರೀಯ ವಕ್ತಾರ ಶುಭರಂಶ್ ಕುಮಾರ್ ರೈ ಹೇಳಿದ್ದಾರೆ. ದೇಶದ ಅತ್ಯುನ್ನತ ಗೌರವ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು.

## ಪ್ರಧಾನಿ ಕಾರ್ಯಾಲಯದ ಜತೆ ಕೇಂದ್ರ ಸಚಿವ ಮಾತುಕತೆ

• ಉದಯವಾಹಿನಿ, ಬೆಂಗಳೂರು

ಬಹುತೇಕ ಖಾಸಗೀಕರಣದ ಹೊಸ್ತಿಲಲ್ಲಿದ್ದ ಭಾರತೀಯ ರಾಷ್ಟ್ರೀಯ ಉಕ್ಕು ನಿಗಮ ಅಥವಾ ವೈಜಾಗ್ ಸ್ಟೀಲ್ ಕಾರ್ಖಾನೆಯನ್ನು ಹೊಸ ವರ್ಷದಲ್ಲಿ ಪುನಶ್ಚೇತನಗೊಳಿಸುವ ನಿಟ್ಟಿನಲ್ಲಿ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಅವಿರತ ಪ್ರಯತ್ನ ಫಲಕಾರಿಯಾಗಿದೆ. ಹೊಸ ವರ್ಷದ ಆರಂಭದಲ್ಲಿಯೇ ವೈಜಾಗ್ ಸ್ಟೀಲ್ ಕಾರ್ಖಾನೆ ಪುನಶ್ಚೇತನ ಯೋಜನೆ ಘೋಷಣೆ ಆಗುವ ಸಾಧ್ಯತೆ ಇದೆ. 2030ಕ್ಕೆ ದೇಶದ ಉಕ್ಕು ಉತ್ಪಾದನೆ ಪ್ರಮಾಣವನ್ನು 300 ದಶಲಕ್ಷ ಟನ್‌ಗಳಿಗೆ ಹೆಚ್ಚಿಸಬೇಕು ಎಂದು ಪ್ರಧಾನಿ ನಿಗದಿ ಮಾಡಿರುವ ಗುರಿಯನ್ನು ತಲುಪುವ ನಿಟ್ಟಿನಲ್ಲಿ ಕೇಂದ್ರ ಉಕ್ಕು ಸಚಿವರು ಈ ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವ ನಿಟ್ಟಿನಲ್ಲಿ ಪ್ರಮುಖ ಹೆಜ್ಜೆ ಇರಿಸಿದ್ದಾರೆ. ಶೇ.100ರಷ್ಟು ಬಂಡವಾಳ ವಾಪಸಾತಿ ನಿರ್ಧಾರದಿಂದ ಪೂರ್ಣ ಪ್ರಮಾಣದಲ್ಲಿ ಖಾಸಗೀಕರಣ ಆಗುವ ಹಂತದಲ್ಲಿದ್ದ ವೈಜಾಗ್ ಸ್ಟೀಲ್‌ಗೆ ಕೊನೆಗೂ ಜೀವದಾನವಾಗುತ್ತಿದೆ. ಈ ಬಗ್ಗೆ ಕಾರ್ಖಾನೆಗೆ ಮರುಜೀವ ಕೊಡುವ ಪುನಶ್ಚೇತನ ಯೋಜನೆಯ ಬಗ್ಗೆ ಪ್ರಧಾನಮಂತ್ರಿಗಳ ಕಾರ್ಯಾಲಯದ ಜತೆ ಕೇಂದ್ರ ಸಚಿವರು ವಿಸ್ತೃತ ಸಮಾಲೋಚನೆ ನಡೆಸಿದ್ದಾರೆ. ಪ್ರಧಾನಿಗಳ ಕನಸಿನ 'ವಿಕಸಿತ ಭಾರತ 2047' ಗುರಿ ತಲುಪಲು ಭಾರತೀಯ ಉಕ್ಕು ಕ್ಷೇತ್ರದ ಕೊಡುಗೆ ಮಹತ್ವವಾದದ್ದು. ಈ ದಿಸೆಯಲ್ಲಿ ಪ್ರಧಾನಿಗಳ ಆತ್ಮನಿರ್ಭರ ಭಾರತ ಮತ್ತು ಮೇಕ್ ಇನ್ ಇಂಡಿಯಾ ಪರಿಕಲ್ಪನೆಗಳ ಅಡಿಯಲ್ಲಿ ವೈಜಾಗ್ ಸ್ಟೀಲ್ ಕಾರ್ಖಾನೆಗೆ ಕೇಂದ್ರ ಸರ್ಕಾರ ಕಾಯಕಲ್ಪ ನೀಡುತ್ತಿದೆ ಎಂದರು.


# ಜವಾಬ್ದಾರಿ ಹೆಚ್ಚಿಸಿ ಸದೃಢ ಆರ್ಥಿಕತೆಗೆ ಶ್ರಮಿಸಿ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಜನರ ಆರ್ಥಿಕ ಶಕ್ತಿ ಹೆಚ್ಚಿಸಲು ಇನ್ನಷ್ಟು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಿ, ಪ್ರಾದೇಶಿಕ ಅಸಮತೋಲನ, ಅಸಮಾನತೆ ತೊಡೆಯಲು ನಿಮ್ಮ ಸಹಕಾರ ಹೆಚ್ಚು ಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಐಎಎಸ್, ಐಪಿಎಸ್ ಅಧಿಕಾರಿಗಳಿಗೆ ಕರೆ ನೀಡಿದ್ದಾರೆ. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಬುಧವಾರ ಹಿರಿಯ ಐಎಎಸ್ ಮತ್ತು ಐಪಿಎಸ್ ಅಧಿಕಾರಿಗಳಿಗೆ ಹೊಸ ವರ್ಷದ ಶುಭಾಶಯ ಕೋರಿ ಮಾತನಾಡಿದ ಸಿಎಂ, ಬದುಕಿನಲ್ಲಿ ಏಳು ಬೀಳು ಸಹಜ ಮತ್ತು ನಿರಂತರ. ಪರಿಸ್ಥಿತಿಗಳು ಸದಾ ನಮ್ಮ ಪರವಾಗಿ ಇರುವುದಿಲ್ಲ. ಆತ್ಮವಿಶ್ವಾಸ ಕಳೆದುಕೊಳ್ಳದೇ ಧೈರ್ಯದಿಂದ ಸಮಸ್ಯೆಗಳು, ಸಂದರ್ಭಗಳನ್ನು ನಿರ್ವಹಿಸಿ ಪರಿಹಾರ ಕಂಡುಕೊಳ್ಳಲು ಸಾಧ್ಯವಿದೆ ಎಂದರು. ಆಡಳಿತಾಂಗದಲ್ಲಿ ಐಎಎಸ್, ಐಪಿಎಸ್, ಐಆರ್‌ಎಸ್ ಹಾಗೂ ಐಎಫ್‌ಎಸ್ ಅಧಿಕಾರಿಗಳ ಜವಾಬ್ದಾರಿ ಹೆಚ್ಚು. ನಾವು ಕಾನೂನುಗಳನ್ನು ರಚಿಸಿ, ಜಾರಿ ಆಗುವ ದಿಕ್ಕಿನಲ್ಲಿ ನಿರಂತರ ನಿಗಾವಹಿಸುತ್ತೇವೆ. ಅಧಿಕಾರಿ ವರ್ಗ ಸಮಾಜಕ್ಕೆ ಪೂರಕವಾಗಿ ಕ್ರಿಯಾಶೀಲತೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದು ತಿಳಿಸಿದರು. ಸಂವಿಧಾನ ಜಾರಿ ಸಂದರ್ಭದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಆಡಿದ ಮಾತುಗಳನ್ನು ಉಲ್ಲೇಖಿಸಿದ ಸಿಎಂ, ಸಮಾಜದ ಎಲ್ಲಾ ವರ್ಗಗಳಿಗೆ ಸಾಮಾಜಿಕ, ಆರ್ಥಿಕ ಸ್ವಾತಂತ್ರ್ಯ ಒದಗಿಸಬೇಕು. ಇಲ್ಲದಿದ್ದರೆ ರಾಜಕೀಯ ಸ್ವಾತಂತ್ರ್ಯಕ್ಕೆ ಅರ್ಥ ಬರುವುದಿಲ್ಲ ಎಂದು ಹೇಳಿದರು. ಸಮಾನ ಅವಕಾಶಗಳು ಸಿಕ್ಕಾಗ ಸಮಾನತೆ ದಿಕ್ಕಿಗೆ ನಾವು ಸಾಗಬಹುದು ಎನ್ನುವ ಕಾರಣದಿಂದಲೇ ನಾವು ಐದು ಗ್ಯಾರಂಟಿಗಳನ್ನು ಜಾರಿ ಮಾಡಿದೆವು. ಜನರ ಕೈಯಲ್ಲಿ ಕಾಸು ಇರಬೇಕು, ಜನರ ಕೊಳ್ಳುವ ಶಕ್ತಿ ಹೆಚ್ಚಾಗಬೇಕು. ಇದಕ್ಕೆ ತಕ್ಕಂತೆ ರಾಜ್ಯದ ಜನರ ಜೇಬಲ್ಲಿ ಹಣ ಇರುವ ಗ್ಯಾರಂಟಿಗಳನ್ನು ನಾವು ಜಾರಿ ಮಾಡಿದೆವು. ಮಧ್ಯವರ್ತಿಗಳ ಹಾವಳಿ ಇಲ್ಲದಂತೆ ನೇರ ಜನರಿಗೆ ಹಣ ತಲುಪಿಸುತ್ತಿದ್ದೇವೆ. ಇದು ಇನ್ನಷ್ಟು ಪರಿಣಾಮಕಾರಿಯಾಗಿ ಜನರಿಗೆ ತಲುಪಿಸುವ ಜವಾಬ್ದಾರಿ ನಿಮ್ಮೆಲ್ಲರ ಮೇಲಿದೆ ಎಂದು ಹೇಳಿದರು. ಇಲ್ಲಿಯವರೆಗೂ 35 ಸಾವಿರ ಕೋಟಿ ರೂ.ಗಳನ್ನು ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಖರ್ಚು ಮಾಡಿದ್ದೇವೆ. ಈಗಲಾದರೂ ನಂಜುಂಡಪ್ಪ ಅವರ ವರದಿಯಲ್ಲಿನ ಪ್ರಾದೇಶಿಕ ಅಸಮಾನತೆ ಕಡಿಮೆಯಾಗಿದೆಯಾ ಎನ್ನುವುದನ್ನು ಅಧ್ಯಯನ ನಡೆಸಿ ವರದಿ ನೀಡಲು ಗೋವಿಂದರಾವ್ ಅವರ ಸಮಿತಿ ರಚಿಸಲಾಗಿದೆ. ಏಕೆ ಉತ್ತರ ಕರ್ನಾಟಕದ ಅಸಮಾನತೆ ಕಡಿಮೆ ಆಗಿಲ್ಲ ಎನ್ನುವ ಬಗ್ಗೆಯೂ ಬೆಳಗಾವಿ ಅಧಿವೇಶನದಲ್ಲೂ ಚರ್ಚಿಸಿದ್ದೇವೆ. ಇದನ್ನು ನಾವು ಗಂಭೀರವಾಗಿ ಪರಿಗಣಿಸಿದ್ದೇವೆ. ನೀವೂ ಅಷ್ಟೆ ಗಂಭೀರವಾಗಿ ಪರಿಗಣಿಸಿ ಪ್ರಾದೇಶಿಕ ಅಸಮತೋಲನ ತೊಡೆದು ಹಾಕಲು ಶ್ರಮಿಸಬೇಕು ಎಂದು ಕರೆ ನೀಡಿದರು.

ಅಭಿವೃದ್ಧಿಗೆ ಹಣ ಇಲ್ಲ ಎನ್ನುವ ಸುಳ್ಳನ್ನು ಪದೇ ಪದೇ ಹರಡಿಸುತ್ತಿದ್ದಾರೆ. ಇದು ಸುಳ್ಳು ಎನ್ನುವುದು ನಿಮಗೇ ಗೊತ್ತಿದೆ. ಹಿಂದಿನ ಸರ್ಕಾರ ಬಜೆಟ್ ಒಪ್ಪಿಗೆ ಪಡೆಯದೆ ಯದ್ವಾ ತದ್ವಾ ಟೆಂಡರ್ ಕರೆದು ಹಾನಿ ಮಾಡಿತ್ತು. ಸುಮಾರು 39ಸಾವಿರ ಕೋಟಿ ರೂ. ಬಿಲ್ ಬಾಕಿ ಉಳಿಸಿ ಹೋಗಿದ್ದರು. ಜೊತೆಗೆ ಕೇಂದ್ರ ಸರ್ಕಾರದಿಂದ ನಮಗೆ ಅನ್ಯಾಯ ಮುಂದುವರೆದಿದೆ. ಇದೆಲ್ಲವನ್ನೂ ಸರಿದೂಗಿಸಿಕೊಂಡು ಅಭಿವೃದ್ಧಿಗೂ ಹಣ ಒದಗಿಸುತ್ತಿದ್ದೇವೆ. ಇಲಾಖೆಗಳಲ್ಲಿರುವ ಹಣ ಹೆಚ್ಚು ಸೋರಿಕೆ ಆಗದಂತೆ ತಡೆಯುವ ಜವಾಬ್ದಾರಿ ಮತ್ತು ಕರ್ತವ್ಯ ನಿಮ್ಮ ಮೇಲಿದೆ ಎಂದರು.

ಸಚಿವ ಜಮೀರ್ ಅಹಮದ್ ಖಾನ್, ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ ಅತೀಕ್ ಅಹಮದ್, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಅಲೋಕ್ ಮೋಹನ್ ಸೇರಿ ಎಲ್ಲಾ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



**ಯುವ ಜನತೆ ನಮ್ಮ ಆಸ್ತಿ**

ಯುವ ಜನತೆ ನಮ್ಮ ಸಮಾಜದ ಆಸ್ತಿ.ಭವಿಷ್ಯ ಹಾಳಾಗದಂತೆ ಎಚ್ಚರ ವಹಿಸುವ ಸವಾಲನ್ನು ಐಪಿಎಸ್ ಅಧಿಕಾರಿಗಳು ಸ್ವೀಕರಿಸಬೇಕು. ಡ್ರಗ್ಸ್ ಹಾವಳಿ, ಅಪರಾಧ ಜಗತ್ತಿನ ಕಡೆಗೆ ಯುವ ಜನತೆ ಆಕರ್ಷಿತರಾಗದಂತೆ ಎಚ್ಚರವಹಿಸಿ. ತಂತ್ರಜ್ಞಾನ ಮತ್ತು ವಿಜ್ಞಾನದ ಪ್ರಗತಿ ಆಗುತ್ತಿದೆ. ಈ ಪ್ರಗತಿ ಅಪರಾಧಗಳಿಗೆ ಬಳಕೆ ಆಗದೆ ಯುವ ಜನರ ಭವಿಷ್ಯ ರೂಪಿಸಲು ಸಹಕಾರಿ ಆಗುವಂತೆ ಕರ್ತವ್ಯ ನಿರ್ವಹಿಸಿ ಎಂದು ಸಲಹೆ ನೀಡಿದರು. ನೀವು ಅಧಿಕಾರಿ ವರ್ಗ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿದರೆ ರಾಜ್ಯದಲ್ಲಿ ಅದ್ಭುತ ಬದಲಾವಣೆ, ಸುಧಾರಣೆಗಳನ್ನು ತರಲು ಸಾಧ್ಯವಿದೆ. ಇದಕ್ಕಾಗಿ ನಿಮ್ಮ ಕಾರ್ಯಕ್ಷಮತೆ ಬಳಕೆಯಾಗಲಿ. ಅಧಿಕಾರಿ ವರ್ಗಕ್ಕೆ ನಮ್ಮ ಸಲಹೆಯ ಅಗತ್ಯ ಇಲ್ಲ. ನೀವು ಆತ್ಮಸಾಕ್ಷಿಗೆ ತಕ್ಕಂತೆ ನಡೆದುಕೊಂಡರೆ ಸಾಕು. ಭ್ರಷ್ಟಾಚಾರ ವ್ಯವಸ್ಥೆ ಕಡಿಮೆ ಆಗುವ ಬದಲಿಗೆ ಹೆಚ್ಚಾಗುತ್ತಿರುವುದು ದುರಂತ. ಆತ್ಮಸಾಕ್ಷಿಗೆ ತಕ್ಕಂತೆ ಪ್ರಾಮಾಣಿಕವಾಗಿ ನಡೆದುಕೊಳ್ಳೋಣ ಎಂದು ಕರೆ ನೀಡಿದರು.



1. ನಮ್ಮ-ನಿಮ್ಮ ಉದ್ದೇಶ ಒಂದೇ. ಸಮಾಜದ ಪ್ರಗತಿ ಮತ್ತು ಆರೋಗ್ಯಕರ ಬದಲಾವಣೆ
2. ಅಭಿವೃದ್ಧಿಗೆ ಹಣ ಇಲ್ಲ ಎನ್ನುವ ಸುಳ್ಳನ್ನು ಪದೇ ಪದೇ ಹರಡಿಸುತ್ತಿದ್ದಾರೆ.
3. ಹಿಂದಿನ ಸರ್ಕಾರ ಬಜೆಟ್ ಒಪ್ಪಿಗೆ ಪಡೆಯದೆ ಯದ್ವಾ ತದ್ವಾ ಟೆಂಡರ್ ಕರೆದು ಹಾನಿ ಮಾಡಿತ್ತು.

**ಜೇಬಲ್ಲಿ ಹಣ ಇರುವ ಗ್ಯಾರಂಟಿ**

• ಇಲಾಖೆಗಳಲ್ಲಿರುವ ಹಣ ಹೆಚ್ಚು ಸೋರಿಕೆ • ಆಗದಂತೆ ತಡೆಯುವ ಜವಾಬ್ದಾರಿ ಕರ್ತವ್ಯ ನಿಮ್ಮ ಮೇಲಿದೆ • ಹಿರಿಯ ಅಧಿಕಾರಿಗಳ ಸಿಎಂ ಸಲಹೆ • ಹಿಂದಿನ ವರ್ಷಗಳ ಅನುಭವ, ಪಾಠಗಳಿಂದ ಕಲಿತು ಈ ವರ್ಷ ಕಾರ್ಯಕ್ಷಮತೆ ಹೆಚ್ಚಿಸಿಕೊಳ್ಳೋಣ: ಸಿಎಂ

**39 ಸಾವಿರ ಕೋಟಿ ಬಿಲ್ ಬಾಕಿ**

ನಮ್ಮ-ನಿಮ್ಮ ಉದ್ದೇಶ ಒಂದೇ. ಸಮಾಜದ ಪ್ರಗತಿ ಮತ್ತು ಆರೋಗ್ಯಕರ ಬದಲಾವಣೆ. ಇದಕ್ಕಾಗಿ ನಮ್ಮ ನಮ್ಮ ಆತ್ಮಸಾಕ್ಷಿಗೆ ತಕ್ಕಂತೆ ನಡೆದುಕೊಳ್ಳೋಣ. ಅಭಿವೃದ್ಧಿಗೆ ಹಣ ಇಲ್ಲ ಎನ್ನುವ ಸುಳ್ಳನ್ನು ಪದೇ ಪದೇ ಹರಡಿಸುತ್ತಿದ್ದಾರೆ. ಇದು ಸುಳ್ಳು ಎನ್ನುವುದು ನಿಮಗೇ ಗೊತ್ತಿದೆ. ಹಿಂದಿನ ಸರ್ಕಾರ ಬಜೆಟ್ ಒಪ್ಪಿಗೆ ಪಡೆಯದೆ ಯದ್ವಾ ತದ್ವಾ ಟೆಂಡರ್ ಕರೆದು ಹಾನಿ ಮಾಡಿತ್ತು. ಸುಮಾರು 39 ಸಾವಿರ ಕೋಟಿ ರೂ ಬಿಲ್ ಬಾಕಿ ಉಳಿಸಿ ಹೋಗಿದ್ದರು. ಜೊತೆಗೆ ಕೇಂದ್ರ ಸರ್ಕಾರದಿಂದ ನಮಗೆ ಅನ್ಯಾಯ ಮುಂದುವರೆದಿದೆ. ಇದೆಲ್ಲವನ್ನೂ ಸರಿದೂಗಿಸಿಕೊಂಡು ಅಭಿವೃದ್ಧಿಗೂ ಹಣ ಒದಗಿಸುತ್ತಿದ್ದೇವೆ. ಆದ್ದರಿಂದ ಇಲಾಖೆಗಳಲ್ಲಿರುವ ಹಣ ಹೆಚ್ಚು ಸೋರಿಕೆ ಆಗದಂತೆ ತಡೆಯುವ ಜವಾಬ್ದಾರಿ ಮತ್ತು ಕರ್ತವ್ಯ ಅಧಿಕಾರಿಗಳ ಮೇಲಿದೆ. ಹಣ ಸಂಗ್ರಹಿಸುವ ಇಲಾಖೆಗಳು ಮತ್ತು ಹಣ ಖರ್ಚು ಮಾಡುವ ಇಲಾಖೆಗಳೆರಡೂ ಸಮತೂಕದಿಂದ ಕರ್ತವ್ಯ ನಿರ್ವಹಿಸಬೇಕು.

**ಆರ್ಥಿಕತೆಗೆ ಹೊಸ ಚೈತನ್ಯ ನೀಡಿದ ಮನಮೋಹನ್ ಸಿಂಗ್**

ಭಾರತದ ಆರ್ಥಿಕತೆ ಕುಸಿತ ಕಂಡಿದ್ದಾಗ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಿದ ಮನಮೋಹನ್ ಸಿಂಗ್ ಅವರು ದೇಶದ ಆರ್ಥಿಕತೆಗೆ ಹೊಸ ಚೈತನ್ಯ ನೀಡಿದರು. ದೇಶದ ಆರ್ಥಿಕ ಬೆಳವಣಿಗೆ ಆಗಿ ಇದರ ಲಾಭ ದೇಶದ ಜನರಿಗೆ ಲಭಿಸುವಂತೆ ಮಾಡಿದರು. ಸಂವಿಧಾನದ ನಿರ್ದೇಶಕ ತತ್ವಗಳಾದ ಸಮಾನತೆ, ಜಾತ್ಯತೀತತೆ, ಸಾಮಾಜಿಕ ನ್ಯಾಯದ ಮೌಲ್ಯಗಳನ್ನು ದೇಶದ ಜನರ ಮೂಲಭೂತ ಹಕ್ಕುಗಳನ್ನಾಗಿ ಮಾಡಿದರು. ಮಾಹಿತಿ ಹಕ್ಕು, ಆಹಾರದ ಹಕ್ಕು, ಶಿಕ್ಷಣದ ಹಕ್ಕುಗಳನ್ನು ಕಡ್ಡಾಯ ಮಾಡಿದರು. ಆ ಮೂಲಕ ಸಮಾನತೆಯೆಡೆಗೆ ದೇಶವನ್ನು ಮುನ್ನಡೆಸಿದರು ಎಂದು ತಿಳಿಸಿದರು.

## ಕೆಪಿಸಿಸಿ ಅಧ್ಯಕ್ಷ ಸ್ಥಾನದ ಆಯ್ಕೆ ವಿಚಾರ; ಸತೀಶ ಜಾರಕಿಹೊಳಿ ನಡೆ ನಿಗೂಢ?

• ಉದಯವಾಹಿನಿ, ಬೆಳಗಾವಿ

ಕೆಪಿಸಿಸಿ ಅಧ್ಯಕ್ಷ ಸ್ಥಾನದ ಆಯ್ಕೆ ವಿಚಾರದ ಬಗ್ಗೆ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಮಹತ್ವದ ಹೇಳಿಕೆಯೊಂದನ್ನು ನೀಡಿದದ್ದಾರೆ. ಬೆಳಗಾವಿಯಲ್ಲಿ ಮಾತನಾಡಿದ ಅವರು ಕೆಪಿಸಿಸಿಯ ಈಗಿರುವ ಅಧ್ಯಕ್ಷರನ್ನೇ ಮುಂದುವರಿಸಬೇಕೇ ಅಥವಾ ಹೊಸಬರಿಗೆ ಅವಕಾಶ ನೀಡಬೇಕಾ ಎಂಬುದು ಪಕ್ಷದ ಹಂತದಲ್ಲಿ ಚರ್ಚೆ ಆಗಬೇಕು.

ಇದು ನಮ್ಮ ಹಂತದಲ್ಲಿ ಆಗುವಂತದ್ದಲ್ಲ, ಒಬ್ಬೊಬ್ಬರು ಎರಡೆರಡು ಹುದ್ದೆಯಲ್ಲಿದ್ದರೆ ತಮ್ಮ ಜವಾಬ್ದಾರಿ ನಿರ್ವಹಿಸುವುದು ಕಷ್ಟವಾಗುತ್ತದೆ. ಹೀಗಾಗಿ ಬದಲಾವಣೆ ಆಗಬೇಕು ಎಂಬುದು ಎಲ್ಲಾರ ಅಭಿಪ್ರಾಯ. ಆದರೆ ಅದು ನಮ್ಮ ಹಂತದಲ್ಲಿ ಇಲ್ಲ. ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಮಾಡುವ ನಿರ್ಧಾರ ಎಐಸಿಸಿಗೆ ಮಾತ್ರ ಇದೆ ಎಂದು ಜಾರಕಿಹೊಳಿ ಹೇಳಿದರು. ಬೆಳಗಾವಿ ಜಿಲ್ಲಾಧ್ಯಕ್ಷರ ನೇಮಕ ಕುರಿತು ಪ್ರತಿಕ್ರಿಯಿಸಿದ ಅವರು ಈ ಸಂಬಂಧ ಎಲ್ಲಾರೂ ಸೇರಿ ಚರ್ಚೆ ಮಾಡಿ ಒಬ್ಬರ ಹೆಸರು ಅಂತಿಮಮಾಡಿ ವರಿಷ್ಠರಿಗೆ ಕೊಟ್ಟಿದ್ದೇವೆ. ಪಕ್ಷದ ಕೆಲಸಕ್ಕೆ ಯಾರು ಹೆಚ್ಚು ಸಮಯ ಕೊಡುತ್ತಾರೋ ಅಂತಹ ವ್ಯಕ್ತಿಯ ಹೆಸರನ್ನು ಕೊಡಲಾಗಿದೆ. ಬೆಳಗಾವಿ ಮತ್ತು ಚಿಕ್ಕೋಡಿ ಎರಡೂ ಅಧ್ಯಕ್ಷರ ಬದಲಾವಣೆ ಮಾಡುತ್ತೇವೆ ಎಂದರು. ಬೆಳಗಾವಿ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಸಚಿವೆ ಲಕ್ಷ್ಮಿ ಹೆಬ್ಬಾಳಕರ ಅವರ ಪುತ್ರ ಮೃಣಾಲ್ ಹೆಸರು ಕೇಳಿ ಬರುತ್ತಿರುವ ಕುರಿತು ಪ್ರತಿಕ್ರಿಯಿಸಿ ಈ ರೀತಿ ಯಾವುದೇ ಚರ್ಚೆ ಆಗಿಲ್ಲ, ಒಂದೇ ಹೆಸರು ಕೊಟ್ಟಿದ್ದೇವೆ. ಪಕ್ಷ ಸಂಘಟನೆಗೆ ಹೆಚ್ಚು ಸಮಯ ನೀಡಬೇಕು. ಅಧ್ಯಕ್ಷರಾದವರು ಕಾಂಗ್ರೆಸ್ ಕಚೇರಿಯಲ್ಲಿ ಹೆಚ್ಚು ಇರಬೇಕು. ಕಾರ್ಯಕರ್ತರ ಜೊತೆಗೆ ನಿರಂತರ ಸಂಪರ್ಕ ಹೊಂದಿರಬೇಕು. ಇದೇ ಮಾನದಂಡವಾಗಿದೆ. ಇದನ್ನು ಗಮನದಲ್ಲಿಟ್ಟುಕೊಂಡು ಸಾಮಾನ್ಯ ಕಾರ್ಯಕರ್ತರಿಗೆ ಜಿಲ್ಲಾಧ್ಯಕ್ಷ ಸ್ಥಾನ ಕೊಡಿಸಲು ಪ್ರಯತ್ನಿಸುತ್ತೇವೆ ಎಂದು ಹೇಳಿದರು.



## ಸಿ.ಟಿ ರವಿ ವಿರುದ್ಧ ಎಫ್‌ಐಆರ್ ದಾಖಲು

• ಉದಯವಾಹಿನಿ, ಬೆಂಗಳೂರು

ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣ ಸಂಬಂಧ ಬಿಜೆಪಿಯಿಂದ ಪೋಸ್ಟರ್ ಅಭಿಯಾನವನ್ನು ಆರಂಭಿಸಲಾಗಿತ್ತು. ಬೆಂಗಳೂರಿನ ಹಲವೆಡೆ ಗೋಡೆಗಳಿಗೆ ಬಿಜೆಪಿಯಿಂದ ಪೋಸ್ಟರ್ ಕೂಡ ಅಂಟಿಸಲಾಗಿತ್ತು. ಈ ಹಿನ್ನಲೆಯಲ್ಲಿ ಪರಿಷತ್ ಸದಸ್ಯ ಸಿ.ಟಿ ರವಿ, ಎನ್.ರವಿಕುಮಾರ್ ಸೇರಿದಂತೆ 13 ಜನರ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಬಿಜೆಪಿಯಿಂದ ಪೋಸ್ಟರ್ ಅಭಿಯಾನ ನಡೆಸಲಾಗಿತ್ತು.

ಈ ಹಿನ್ನಲೆಯಲ್ಲಿ ಪಿಎಸ್‌ಐ ಶಶಿಧರ ವಣ್ಣೂರ ಅವರು ನೀಡಿದಂತ ದೂರಿನ ಹಿನ್ನಲೆಯಲ್ಲಿ ಬೆಂಗಳೂರಿನ ಹೈಗ್ರೌಂಡ್ ಪೊಲೀಸ್ ಠಾಣೆಯಲ್ಲಿ ಸಿ.ಟಿ ರವಿ ಸೇರಿದಂತೆ 13 ಜನರ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

# ನಾವಿರೋದೇ ನಿಮ್ಮ ರಾಜೀನಾಮೆ ಕೊಡಿಸೋದಕ್ಕೆ, ನಾವ್ಯಾಕೆ ಬಟ್ಟೆ ಹರಿದುಕೊಳ್ಳೋಣ?

● ಸುಪಾರಿ ಕೊಟ್ಟಂಥ ಇಷ್ಟು ದೊಡ್ಡ ಆರೋಪ ಯಾವ ಸಚಿವರ ಮೇಲೂ ಬಂದಿಲ್ಲ ● ಆರೋಪ ಮುಕ್ತನಾಗುವವರೆಗೆ ಸಚಿವನಾಗಿರಬೇಡ

• ಉದಯವಾಹಿನಿ, ಬೆಂಗಳೂರು

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ತಮ್ಮ ಮಗನಿಗೆ ಬುದ್ಧಿ ಹೇಳಲಿ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ್ ಅವರು ಆಗ್ರಹಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಎಐಸಿಸಿ ಅಧ್ಯಕ್ಷರೇ ನೀವಾ ದರೂ ಬುದ್ಧಿ ಹೇಳಿ. ಸುಪಾರಿ ಕೊಟ್ಟಂಥ ಇಷ್ಟು ದೊಡ್ಡ ಆರೋಪ ಯಾವ ಸಚಿವರ ಮೇಲೂ ಬಂದಿಲ್ಲ; ಆರೋಪ ಮುಕ್ತನಾಗುವವರೆಗೆ ನೀನು (ಪ್ರಿಯಾಂಕ ಖರ್ಗೆ) ಸಚಿವನಾಗಿ ಮುಂದುವರೆಯಬೇಡ ಎಂದು ನಿಮ್ಮ ಮಗನಿಗೆ ನೀವಾದರೂ ಬುದ್ಧಿ ಹೇಳಿ ಎಂಬುದಾಗಿ ಮಲ್ಲಿಕಾರ್ಜುನ ಖರ್ಗೆಯವರನ್ನು ಒತ್ತಾಯಿಸಿದರು. ಸುಪಾರಿ ಕೊಡುವ ಸಚಿವ ಪ್ರಿಯಾಂಕ ಖರ್ಗೆಯವರನ್ನು ನೀವು ಹೇಗೆ ಸಚಿವ ಸಂಪುಟದಲ್ಲಿ ಇಟ್ಟುಕೊಳ್ಳುತ್ತೀರಿ ಸಿದ್ದರಾಮಯ್ಯನವರೇ? ಎಂದರಲ್ಲದೆ, ಭ್ರಷ್ಟಾಚಾರಕ್ಕಾಗಿ ಹಿಂಸಿಸಿ ಸಾವಿಗೆ ಪ್ರೇರಣೆ ಆಗಿದ್ದು, ಅದರಲ್ಲಿ ನೇರ ವಾಗಿ ಸಚಿವರೇ ಭಾಗಿಯಾಗಿದ್ದಾರೆ. ಸುಪಾರಿ ಕೊಟ್ಟಿದ್ದಕ್ಕೆ ಬೆನ್ನಿಗೆ ನಿಂತರ ಸುಪಾರಿ ಕೊಟ್ಟಿದ್ದೀರೆಂದೇ ಅರ್ಥ ಸಂವಿಧಾನದ ಬಗ್ಗೆ ಮಾತನಾಡುವ ಖರ್ಗೆ, ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷರ ಮಗ ಸುಪಾರಿಯಲ್ಲಿ ಭಾಗವಹಿಸಿದ್ದಾರೆ ಎಂದರೆ, ಇವರು ಸಚಿವರಾಗಿ ಒಂದು ಕ್ಷಣವೂ ಇರಬಾರದು ಎಂದು ಆಗ್ರಹಿಸಿದರು. ಬಟ್ಟೆ ಹರಿದುಕೊಂಡರೂ ರಾಜೀನಾಮೆ ಕೊಡುವುದಿಲ್ಲ ಎಂದು ಪ್ರಿಯಾಂಕ್ ಖರ್ಗೆಯವರು ಹೇಳಿದ್ದು ನಿಮಗಾಗಿ ನಾವ್ಯಾಕೆ ಬಟ್ಟೆ ಹರಿದುಕೊಳ್ಳೋಣ ಎಂದು ಕೇಳಿದರು. ನಾವಿರೋದೇ ನಿಮ್ಮನ್ನು ರಾಜೀನಾಮೆ ಕೊಡಿಸೋದಕ್ಕೆ ಎಂದು ಸವಾಲು ಹಾಕಿದರು. ಸರ್ವಖಾತೆಯ ಸಚಿವರು, ಎಲ್ಲಾ ವಿಚಾರದಲ್ಲಿ ಮೂಗು ತೂರಿಸುವ ಸಚಿವರಾದ ಪ್ರಿಯಾಂಕ್ ಖರ್ಗೆಯವರು ಯಾವ ಕಾರಣಕ್ಕೂ ರಾಜೀನಾಮೆ ಕೊಡುವುದಿಲ್ಲ ಎಂದು ಘೋಷಿಸಿದ್ದಾರೆ. ಒಂದು ನಾಯಿ ಕುಂಟುತ್ತ ನಡೆದರೆ ಅದರ ಬಗ್ಗೆ ಮಾತನಾಡುವ ಸಚಿವ, ಒಬ್ಬ ವ್ಯಕ್ತಿ ರೈಲ್ವೆ ಹಳಿಗೆ ತಲೆ ಕೊಟ್ಟು ಆತ್ಮಹತ್ಯೆ ಮಾಡಿಕೊಂಡರೆ ಅದರ ಬಗ್ಗೆ ಮಾತನಾಡುವ ಮನುಷ್ಯತ್ವವನ್ನು ಯಾಕೆ ಕಳಕೊಂಡರು ಎಂದು ಪ್ರಶ್ನಿಸಿದರು. ಪ್ರಿಯಾಂಕ್ ಖರ್ಗೆಯವರು ನಾನ್ಯಾಕ್ರಿ ರಾಜೀನಾಮೆ ಕೊಡಲಿ? ನನ್ನ ಹೆಸರು ಅದರಲ್ಲಿ ಉಲ್ಲೇಖಿಸಿದ್ದಾರಾ ಎಂದು ಕೇಳಿದ್ದಾರೆ.

ಎಲ್ಲದರಲ್ಲಿ ಮೂಗು ತೂರಿಸುವ ಕೆಲಸದ ಒತ್ತಡದಲ್ಲಿ ಸಚಿನ್ ಪಾಂಚಾಳ ಅವರ ಡೆತ್ ನೋಟನ್ನು ವ್ಯವಧಾನದಿಂದ ಓದುವ ತಾಳ್ಮೆಯೂ ಅವರಿಗೆ ಇರಲಾರದು ಎಂದು ತಿಳಿಸಿದರು.

ಡೆತ್ ನೋಟಿನಲ್ಲಿ ಈ ರಾಜ್ಯ ಸರಕಾರದ ಭ್ರಷ್ಟಾಚಾರ ಬಯಲಾಗಿದೆ. ಸುಪಾರಿ ಕೊಡುವಂಥವರು ಈ ಸಚಿವ ಸಂಪುಟದ ಒಳಗಿದ್ದಾರೆ ಎಂಬುದು ಈ ಡೆತ್ ನೋಟಿನಲ್ಲಿ ಬಹಿರಂಗವಾಗಿದೆ. ಭ್ರಷ್ಟಾಚಾರದ ಕುರಿತಾಗಿ ಇಷ್ಟು ಪರ್ಸೆಂಟ್ ಕಮಿಷನ್ ಕೊಡಬೇಕೆಂದು ಹೇಳಿದ್ದಕ್ಕೆ ನಾನು ಹಣ ಹೊಂದಿಸಿದೆ. ಉಳಿದ ದುಡ್ಡಿಗಾಗಿ ಹಿಂಸಿಸಿದ್ದರು. ಜೀವ ಬೆದರಿಕೆ ಹಾಕಿದ್ದರು. ಜೀವ ಬೆದರಿಕೆ ಹಾಕಲು ಬೆನ್ನಿಗೆ ಯಾರು ನಿಂತರು ಎಂದು ಪ್ರಶ್ನಿಸಿದರು. ಮನೆಗೆ ನುಗ್ಗಿ ಬಾಕಿ ದುಡ್ಡಿಗಾಗಿ ಬೆದರಿಕೆ ಹಾಕಲು ಹಿಂದೆ ನಿಂತ ಸಚಿವ ಯಾರು ಎಂದು ಪ್ರಶ್ನೆಯನ್ನು ಮುಂದಿಟ್ಟರು. ಡೆತ್ ನೋಟಿನಲ್ಲಿ ಅವರು ಮಾನ್ಯ ಮಂತ್ರಿಗಳು (ಅಂದರೆ ಇದೇ ಪ್ರಿಯಾಂಕ್ ಖರ್ಗೆಯವರು) ಅಂದು ಇಜಾಜ್ ಹುಸೇನ್ ಅವರಿಗೆ ಟೆಂಡರ್ ಮಾಡಿಕೊಡು ಎಂದಿದ್ದಾರೆ. ಅದರ ಹಿನ್ನೆಲೆಯಲ್ಲೇ ಬೆದರಿಕೆ ಹಾಕಲಾಗಿದೆ ಎಂದು ವಿಶ್ಲೇಷಿಸಿದರು. ವಸೂಲಿಗೆ ಹೋದ ಆರೋಪಿ ಹಿಂದೆ ಪ್ರಿಯಾಂಕ ಖರ್ಗೆ ಇದ್ದಾರೆಂದೇ ಡೆತ್ ನೋಟಿನ ಅರ್ಥ. ಭ್ರಷ್ಟಾಚಾರ ಆಗಿದ್ದು, ಆ ಆತ್ಮಹತ್ಯೆಗೆ ಪ್ರಿಯಾಂಕ ಖರ್ಗೆ ನೇರ ಕಾರಣ ಎಂದು ಆರೋಪಿಸಿದರು.

**ಈತನ ಬೆನ್ನಿಗೆ ಮಾನ್ಯ ಮಂತ್ರಿಗಳು ಬೆಂಬಲವಾಗಿದ್ದಾರೆ**

ಸುಪಾರಿ ಕೊಟ್ಟು, ಕೊಲೆ ಮಾಡಿಸುವುದು ಇಡೀ ದೇಶ ಬೆಚ್ಚಿ ಬೀಳಿಸುವ ಸುದ್ದಿ ಯಾರ್ಯಾರಿಗೆ ಸುಪಾರಿ ಕೊಟ್ಟಿದ್ದೀರಿ? ಲಿಂಗಾಯತ ಸಮುದಾಯದ ಸ್ವಾಮೀಜಿ, ದಲಿತ ಸಮುದಾಯದ ಶಾಸಕ, ದಲಿತ ಮುಖಂಡ, ಬಿಜೆಪಿ ಜಿಲ್ಲಾಧ್ಯಕ್ಷರನ್ನು ಕೊಲೆ ಮಾಡಲು ಸುಪಾರಿ ಕೊಟ್ಟಿದ್ದೀರಲ್ಲವೇ ಈ ಸರಕಾರದಲ್ಲಿ ಎಂದು ಕೇಳಿದರು. ಆಂದೋಲ ಸ್ವಾಮಿ, ಚಂದು ಪಾಟೀಲ್, ಮಣಿಕಂಠ ರಾಠೋಡ, ಬಸವರಾಜ ಮತ್ತಿಮೂಡ ಇವರನ್ನು ಕೊಲೆ ಮಾಡಲು ಸಂಚು ರೂಪಿಸಲಾಗಿದೆ, ಸುಪಾರಿ ಕೊಡಲಾಗಿದೆ. ಈತನ ಬೆನ್ನಿಗೆ ಮಾನ್ಯ ಮಂತ್ರಿಗಳು ಬೆಂಬಲವಾಗಿದ್ದಾರೆ ಎಂದು ತಿಳಿಸಿದ್ದು, ಪ್ರಿಯಾಂಕ ಖರ್ಗೆ ನೇರವಾಗಿ ಸುಪಾರಿಯಲ್ಲಿ ಭಾಗವಹಿಸಿದಂತೆ ಆಗಿಲ್ಲವೇ ಎಂದು ಪ್ರಶ್ನೆಯನ್ನು ಮುಂದಿಟ್ಟರು.



**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹7,800/Gram24ct ₹7,150/Gram22ct ಬೆಳ್ಳಿ: ₹90.50/Gram



**ಸಿದ್ಧಸೂಕ್ತಿ**

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ಪೂಜಾ ಸ್ಥಳ ಸಮೀಕ್ಷೆ ತಪ್ಪಲ್ಲ

ಪೂಜಾ ಸ್ಥಳಗಳ ಕಾಯ್ದೆ 1991 ರ ಸಿಂಧುತ್ವದ ಬಗ್ಗೆ ತಾನು ತೀರ್ಮಾನ ಕೈಗೊಳ್ಳುವವರೆಗೆ ಅಧೀನ ನ್ಯಾಯಾಲಯಗಳು ಧಾರ್ಮಿಕ ಸ್ಥಳಗಳ ಸಮೀಕ್ಷೆಗೆ ಆದೇಶಿಸುವಂತಿಲ್ಲ ಎಂದು ಇತ್ತೀಚೆಗೆ ಸುಪ್ರೀಂ ಕೋರ್ಟ್ ಸೂಚಿಸಿದೆ. ಇದರರ್ಥ ಸಮೀಕ್ಷೆಯನ್ನು ಮಾಡಲೇಬಾರದೆಂತಲ್ಲ. ಪೂಜಾ ಸ್ಥಳಗಳ ಸದ್ಯದ ಸ್ವರೂಪವನ್ನು ಬದಲಾಯಿಸುವ ಬದಲಾಯಿಸದಿರುವ ವಿಷಯ ಬೇರೆ. ಆದರೆ ಅದರ ಇತಿಹಾಸವನ್ನು ಅರಿಯುವ ಸಮೀಕ್ಷೆ ತಪ್ಪಲ್ಲ. ಇತಿಹಾಸವು ಭವಿಷ್ಯವನ್ನು ರೂಪಿಸುತ್ತದೆ. ಇಂಥ ಸಮೀಕ್ಷೆ ಯಾವುದೇ ಒಂದು ನಿರ್ದಿಷ್ಟ ಧಾರ್ಮಿಕ ಪೂಜಾ ಸ್ಥಳಕ್ಕೆ ಸಂಬಂಧಿಸಿದ್ದಲ್ಲ. ಮಂದಿರಗಳನ್ನು ನಾಶಪಡಿಸಿದ, ಮಂದಿರಗಳನ್ನು ಮಸೀದಿಯಾಗಿಸಿದ ಪ್ರಕರಣಗಳು ಮಾತ್ರವಲ್ಲದೇ, ಮಸೀದಿ ಚರ್ಚ್ ಗಳನ್ನು ನಾಶಪಡಿಸಿದ, ಅವುಗಳನ್ನು ಮಂದಿರವಾಗಿಸಿದ ಪ್ರಕರಣಗಳೂ ಸಮೀಕ್ಷೆಗೊಳಪಡುತ್ತವೆ. ಇದರಿಂದ ಮತಕ್ಕಾಗಿ ಒಂದು ವರ್ಗದ ಜನರ ಪ್ರತಿ ನಡೆಗೆ ಪರ ನಿಲುವು ತಾಳುವ, ಮತ್ತೊಂದು ವರ್ಗದ ಜನರ ಪ್ರತಿ ನಡೆಗೆ ವಿರೋಧ ತೋರುವವರ ನೈಜತೆ ಇಡೀ ಸಮಾಜಕ್ಕೆ ಅರಿವಾಗುತ್ತದೆ. ಜನರು ಯಾವ ನಿಲುವನ್ನು ತಾಳಬೇಕೆಂಬುದಕ್ಕೆ ಅನುವಾಗುತ್ತದೆ.

ಉದಯವಾಹಿನಿ ಚಿತ್ರ



• ಉದಯವಾಹಿನಿ, ಬೆಂಗಳೂರು

**ಬಿಬಿಎಂಪಿ ಕೇಂದ್ರ ಕಛೇರಿಯಲ್ಲಿ ಆಡಳಿತಗಾರರಾದ ಉಮಾಶಂಕರ್ ಐ.ಎ.ಎಸ್.ರವರಿಗೆ ನೂತನ ವರ್ಷದ ಶುಭ ದಿನದಂದು ಮುಖ್ಯ ಸಾರ್ವಜನಿಕ ಸಂಪರ್ಕಧಿಕಾರಿ ಸುರೇಶ್ ಲಿಂಗಯ್ಯರವರು, ಸಾರ್ವಜನಿಕ ಸಂಪರ್ಕಧಿಕಾರಿ ಈರಣ್ಣ ಬೋರವತ್, ಸಹಾಯಕ ಸಾರ್ವಜನಿಕ ಸಂಪರ್ಕ ಅಧಿಕಾರಿ ಸಿದ್ಧಲಿಂಗೇಶ್ ಭಜಂತ್ರಿ, ರವಿಕುಮಾರ್ ರವರು ಹೂಗುಚ್ಛ ನೀಡಿ ಹೊಸವರ್ಷದ ಶುಭ ಕೋರಿದರು.**

# ಕೇಂದ್ರದ ವಿರುದ್ಧ ರಾಜ್ಯ ಸರ್ಕಾರ ಜಿಎಸ್‌ಟಿ ಸಮರಕ್ಕೆ ಸಿದ್ಧ

### 18% ಜಿಎಸ್‌ಟಿಯಿಂದಾಗಿ ವಸತಿ ಇಲಾಖೆ ಜನಪರ ಯೋಜನೆಗಳಿಗೆ ಹಿನ್ನಡೆ: ವಕ್ಫ್ ಖಾತೆ ಸಚಿವ ಜಮೀರ್ ಅಹ್ಮದ್‌ಖಾನ್

• ಉದಯವಾಹಿನಿ, ಬೆಂಗಳೂರು

ಕೇಂದ್ರದ ವಿರುದ್ಧ ರಾಜ್ಯ ಸರ್ಕಾರ ಜಿಎಸ್‌ಟಿ ಸಮರಕ್ಕೆ ಸಿದ್ಧವಾಗಿದೆ. ಜಿಎಸ್‌ಟಿ ತೆರವು ಮಾಡುವಂತೆ ಕೋರಿ ಹೋರಾಟ ನಡೆಸಲು ಚಿಂತನೆ ನಡೆಸಿದೆ. ಈ ಬಗ್ಗೆ ವಸತಿ ಸಚಿವ ಜಮೀರ್ ಅಹ್ಮದ್ ಪ್ರತಿಕ್ರಿಯಿಸಿದ್ದಾರೆ. 18 % ಜಿಎಸ್‌ಟಿಯಿಂದಾಗಿ ವಸತಿ ಇಲಾಖೆ ಜನಪರ ಯೋಜನೆಗಳಿಗೆ ಹಿನ್ನಡೆ ಉಂಟಾಗಿದೆ. ವಸತಿ ಯೋಜನೆಗಳಿಗೆ ಜನರಿಂದ ಸೂಕ್ತ ಸ್ಪಂದನೆ ಸಿಗುತ್ತಿಲ್ಲ. ಹೀಗಾಗಿ ರಾಜೀವ್ ಕೊಳಗೇರಿ ಸೇರಿದಂತೆ ಹಲವು ವಸತಿ ಯೋಜನೆಗಳು ಬಾಕಿ ಉಳಿದಿವೆ. ಸುಲಭ ಕಂತಿನಲ್ಲೂ ಸಿಗುವ ಮನೆ ಖರೀದಿಯಿಂದ ಬಲಹೀನ ವರ್ಗ ದೂರ ಉಳಿದಿದೆ.


ಈ ಹಿನ್ನಲೆಯಲ್ಲಿ ಕೇಂದ್ರಕ್ಕೆ ಮನವಿ ಸಲ್ಲಿಸಲು ತಯಾರಿ ಮಾಡಿಕೊಳ್ಳಲಾಗಿದೆ. ಟಿಬಿ ಜಯಚಂದ್ರ, ಜಮೀರ್ ಅಹ್ಮದ್ ಶೀಘ್ರವೇ ಪ್ರಧಾನಿ ಮೋದಿಯವರನ್ನು ಭೇಟಿ ಮಾಡಲಿದ್ದಾರೆ. ಬೆಂಗಳೂರಿನ 450 ಸೇರಿದಂತೆ ರಾಜ್ಯದಲ್ಲಿ 2800ಕ್ಕೂ ಹೆಚ್ಚು ಕೊಳೆಗೇರಿ ಪ್ರದೇಶಗಳಿವೆ. ರಾಜ್ಯ ದಲ್ಲಿರುವ ಕೊಳೆಗೇರಿ ನಿವಾಸಿಗಳಿಗೆ 6 ತಿಂಗಳೊಳಗೆ ಹಕ್ಕುಪತ್ರ ನೀಡಲಾಗುವುದು. ನಿಮ್ಹಾನ್ಸ್‌ನೊಳಗಿನ ಪ್ರದೇಶವನ್ನು ಕೊಳೆಗೇರಿ ಅಭಿವೃದ್ದಿ ಮಂಡಳಿಗೆ ನೀಡಿದರೆ ಹಕ್ಕುಪತ್ರ ನೀಡಲಾಗುವುದು, ಎಂದು ಭರವಸೆ ನೀಡಿದರು. ಕೊಳೆಗೇರಿ ಪ್ರದೇಶಗಳಲ್ಲಿ ಖಾಸಗಿ ಸಹಭಾಗಿತ್ವದಲ್ಲಿ ಬಹುಮಹಡಿ ಕಟ್ಟಡ ನಿರ್ಮಿಸಿ, ಅಲ್ಲಿನ ನಿವಾಸಿಗಳಿಗೆ ನೀಡುವ ಯೋಜನೆ ಕುರಿತು ಸರಕಾರ ಚಿಂತನೆ ನಡೆಸಿದೆ. ಯಾವುದೇ ಕೆಲಸವನ್ನು ಕಪ್ಪು ಪಟ್ಟಿಯಲ್ಲಿರುವ ಗುತ್ತಿಗೆದಾರರಿಗೆ ನೀಡುವುದಿಲ್ಲ. ಸಾದರಮಂಗಲದ ಒಂದು ಎಕರೆ ಪ್ರದೇಶವನ್ನು ಖಾಸಗಿಯವರು ಒತ್ತುವರಿ ಮಾಡಿದ್ದಾರೆ ಎಂಬ ದೂರು ಬಂದಿದೆ. ಒಂದು ವಾರದಲ್ಲಿ ಸರ್ವೆ ಮಾಡಿ, ವರದಿ ಬಂದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು, ಎಂದು ಭರವಸೆ ನೀಡಿದರು.

ಕೊಳೆಗೇರಿ ಅಭಿವೃದ್ಧಿಗೆ ಸರಕಾರ 50 ಕೋಟಿ ರೂ. ನೀಡು ತ್ತಿದೆ. ಸ್ಲಂ ಪ್ರದೇಶಗಳನ್ನು ಅಭಿ ವೃದ್ಧಿಪಡಿಸುವುದು ಕಷ್ಟ. ಆದ್ದರಿಂದ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ 500 ಕೋಟಿ ರೂ.ಹಾಗೂ ಕೇಂದ್ರ ಸರಕಾರಕ್ಕೆ 3600 ಕೋಟಿ ರೂ. ಅನುದಾನ ಕೋರಿ ಮನವಿ ಮಾಡಲಾಗಿದೆ.

ಸ್ಲಂಗಳ ಸಮಸ್ಯೆಯನ್ನು ನನ್ನ ಅವಧಿಯಲ್ಲಿ ಬಗೆಹರಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ, ಎಂದರು.

**ಕೊಳೆಗೇರಿಗಳ ಅಭಿವೃದ್ಧಿಗೆ 3600 ಕೋಟಿ ರೂ. ನೆರವು ಕೋರಿಕೆ**

**ಕೊಳೆಗೇರಿ ಪ್ರದೇಶಗಳ ಅಭಿವೃದ್ಧಿಗಾಗಿ ಕೇಂದ್ರದಿಂದ 3600 ಕೋಟಿ ರೂ. ನೆರವು ಕೋರಲಾಗಿದ್ದು, ಖಾಸಗಿ ಸಹಭಾಗಿತ್ವದಲ್ಲಿ ಕೊಳೆಗೇರಿ ಪ್ರದೇಶಗಳಲ್ಲಿ ಬಹುಮಹಡಿ ಕಟ್ಟಡ ನಿರ್ಮಾಣ ಮಾಡಲಾಗುವುದು ಎಂದು ವಸತಿ ಸಚಿವ ಬಿ.ಝಡ್ ಜಮೀರ್ ಅಹ್ಮದ್ ಖಾನ್ ತಿಳಿಸಿದರು. ಕೊಳೆಗೇರಿ ಪ್ರದೇಶಗಳಿಗೆ ಮೂಲಸೌಲಭ್ಯ, ಹಕ್ಕುಪತ್ರ ವಿತರಣೆ, ಕಾವೇರಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವಂತೆ ಭೀಮ ಸಂಘಟನೆಗಳ ಒಕ್ಕೂಟ, ಕರ್ನಾಟಕ ಸಾಮರಸ್ಯ ಸಮಿತಿಯಿಂದ ಮನವಿ ಸಲ್ಲಿಸಲಾಯಿತು. ಮನವಿ ಪತ್ರ ಸ್ವೀಕರಿಸಿದ ಅವರು ಈ ಭರವಸೆ ನೀಡಿದರು.**



**ನಾನಾ ವಸತಿ ಯೋಜನೆಗಳಡಿ ಬಡವರಿಗೆ ನಿರ್ಮಿಸುವ ಮನೆಗಳಿಗೆ ಶೇ.18 ತೆರಿಗೆ (ಜಿಎಸ್‌ಟಿ) ವಿಧಿಸುತ್ತಿರುವುದನ್ನು ರದ್ದುಗೊಳಿಸುವಂತೆ ಕೇಂದ್ರವನ್ನು ಕೋರಲು ರಾಜ್ಯ ಸರಕಾರ ನಿರ್ಧರಿಸಿದೆ. 'ಬಡವರ ಮನೆಗಳಿಗೆ ಶೇ.18 ಜಿಎಸ್‌ಟಿ ವಿಧಿಸಲಾಗುತ್ತಿದೆ. ಇದರಿಂದ ಪ್ರತಿ ಮನೆ ನಿರ್ಮಾಣಕ್ಕೆ ಫಲಾನುಭವಿಗಳು ತಲಾ ಒಂದೂವರೆ ಲಕ್ಷ ರೂ. ತೆರಿಗೆ ಪಾವತಿಸಬೇಕಿದೆ. ಆರ್ಥಿಕವಾಗಿ ದುರ್ಬಲರಾಗಿರುವವರಿಗೆ ಇದು ಹೊರೆಯಾಗಿದೆ. ಈ ಸಂಬಂಧ ಶೀಘ್ರದಲ್ಲಿಯೇ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗುವುದು**

**-ಜಮೀರ್ ಅಹ್ಮದ್ ಖಾನ್ ವಕ್ಫ್ ಖಾತೆ ಸಚಿವ**

**ವಸತಿಗೆ ಜಿಎಸ್‌ಟಿ ರದ್ದು ಪಡಿಸಲು ಮನವಿ**

## ಆಚಾರ್ಯ ಶ್ರೀರಾಕುಂ ಅಂಧ ಮಕ್ಕಳ ಶಾಲೆಯಲ್ಲಿ ಹೊಸ ವರ್ಷ ಆಚರಣೆ

• ಉದಯವಾಹಿನಿ, ಬೆಂಗಳೂರು

ಆಚಾರ್ಯ ರಾಕುಂ ಅಂಧರ ಶಾಲೆಯಲ್ಲಿ ನೂತನ ವರ್ಷದ ವರ್ಷಾಚರಣೆ ಮತ್ತು ನಿವೃತ್ತ ಐ.ಪಿ.ಎಸ್ ಅಧಿಕಾರಿ ಬಿ.ಎನ್.ಎಸ್.ರೆಡ್ಡಿರವರಿಗೆ ಅಭಿನಂದನಾ ಸಮಾರಂಭ. ರಾಕುಂ ಸ್ವಾಮೀಜಿರವರು, ಇಂಡಿಯನ್ ಆಯಿಲ್ ರಾಜ್ಯ ಪ್ರಧಾನ ವ್ಯವಸ್ಥಾಪಕ ಸಿದ್ದಾರ್ಥ ಅಗರವಾಲ್, ಬಿ.ಎನ್.ಎಸ್ ರೆಡ್ಡಿ ಡಿಜಿಪಿ ನಿವೃತ್ತ ಮತ್ತು ಐ.ಎನ್.ಟಿ.ಯು.ಸಿ.ಅಧ್ಯಕ್ಷರಾದ ಲಕ್ಷ್ಮಿ ವೆಂಕಟೇಶ್ ರವರು ಅಂಧ ಮಕ್ಕಳ ಜೊತೆಯಲ್ಲಿ ಕೇಕ್ ಕತ್ತರಿಸಿ ಹೊಸ ವರ್ಷದ ಆಚರಣೆ ಮಾಡಿದರು.

ಇದೇ ಸಂದರ್ಭದಲ್ಲಿ ರಾಕುಂ ಸ್ವಾಮೀಜಿರವರು ಮಾತನಾಡಿ ಮಾನವೀಯತೆ ಇರುವವರು ಎಲ್ಲರು ಶ್ರೀಮಂತರೆ. ಬಡತನ ಎಂಬುದು ಶಾಪವಲ್ಲ ಅದು ವರ ಎಂದು ಭಾವಿಸಿ ಜೀವನದಲ್ಲಿ ಸಾಧನೆ ಮಾಡಿದಾಗ ಜೀವನದಲ್ಲಿ ಯಶ್ವಸಿಯಾಗಲು ಸಾಧ್ಯ. ಶ್ರೀಮಂತರ ಬಳಿ ಹಣವಿರಬಹುದು ಸಹಾಯ ಮಾಡುವ ಮನೋಸ್ಥಿತಿ ಇರಬೇಕು.

ವಿದ್ಯೆ,ಹಣ, ಸಂಪತ್ತು ಎಲ್ಲರಿಗೂ ಸಮಾನ ಹಂಚಿಕೆಯಾಗಬೇಕು. ಬಡತನ ನಿವಾರಣೆಯಾಗಬೇಕಾದರೆ ಒಬ್ಬರಿಗೆ, ಒಬ್ಬರು ಸಹಕಾರ, ಸಹಾಯ ಮಾಡುವ ಮೂಲಕ ಸಮ ಸಮಾಜ ನಿರ್ಮಾಣ ಮಾಡಬೇಕು ಎಂದು ಹೇಳಿದರು.

ಸಿದ್ದಾರ್ಥ ಅಗರವಾಲ್ ರವರು ಮಾತನಾಡಿ ದೇಶದ ಏಳಿಗೆ ಮತ್ತು ಸಮಾಜದಲ್ಲಿ ಉತ್ತಮ ಕಾರ್ಯಗಳಿಗೆ ಇಂಡಿಯನ್ ಆಯಿಲ್ ಸಹಕಾರ ನೀಡುತ್ತಿದೆ. ಶಿಕ್ಷಣ, ಕ್ರೀಡೆ ಮತ್ತು ಸಾಮಾಜಿಕ ಕಾರ್ಯಗಳಿಗೆ ಇಂಡಿಯನ್ ಆಯಿಲ್ ಸಂಸ್ಥೆಯು ಸಹಕಾರ, ಸಹಾಯ ಹಸ್ತ ನೀಡುತ್ತಾ ಬಂದಿದೆ ಎಂದು ಹೇಳಿದರು. ಅಂಧ ಮಕ್ಕಳಿಂದ ಭರತನಾಟ್ಯ, ಗೀತೆ ಗಾಯನ, ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.



ಉದಯವಾಹಿನಿ ಚಿತ್ರ

**ಶಿಕ್ಷಣ ಎಂಬುದು ಶಕ್ತಿ, ವಿದ್ಯಾವಂತರಾದರೆ ಸಮಾಜದಲ್ಲಿ ಗೌರವ ಮಾನ್ಯತೆ ಸಿಗುತ್ತದೆ. ಯಾವುದೇ ಕೆಲಸವಾಗಲಿ ಮೇಲು ಕೀಳು ಎಂಬುದು ಇಲ್ಲ, ಶ್ರದ್ದೆಯಿಂದ ಕೆಲಸ ಮಾಡಬೇಕು. ಸಮಾಜದಲ್ಲಿ ಇರುವ ಎಲ್ಲಾ ಮಕ್ಕಳಿಗೆ ಸಮಾನ ಶಿಕ್ಷಣ ಸಿಗಬೇಕು ಆಗ ಸಮಾಜ, ದೇಶ ಅಭಿವೃದ್ದಿ ಸಾಧ್ಯ**

**-ಬಿ.ಎನ್.ಎಸ್.ರೆಡ್ಡಿ**

ಉದಯವಾಹಿನಿ ಚಿತ್ರ




## ಜಾತಿ ತಾರತಮ್ಯ ಆರೋಪ: ಐಐಎಂಬಿ ನಿರ್ದೇಶಕರ ವಿರುದ್ಧ ತನಿಖೆ, ವಿಚಾರಣೆಗೆ ಹೈಕೋರ್ಟ್ ತಡೆ

• ಉದಯವಾಹಿನಿ, ಬೆಂಗಳೂರು

ಪರಿಶಿಷ್ಟ ಜಾತಿಗೆ ಸೇರಿದ ಪ್ರಾಧ್ಯಾಪಕರೊಬ್ಬರಿಗೆ ಜಾತಿ ಆಧರಿಸಿ ತಾರತಮ್ಯ ಮಾಡಿದ ಆರೋಪ ಸಂಬಂಧ ಬೆಂಗಳೂರಿನ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ (ಐಐಎಂಬಿ) ನಿರ್ದೇಶಕ ಹೃಷಿಕೇಶ್ ಟಿ. ಕೃಷ್ಣನ್, ಇತರೆ ಏಳು ಮಂದಿ ವಿರುದ್ಧ ಎಫ್‌ಐಆರ್, ತನಿಖೆಗೆ ಹೈಕೋರ್ಟ್ ಮಂಗಳವಾರ ತಡೆ ನೀಡಿದೆ.

ಐಐಎಂಬಿ ಮಾರ್ಕೆಟಿಂಗ್ ವಿಭಾಗದ ಪ್ರಾಧ್ಯಾಪಕ ಗೋಪಾಲ್ ದಾಸ್ ನೀಡಿದ ದೂರು ಆಧರಿಸಿ ಮೈಕೋ ಲೇಔಟ್ ಪೊಲೀಸರು ತಮ್ಮ ವಿರುದ್ಧ ದಾಖಲಿಸಿರುವ ಎಫ್‌ಐಆರ್ ರದ್ದು ಕೋರಿ ಐಐಎಂಬಿ ನಿರ್ದೇಶಕ ಹೃಷಿಕೇಶ್ ಟಿ. ಕೃಷ್ಣನ್, ಡೀನ್ ದಿನೇಶ್ ಕುಮಾರ್ ಸೇರಿದಂತೆ ಎಂಟು ಮಂದಿ ಆರೋಪಿಗಳು ಸಲ್ಲಿಸಿದ್ದ ಅರ್ಜಿ ಪರಿಶೀಲಿಸಿದ ನ್ಯಾಯಮೂರ್ತಿ ಹೇಮಂತ್ ಚಂದನಗೌಡ್ ಅವರಿದ್ದ ರಜಾಕಾಲದ ನ್ಯಾಯಪೀಠ, ಈ ಮಧ್ಯಂತರ ಆದೇಶ ಮಾಡಿದೆ. ಅಲ್ಲದೆ, ಅರ್ಜಿ ಸಂಬಂಧ ಮೈಕೋ ಲೇಔಟ್ ಠಾಣಾ ಪೊಲೀಸರು ಮತ್ತು ದೂರುದಾರ ಗೋಪಾಲ್ ದಾಸ್‌ಗೆ ನೋಟಿಸ್ ಜಾರಿ ಮಾಡಿ ವಿಚಾರಣೆ ಮುಂದೂಡಿತು.

ಪರಿಶಿಷ್ಟ ಜಾತಿಗೆ ಸೇರಿದ ಐಐಎಂಬಿ ಮಾರ್ಕೆಂಟಿಂಗ್ ವಿಭಾಗದ ಸಹ ಪ್ರಾಧ್ಯಾಪಕರಾಗಿ ಕೆಲಸ ಮಾಡುತ್ತಿರುವ ಗೋಪಾಲ್‌ದಾಸ್, ಐಐಎಂಬಿ ನಿರ್ದೇಶಕ ರಿಷಿಕೇಶ್ ಕೃಷ್ಣನ್, ಡೀನ್ ದಿನೇಶ್ ಕುಮಾರ್ ಸೇರಿ ಐಐಎಂಬಿಯ ಒಟ್ಟು 8 ಮಂದಿ ಉದ್ದೇಶಪೂರ್ವಕವಾಗಿ ತನ್ನ ಜಾತಿ ಪ್ರಚಾರ ಮಾಡುತ್ತಿದ್ದಾರೆ. ಕೆಲಸದ ವಾತಾವರಣದಲ್ಲಿ ಸಮಾನ ಅವಕಾಶ ನೀಡದೆ ಜಾತಿ ಭೇದ-ವೈಷಮ್ಯ ಮಾಡುತ್ತಾ ಮಾನಸಿಕ ಕಿರುಕುಳ ನೀಡುತ್ತಿದ್ದಾರೆ. ಕೆಲಸದ ಸ್ಥಳದಲ್ಲಿ ಅಡಚಣೆ ಉಂಟು ಮಾಡಿ ಬೆದರಿಕೆ ಹಾಕುತ್ತಿದ್ದಾರೆ, ಎಂದು ಆರೋಪಿಸಿದ್ದರು.

## ಬಯೋಕಾನ್ ಕಂಪನಿಯ ಜೂನಿಯರ್ ಎಕ್ಸಿಕ್ಯೂಟಿವ್ ಆತ್ಮಹತ್ಯೆಗೆ ಶರಣು

• ಉದಯವಾಹಿನಿ, ಬೆಂಗಳೂರು

ಕಳೆದ ಕೆಲವು ದಿನಗಳ ಹಿಂದೆ ಬೆಂಗಳೂರಿನಲ್ಲಿ ಟೆಕ್ಕಿ ಅತುಲ್ ಸುಭಾಷ್ ಪತ್ನಿಯ ಕಿರುಕುಳಕ್ಕೆ ಮನನೊಂದು ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆಗೆ ಶರಣಾಗಿದ್ದರು. ಈ ಒಂದು ಘಟನೆ ಮಾಸುವ ಮುನ್ನವೇ ಬುಧವಾರ ಬೆಂಗಳೂರಿನಲ್ಲಿ ಮತ್ತೋರ್ವ ಯುವತಿ ಆತ್ಮಹತ್ಯೆ ಮಾಡಿಕೊಂಡಿದ್ದು ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಮಲ್ಲಸಂದ್ರದಲ್ಲಿ ನಡೆದಿದೆ. ಆತ್ಮಹತ್ಯೆಗೆ ಶರಣಾಗಿರುವ ಯುವತಿಯನ್ನು ರುಚಿತಾ (25) ಎಂದು ತಿಳಿದು ಬಂದಿದೆ.

ರುಚಿತಾ ಬಯೋಕಾನ್ ಕಂಪನಿಯ ಜೂನಿಯರ್ ಎಕ್ಸಿಕ್ಯೂಟಿವ್ ಆಗಿ ಕೆಲಸ ಮಾಡುತ್ತಿದ್ದಳು. ಬೆಂಗಳೂರಿನ ಮಲ್ಲಸಂದ್ರದಲ್ಲಿ ಮನೆಯಲ್ಲಿ ನೇಣು ಬಿಗಿದುಕೊಂಡು ರುಚಿತ ಆತ್ಮಹತ್ಯೆಗೆ ಶರಣಾಗಿದ್ದಾಳೆ. ಆತ್ಮಹತ್ಯೆ ಮಾಡಿಕೊಂಡ ರುಚಿತ ಮೂಲತಃ ಆಂಧ್ರದ ಅನಂತಪುರ ಜಿಲ್ಲೆಯ ಬೆಸ್ತರಹಳ್ಳಿ ನಿವಾಸಿ ಎಂದು ತಿಳಿದು ಬಂದಿದ್ದು, ಘಟನೆ ಸಂಬಂಧ ಬಾಗಲಕುಂಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಆತ್ಮಹತ್ಯೆ ಮಾಡಿಕೊಂಡ ರುಚಿತಾ ತಂದೆ ತಾಯಿ ಬಟ್ಟೆ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದರು. ಈ ವೇಳೆ ಮಗಳು ಫೋನ್ ಕಾಲ್ ರಿಸೀವ್ ಮಾಡದ ಹಿನ್ನೆಲೆಯಲ್ಲಿ ಅನುಮಾನ ಕೊಂಡು ಮನೆಗೆ ಆಗಮಿಸಿದ್ದಾರೆ. ಈ ವೇಳೆ ಮಗಳು ರುಚಿತ ಸೀಲಿಂಗ್ ಫ್ಯಾನ್ ಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಪ್ರಕರಣವನ್ನು ದಾಖಲಿಸಿಕೊಂಡ ಬಾಗಲಕುಂಟೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಕೆಎಸ್‌ಆರ್‌ಟಿಸಿಗೆ ಬರೋಬ್ಬರಿ 9 ರಾಷ್ಟ್ರ ಮಟ್ಟದ ಪ್ರಶಸ್ತಿ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ಹೆಮ್ಮೆಯ KSRTCಗೆ ಪ್ರಶಸ್ತಿಗಳ ಸರಮಾಲೆ ಮುಂದುವರೆದಿದೆ. ಈಗಾಗಲೇ ಹಲವು ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡಿದ್ದಂತ ಕೆ ಎಸ್ ಆರ್ ಟಿಸಿ ಇದೀಗ 9 ರಾಷ್ಟ್ರ ಮಟ್ಟದ ಪ್ರಶಸ್ತಿಗಳನ್ನು ತನ್ನದಾಗಿಸಿಕೊಂಡಿದೆ. ಈ ಕುರಿತಂತೆ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿಯನ್ನು ನಿಗಮ ಹಂಚಿಕೊಂಡಿದ್ದು, ಕೆಎಸ್‌ಆರ್‌ಟಿಸಿ ಗೆ 9 ರಾಷ್ಟ್ರ ಮಟ್ಟದ ಪ್ರಶಸ್ತಿ ಗಳನ್ನು ಪಡೆದಿದೆ. ಅವುಗಳಲ್ಲಿ 6 ಚಿನ್ನದ ಪ್ರಶಸ್ತಿ, 2 ಹಾಗೂ 1 PRSI ರಾಷ್ಟ್ರೀಯ ಪ್ರಶಸ್ತಿ-2024 ಸೇರಿವೆ ಎಂದಿದೆ. ಪ್ರಶಸ್ತಿಗಳು ಈ ಕೆಳಗಿನ ವಿಭಾಗಗಳಲ್ಲಿ ಲಭಿಸಿರುತ್ತದೆ ಎಂದು ಹೇಳಿದೆ.

1. ಅಶ್ವಮೇಧ ಕ್ಲಾಸಿಕ್ ಬಸ್ಸುಗಳ ಪರಿಚಯ- ಪರಿಣಾಮಕಾರಿ ಸಾರ್ವಜನಿಕ ಸಂಪರ್ಕ ಉಪಕ್ರಮ
2. ಅಂಬಾರಿ ಉತ್ಸವ ಬಸ್ ಅತ್ಯುತ್ತಮ ಬ್ರಾಂಡ್ ಅನುಭವ.
3. ಅಶ್ವಮೇಧ ಕ್ಲಾಸಿಕ್ ಬಸ್ಸುಗಳು- ಅತ್ಯುತ್ತಮ ಕಾರ್ಪೊರೇಟ್ ಸಂವಹನ ಹಾಗೂ ನಿರ್ವಹಣೆ
4. ಪಲ್ಲಕ್ಕಿ ಬಸ್ಸುಗಳ - ಅತ್ಯುತ್ತಮ ಗ್ರಾಹಕ ಸ್ವೀಕೃತಿ
5. ಪ್ರತಿಷ್ಠಿತ ಬಸ್ಸು ಸೇವೆಗಳ ಬ್ರಾಂಡಿಂಗ್- ಅತ್ಯುತ್ತಮ ಸಾರ್ವಜನಿಕ ಸಂಪರ್ಕ
6. ಅಶ್ವಮೇಧ ಕ್ಲಾಸಿಕ್ ಬಸ್ಸುಗಳು- ವರ್ಷದ ಅತ್ಯುತ್ತಮ ಬ್ರಾಂಡ್ ನಿಗಮವು ಅತ್ಯುತ್ತಮ ಪರಿಸರ ನಿರ್ವಹಣೆ ಹಾಗೂ ವಿನೂತನ ಮಾನವ ಸಂಪನ್ಮೂಲ ಯೋಜನೆಗಳ ಅನುಷ್ಠಾನಕ್ಕಾಗಿ ಗೋ ಕೇರ್ ಇಂಡಿಯಾ ಪ್ರಶಸ್ತಿ ಎರಡು ವಿಭಾಗದಲ್ಲಿ ಪಡೆದಿರುತ್ತದೆ. PRSI ರಾಷ್ಟ್ರೀಯ ಪ್ರಶಸ್ತಿಯನ್ನು ನಿಗಮಕ್ಕೆ ಕಾರ್ಪೊರೇಟ್ ಚಿತ್ರ ವಿಭಾಗದಲ್ಲಿ ಲಭಿಸಿರುತ್ತದೆ.

ನಿಗಮಕ್ಕೆ AdWorld ಪ್ರಶಸ್ತಿಗಳನ್ನು ನವದೆಹಲಿಯಲ್ಲಿ ಗೋ ಕೇರ್ ಇಂಡಿಯಾ ಪ್ರಶಸ್ತಿಗಳನ್ನು ಗೋವಾದಲ್ಲಿ, ಪಿ.ಆರ್.ಎಸ್.ಐ ಪ್ರಶಸ್ತಿಯನ್ನು ರಾಯಪುರದಲ್ಲಿ ಪ್ರದಾನ ಮಾಡಲಾಯಿತು ಎಂದು ತಿಳಿಸಿದೆ.

## ಎಂಜಿ ರಸ್ತೆ ಸುತ್ತಮುತ್ತ 15 ಮೆಟ್ರಿಕ್ ಟನ್ ಕಸ ಸಂಗ್ರಹ

• ಉದಯವಾಹಿನಿ, ಬೆಂಗಳೂರು

ನಗರದ ಪೂರ್ವ ವಲಯ ವ್ಯಾಪ್ತಿಯ ಎಂ.ಜಿ ರಸ್ತೆಯ ಸುತ್ತಮುತ್ತಲಿನ ರಸ್ತೆ/ಪ್ರದೇಶಗಳಲ್ಲಿ ಹೊಸ ವರ್ಷಾರಣೆಯ ಸಂದರ್ಭದಲ್ಲಿ ರಸ್ತೆಗಳಲ್ಲಿ ಬಿದ್ದಿದ್ದ ಸುಮಾರು 15 ಮೆಟ್ರಿಕ್ ಟನ್ ತ್ಯಾಜ್ಯ- ಅನುಪಯುಕ್ತ ವಸ್ತುಗಳನ್ನು ಸಂಗ್ರಹಿಸಲಾಗಿದೆ.

ಪೂರ್ವ ವಲಯ ಆಯುಕ್ತರಾದ ಸ್ನೇಹಲ್, ಬಿಎಸ್‌ಡಬ್ಲ್ಯೂಎಂಎಲ್‌ನ ಮುಖ್ಯ ಪ್ರಧಾನ ವ್ಯವಸ್ಥಾಪಕರಾದ ಬಸವರಾಜ್ ಕಬಾಡೆ ರವರ ನೇತೃತ್ವದಲ್ಲಿ ಹೊಸ ವರ್ಷಾಚರಣೆಯ ಹಿನ್ನೆಲೆ ನಗರದ ಸಿಬಿಡಿ ರಸ್ತೆಗಳಲ್ಲಿ ಬಿದ್ದಿದ್ದ ತ್ಯಾಜ್ಯವನ್ನು ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತ ವಿಭಾಗದ ಮೇಲ್ವಿಚಾರಣೆಯಲ್ಲಿ ಬೆಳಗ್ಗೆಯೊಳಗಾಗಿ ಸಂಪೂರ್ಣ ಸ್ವಚ್ಛತಾ ಕಾರ್ಯವನ್ನು ನಡೆಸಲಾಗಿರುತ್ತದೆ.

ಉದಯವಾಹಿನಿ ಚಿತ್ರ



**ಹೊಸ ವರ್ಷಾಚರಣೆ ಎಫೆಕ್ಟ್**

ಎಂಜಿ ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್, ರಿಸಿಡೆನ್ಸಿ ರಸ್ತೆ, ರಿಚ್‌ಮಂಡ್ ರಸ್ತೆ, ಸೇಂಟ್ ಮಾರ್ಕ್ಸ್ ರಸ್ತೆ, ಕಸ್ತೂರ್ ಬಾ ರಸ್ತೆ, ಸೇರಿದಂತೆ ಮುಂತಾದ ರಸ್ತೆಗಳಲ್ಲಿ ಮುಂಜಾನೆ 3.00ರಿಂದ ಸ್ವಚ್ಛತಾ ಕಾರ್ಯ ಆರಂಭಿಸಿ ಬೆಳಗ್ಗೆ 7.00ರ ವೇಳೆಗೆ ಪೂರ್ಣಗೊಳಿಸಿ ಸುಮಾರು 15 ಮೆ. ಟನ್ ತ್ಯಾಜ್ಯವನ್ನು ಬೀದಿಗಳಿಂದ ತೆರವುಗೊಳಿಸಿ ರಸ್ತೆಗಳನ್ನು ಸ್ವಚ್ಛಗೊಳಿಸಿ ನಾಗರಿಕರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ.

ಸ್ವಚ್ಛತಾ ಕಾರ್ಯವು ಶಾಂತಿನಗರ ವಿಭಾಗದ ಘನತ್ಯಾಜ್ಯ ವಿಭಾಗದಿಂದ ಮಾಡಲಾಗಿದ್ದು, 70ಕ್ಕೂ ಹೆಚ್ಚು ಪೌರಕಾರ್ಮಿಕರು ಸ್ವಚ್ಛತಾ ಕಾರ್ಯವನ್ನು ಮಾಡಿದರು. ಈ ವೇಳೆ ಕಿರಿಯ ಆರೋಗ್ಯ ಅಧಿಕಾರಿಗಳು, ಮಾರ್ಷಲ್ ಗಳು ಮೇಲ್ವಿಚಾರಣೆಯಲ್ಲಿದ್ದು, 25 ಆಟೋ ಟಿಪ್ಪರ್ ಗಳು, 3 ಕಾಂಪ್ಯಾಕ್ಟರ್ ಗಳು ಸ್ಥಳದಲ್ಲಿದ್ದವು. ಸಿಬಿಡಿ ರಸ್ತೆಗಳು ಹಾಗೂ ಪಾದಚಾರಿ ಮಾರ್ಗಗಳಲ್ಲಿ ಎಸೆದಿದ್ದ ಪ್ಲಾಸ್ಟಿಕ್ ಕವರ್, ಪ್ಲಾಸ್ಟಿಕ್ ತ್ಯಾಜ್ಯ, ಚಪ್ಪಲಿಗಳು, ಮಧ್ಯದ ಬಾಟಲಿಗಳು ಸೇರಿದಂತೆ ಇನ್ನಿತರೆ ಅನುಪಯುಕ್ತ ವಸ್ತುಗಳನ್ನು ಬೇರ್ಪಡಿಸಿ ಸಂಗ್ರಸಲಾಗಿದೆ. ಪುನರ್ ಬಳಕೆಯ ಸುನಾರು 3 ಟನ್ ತ್ಯಾಜ್ಯವನ್ನು ಒಣ ತ್ಯಾಜ್ಯ ಸಂಗ್ರಹಣಾ ಘಟಕಕ್ಕೆ ಕಳುಹಿಸಲಾಗಿದೆ.

## ಹೊಸ ವರ್ಷದ ಸಂಭ್ರಮಾಚರಣೆಯಲ್ಲಿ ಪ್ರಯಾಣಿಕರಿಗೆ ಬಿಗ್ ಶಾಕ್

• ಉದಯವಾಹಿನಿ, ಬೆಂಗಳೂರು

ಹೊಸ ವರ್ಷದ ಸಂಭ್ರಮಾಚರಣೆಯಲ್ಲಿರುವ ರಾಜ್ಯದ ಜನತೆಗೆ ಇದೀಗ ಸಾರಿಗೆ ಇಲಾಖೆ ಬಿಗ್ ಶಾಕ್ ನೀಡಲು ಮುಂದಾಗಿದೆ. ಸಂಕ್ರಾಂತಿ ಬಳಿಕ KSRTC ಬಸ್ ಟಿಕೆಟ್ ದರ ಏರಿಕೆಯಾಗುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ. ಹೌದು ಈ ಕುರಿತಂತೆ ಈಗಾಗಲೇ ಈ ಹಿಂದೆ ಶೇ. 25 ರಷ್ಟು ಟಿಕೆಟ್ ದರ ಏರಿಕೆಗೆ ಎಲ್ಲಾ ಸಾರಿಗೆ ನಿಗಮಗಳು ಮನವಿ ಮಾಡಿದ್ದವು. ಶೇ.25 ರಷ್ಟು ಅಲ್ಲದಿದ್ದರೂ, ಅದರ ಅರ್ಧದಷ್ಟು ಏರಿಕೆಯಾಗುವ ಸಾಧ್ಯತೆ ಇದೆ ಎಂದು ಬಲ್ಲ ಮೂಲಗಳಿಂದ ತಿಳಿದುಬಂದಿದೆ.ಸಂಕ್ರಾಂತಿ ನಂತರ ಟಿಕೆಟ್ ದರದ ಬಗ್ಗೆ ಸರ್ಕಾರ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ. ಸಿಎಂ ಜೊತೆ ಸಾರಿಗೆ ನೌಕರರ ಸಂಘಟನೆಗಳ ಸಭೆಯಲ್ಲಿ ಪ್ರಸ್ತಾಪವಾಗಬಹುದು ಎನ್ನಲಾಗಿದೆ.

ಪೆಟ್ರೋಲ್-ಡೀಸೆಲ್ ದರ ಹಾಗೂ ಬಿಡಿ ಭಾಗಗಳ ದರ ಏರಿಕೆಯಾಗಿದೆ. ಆದರೆ, ಕಳೆದ ನಾಲ್ಕೈದು ವರ್ಷದಿಂದ ಟಿಕೆಟ್ ದರ ಏರಿಕೆ ಮಾಡಿಲ್ಲ. ಇಂಧನ ದರ ನಾಲ್ಕೈದು ವರ್ಷದಲ್ಲಿ ಏರಿಕೆಯಾಗುತ್ತಲೇ ಬಂದಿದೆ. ಅದಕ್ಕೆ ಅನುಗುಣವಾಗಿ ಟಿಕೆಟ್ ದರ ಏರಿಕೆಗೆ ನಾಲ್ಕೂ ನಿಗಮಗಳು ಮನವಿ ಮಾಡಿದ್ದವು. ಹಾಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಜೊತೆ ಸಾರಿಗೆ ನೌಕರರ ಸಂಘಟನೆಗಳ ಸಭೆಯಲ್ಲಿ ಪ್ರಸ್ತಾಪಿಸಿ ಸಂಕ್ರಾಂತಿ ಬಳಿಕ ಕೆಎಸ್‌ಆರ್‌ಟಿಸಿ ಬಸ್ ದರ ಏರಿಕೆ ಆಗುವ ಸಾಧ್ಯತೆ ಇದೆ ಎನ್ನಲಾಗಿದೆ.

## ದಿನೇಶ್ ಗುಂಡೂರಾವ್, ಲಕ್ಷ್ಮಿ ಹೆಬ್ಬಾಳ್ಕರ್ ರಾಜೀನಾಮೆಗೆ ಆಗ್ರಹ

• ಉದಯವಾಹಿನಿ, ಬೆಂಗಳೂರು

ಬಾಣಂತಿಯರ ಸಾವನ್ನು ತಡೆಯಲು ವಿಫಲರಾದ ಸಚಿವರಾದ ದಿನೇಶ್ ಗುಂಡೂರಾವ್, ಲಕ್ಷ್ಮಿ ಹೆಬ್ಬಾಳ್ಕರ್ ಅವರು ರಾಜೀನಾಮೆ ಕೊಡಬೇಕೆಂದು ಬಿಜೆಪಿ ರಾಜ್ಯ ಮಹಿಳಾ ಮೋರ್ಚಾ ಅಧ್ಯಕ್ಷೆ ಕು.ಮಂಜುಳಾ ಅವರು ಆಗ್ರಹಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಬುಧವಾರ ಮಾಧ್ಯ ಮದವರ ಜೊತೆ ಮಾತನಾಡಿದ ಅವರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಅವರು ಬಾಣಂತಿಯರ ಸಾವನ್ನು ತಡೆಯುವುದರಲ್ಲಿ ಸಂಪೂರ್ಣ ವಿಫಲವಾಗಿದ್ದಾರೆ. ಅವರು ರಾಜೀನಾಮೆ ಕೊಟ್ಟು ಮನೆಗೆ ವಾಪಸ್ ಹೋಗಬೇಕು ಎಂದು ಆಗ್ರಹಿಸಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಇಲ್ಲಿವರೆಗೆ ಬಾಣಂತಿ ಸಾವಿನ ಸಂಬಂಧ ಒಬ್ಬರನ್ನೂ ಭೇಟಿ ಮಾಡಿ ಸಾಂತ್ವನ ಹೇಳಿಲ್ಲ; ಅವರು ಕೂಡ ರಾಜೀನಾಮೆ ಕೊಟ್ಟು ಮನೆಗೆ ವಾಪಸ್ ಹೋಗಬೇಕು ಎಂದು ಒತ್ತಾಯಿಸಿದರು. ಬಾಣಂತಿಯರ ಸಾವನ್ನು ಸರಕಾರ ನಿಲ್ಲಿಸದೆ ಇರುವುದನ್ನು ಖಂಡಿಸಿ ಇಡೀ ರಾಜ್ಯದಲ್ಲಿ ಪ್ರತಿದಿನ 5 ಜಿಲ್ಲೆಗಳಲ್ಲಿ ರಾಜ್ಯ ಮಹಿಳಾ ಮೋರ್ಚಾ ಜಿಲ್ಲಾ ಘಟಕಗಳು ಗುರುವಾರದಿಂದ ಪ್ರತಿಭಟನೆ ನಡೆಸಲಿವೆ ಎಂದ ಅವರು, ಇದೊಂದು ಲಜ್ಜೆಗೆಟ್ಟ ಸರಕಾರ. ಇಲ್ಲಿನವರೆಗೆ ಯಾವುದೇ ಸಚಿವರು ತೆರಳಿ ಭೇಟಿ ಮಾಡುತ್ತಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಮೃತ ಪ್ರತಿ ಬಾಣಂತಿಯ ಕುಟುಂಬಕ್ಕೆ 25 ಲಕ್ಷ ಪರಿಹಾರ ಕೊಡಬೇಕು.

ಮಕ್ಕಳನ್ನು ಈ ಸರಕಾರ ದತ್ತು ಸ್ವೀಕಾರ ಮಾಡಿ, ಅವರಿಗೆ ಆರ್ಥಿಕ- ಸಾಮಾಜಿಕ-ಶೈಕ್ಷಣಿಕ ಭದ್ರತೆಯನ್ನು ಕೊಡಬೇಕೆಂದು ಅವರು ಆಗ್ರಹಿಸಿದರು. ಕರ್ನಾಟಕದ ಕಾಂಗ್ರೆಸ್ ಪಕ್ಷದ ನೇತೃತ್ವದ ರಾಜ್ಯ ಸರಕಾರವು ಹೊಸ ವರ್ಷದಲ್ಲಿ ರಾಜ್ಯದ ಮಹಿಳೆಯರಿಗೆ ಬಾಣಂತಿಯರ ಸಾವಿನ ಗ್ಯಾರಂಟಿಯನ್ನು ಕೊಟ್ಟಿದೆ ಎಂದು ಟೀಕಿಸಿದರು.



**ಮೊದಲನೇ ಹೆರಿಗೆ ಸಂಬಂಧ ಕುಷ್ಟಗಿಗೆ ತವರು ಮನೆಗೆ ತೆರಳಿದ್ದ 23 ವರ್ಷದ ಅವರು, ಕುಷ್ಟಗಿ ಆಸ್ಪತ್ರೆಗೆ ತೆರಳಿದ್ದು ಅಲ್ಲಿಂದ ಜಿಲ್ಲಾಸ್ಪತ್ರೆಗೆ ಕಳಿಸಿದ್ದರು ಎಂದರಲ್ಲದೆ, ಇದೇನಾ ಸಿದ್ದರಾಮಯ್ಯರ ಸರಕಾರದ ಸಾವಿನ ಗ್ಯಾರಂಟಿ ಎಂದು ಪ್ರಶ್ನಿಸಿದರು. ಇದೊಂದು ಹೃದಯವಿದ್ರಾವಕ ಘಟನೆ. ನಾವೆಲ್ಲ ನೋವು ಅನುಭವಿಸುವಂತಾಗಿದೆ ಎಂದರು.**

## ತಾಯಿಗೆ ಮಕ್ಕಳಿಂದ ಪಾದಪೂಜೆ ವಿನೂತನವಾಗಿ ಹೊಸ ವರ್ಷ ಆಚರಣೆ

• ಉದಯವಾಹಿನಿ, ಬೆಂಗಳೂರು



ಬೆಂಗಳೂರು ಹೊರವಲಯ ನೆಲಮಂಗಲದ ದಾಸನಪುರದ ಅಡ್ವಾರ್ಡ್ ಶಾಲೆಯಲ್ಲಿ ವಿನೂತನವಾಗಿ ಹೊಸವರ್ಷ ಆಚರಣೆ ಮಾಡಲಾಗಿದೆ. ಮಕ್ಕಳಿಂದ ಹೆತ್ತ ತಾಯಿಗೆ ಪಾದ ಪೂಜೆ ಮಾಡುವ ಮೂಲಕ 2025ರನ್ನು ಸ್ವಾಗತಿಸಲಾತಿತು.

ಈ ವೇಳೆ ಗೋಮಾತೆ ಹಾಗೂ ಪುಟಾಣಿ ಮಕ್ಕಳಿಗೆ ಪಾದ ಪೂಜೆ ಮಾಡಿ ಫಲತಾಂಭೂಲ ನೀಡಲಾಯಿತು.ಶಾಲೆಯ ಸಂಸ್ಥಾಪಕ ರಾಜಣ್ಣ ಕುಟುಂಬದವರು ಮಕ್ಕಳ ಪಾದಪೂಜೆ ಮಾಡಿದರು. ಹಿಂದೂ ಧರ್ಮದ ಪ್ರಕಾರ ನಮ್ಮ ಭರತ ದೇಶದಲ್ಲಿ ಆಧ್ಯಾತ್ಮಿಕವಾಗಿದ್ದು ಪೂಜೆ ಪುರಸ್ಕಾರಕ್ಕೆ ಆಧ್ಯತೆ ನೀಡಿ ಸಂಭ್ರಮ ಮಾಡಲಾಗಿದೆ ಎಂದು ರಾಜಣ್ಣ ತಿಳಿಸಿದರು.

## ಮದ್ಯದ ಅಮಲಿನಲ್ಲಿ ತಹಸೀಲ್ದಾರ್‌ಗೆ ಕಿರುಕುಳ ಡಾಬಾ ರಾಜಣ್ಣ ಪುತ್ರ ಪೊಲೀಸ್ ವಶಕ್ಕೆ

• ಉದಯವಾಹಿನಿ, ಬೆಂಗಳೂರು

ಮದ್ಯದ ಅಮಲಿನಲ್ಲಿ ರಿಯಲ್ ಎಸ್ಟೇಟ್ ಉದ್ಯಮಿ ಪುತ್ರ ಕಿರಿಕ್ ಮಾಡಿದ್ದು, ಕುಣಿಗಲ್ ತಹಸೀಲ್ದಾರ್ ರಶ್ಮಿ ಕಾರಿಗೆ ಅಡ್ಡ ಬಂದು ಪುಂಡಾಟ ಮೆರೆದಿದ್ದಾನೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕಿನ ಲ್ಯಾಂಕೋ ಟೋಲ್ ಬಳಿ ಈ ಒಂದು ಘಟನೆ ನಡೆದಿದೆ. ನೆಲಮಂಗಲದ ಉದ್ಯಮಿ ಡಾಬಾ ರಾಜಣ್ಣ ಪುತ್ರ ರವಿ ಗೌಡನಿಂದ ಈ ಒಂದು ಕೃತ್ಯ ನಡೆದಿದೆ. ರವಿಗೌಡನ ಪುಂಡಾಟ ನೋಡಿ ತಕ್ಷಣ 112ಕ್ಕೆ ಕರೆ ಮಾಡಿ ತಹಶೀಲ್ದಾರ್ ರಶ್ಮಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಸ್ಥಳಕ್ಕೆ ಆಗಮಿಸಿದ ಪೊಲೀಸರು ರವಿ ಗೌಡನನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ತಹಶೀಲ್ದಾರ್ ರಶ್ಮಿ ಕುಣಿಗಲ್ ನಿಂದ ಬೆಂಗಳೂರಿಗೆ ಬರುತ್ತಿದ್ದಾಗ ನೆಲಮಂಗಲದಲ್ಲಿ ರವಿಗೌಡ ಈ ಕೃತ್ಯ ಎಸಗಿದ್ದಾನೆ.

ಆರೋಪಿ ರವಿ ಗೌಡಗೆ ಸೇರಿದ ಕಾರನ್ನು ಇದೀಗ ನೆಲಮಂಗಲ ಠಾಣೆ ಪೋಲೀಸರು ಸೀಜ್ ಮಾಡಿದ್ದಾರೆ ಡಿಫೆಕ್ಟಿವ್ ನಂಬರ್ ಪ್ಲೇಟ್ ಬಳಸುತ್ತಿದ್ದ.

ತಮ್ಮ ಕಾರಿಗೆ ಟೆಂಟೆಡ್ ಗ್ಯಾಸ್ ಬಳಸಿ ಆರೋಪಿ ರವಿ ಗೌಡ ಅಡ್ಡಾಡುತ್ತಿದ್ದ ಸರ್ಕಾರಿ ಕಾರಿಗೆ ಅಡ್ಡ ಬಂದು ಕರ್ತವ್ಯಕ್ಕೆ ಅಡ್ಡಿಪಡಿಸಿದ ಆರೋಪದ ಹಿನ್ನೆಲೆಯಲ್ಲಿ ಮಧ್ಯ ಸೇವಿಸಿ ಕಾರು ಚಲಾವಣೆ ಸೇರಿದಂತೆ ಹಲವು ಪ್ರಕರಣ ದಾಖಲಾಗಿದೆ. ನೆಲಮಂಗಲದ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ರವಿಗೌಡನ ವಿರುದ್ಧ ಪ್ರಕರಣ ದಾಖಲಾಗಿದೆ.

# ಬೆಂಗಳೂರಿನಲ್ಲಿ ಪೋಸ್ಟರ್ ಅಂಟಿಸುವ ಆಂದೋಲನ

### ರಾಜೀನಾಮೆ ನೀಡುವುದಿಲ್ಲ ಎಂಬ ಉದ್ಧಟತನ ಬದಿಗಿಡಿ, ನಮ್ಮ ಹೋರಾಟ ನಿಲ್ಲಲ್ಲ: ಪ್ರಿಯಾಂಕ್ ಖರ್ಗೆಗೆ ಬಿಜೆಪಿ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣದ ಹಿನ್ನೆಲೆಯಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆ ಕೊಡಬೇಕೆಂದು ಆಗ್ರಹಿಸಿ ಬಿಜೆಪಿಯಿಂದ ನಗರದಲ್ಲಿ ಪೋಸ್ಟರ್ ಅಂಟಿಸುವ ಆಂದೋಲನ ನಡೆಸಲಾಯಿತು.

ಕೊಲೆಗಡುಕ ಸರಕಾರಕ್ಕೆ ಧಿಕ್ಕಾರ, ನೀತಿಗೆಟ್ಟ ಸರಕಾರಕ್ಕೆ ಧಿಕ್ಕಾರ, ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ಧಿಕ್ಕಾರ ಮುಂತಾದ ಘೋಷಣೆ ಕೂಗಲಾಯಿತು. ವಿಧಾನ ಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಧಿಸ್ವಾಮಿ, ಪಕ್ಷದ ರಾಜ್ಯ ಮುಖ್ಯ ವಕ್ತಾರ ಅಶ್ವತ್ಥನಾರಾಯಣ್, ವಿಧಾನ ಪರಿಷತ್ ಸದಸ್ಯರಾದ ಎನ್.ರವಿಕುಮಾರ್, ಸಿ.ಟಿ.ರವಿ, ಮುಖಂಡರಾದ ಜಗದೀಶ್ ಹಿರೇಮನಿ, ಉಮೇಶ್ ಶೆಟ್ಟಿ, ಮಾಧ್ಯಮ ಪ್ರಕೋಷ್ಠದ ರಾಜ್ಯ ಸಂಚಾಲಕ ಕರುಣಾಕರ ಖಾಸಲೆ, ಸಹ ಸಂಚಾಲಕ ಪ್ರಶಾಂತ ಕೆಡೆಂಜಿ ಭಾಗವಹಿಸಿದ್ದರು.

ಪೋಸ್ಟರ್ ಅಂಟಿಸುವ ಅಭಿಯಾನದಲ್ಲಿ ತೊಡಗಿದ್ದವರನ್ನು ವಶಕ್ಕೆ ತೆಗೆದುಕೊಂಡ ಪೊಲೀಸರು ನಂತರ ಬಿಡುಗಡೆ ಮಾಡಿದರು. ಸುಪಾರಿ, ಹನಿಟ್ಯ್ರಾಪ್ ಸಹ ಲಿಂಕ್ ನಂತರ ಸುದ್ದಿಗಾರರ ಜತೆ ಮಾತನಾಡಿದ ವಿಧಾನಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾನ್ಯ ಸಚಿವರೇ ನಿಮ್ಮ ಬಟ್ಟೆ ಹರಿದುಕೊಂಡರೂ ರಾಜೀನಾಮೆ ನೀಡುವುದಿಲ್ಲ ಎಂಬ ಉದ್ಧಟತನ ಮಾತು ಬದಿಗಿಡಿ. ನಿಮ್ಮನ್ನು ಟಾರ್ಗೆಟ್ ಮಾಡಿ ಬಿಜೆಪಿಗೆ ಏನೂ ಆಗಬೇಕಾಗಿಲ್ಲ. ನಿಮ್ಮ ಬಟ್ಟೆ ಹರಿಯಲು ನಾವು ಬರುವುದಿಲ್ಲ, ಎಂದು ವಾಗ್ದಾಳಿ ನಡೆಸಿದರು. ನಾವೂ ಬಟ್ಟೆ ಹರಿದುಕೊಳ್ಳುವುದಿಲ್ಲ. ನಾವು ನ್ಯಾಯ ಕೇಳುತ್ತಿದ್ದೇವೆ. ತೀರ್ಮಾನ ನಿಮಗೆ ಬಿಟ್ಟಿದ್ದು. ನಮ್ಮ ಹೋರಾಟ ನಿಲ್ಲುವುದಿಲ್ಲ, ಎಂದು ಎಚ್ಚರಿಸಿದರು.

ಸಚಿನ್ ಪ್ರಾಣತ್ಯಾಗ ಯಾಕಾಗಿದೆ ಸುಪಾರಿ ಕೊಟ್ಟಿರುವುದು, ಹನಿಟ್ರ್ಯಾಪ್ ವಿಷಯವೂ ಜತೆಗಿದ್ದು, ಇದು ಗಂಭೀರ ಸ್ವರೂಪದ ಪ್ರಕರಣ. ಸುಪಾರಿಯಲ್ಲಿ ಮಹಾರಾಷ್ಟ್ರದ ಸೊಲ್ಲಾಪುರದವರ ಹೆಸರುಗಳಿವೆ, ಎಂದರು.

ಪ್ರಕರಣದ ಹಿಂದೆ ಪ್ರಿಯಾಂಕ್ ಖರ್ಗೆಯವರ ಎಡಗೈ, ಬಲಗೈ ಜನರೇ ಇದ್ದಾರೆ. ಹೆದರಿಕೆಯಿಂದಿರುವ ಪ್ರಿಯಾಂಕ್, ಮುತ್ತಿಗೆ ಹಾಕುವವರ ಅಡ್ರೆಸ್ ಕೊಡಿ. ಎಷ್ಟು ಜನ ಬರುವುದಾಗಿ ಹೇಳಿ ಕಳಿಸಿ. ಕಾಫಿ, ಟೀ ವ್ಯವಸ್ಥೆ ಮಾಡುತ್ತೇನೆ ಎನ್ನುತ್ತಾರೆ. ಇದು ಉದ್ಧಟತ ನವಲ್ಲದೇ ಬೇರೇನು ಇವರ ಮನೆಯಲ್ಲಿಸಂಬಂಧ ಮಾಡಲು ಯಾರಾದರೂ ಬರುತ್ತಾರಾ ಪ್ರತಿಪಕ್ಷದಲ್ಲಿದ್ದಾಗ ಪ್ರಶ್ನಿಸುವುದು ನಮ್ಮ ಹಕ್ಕು. ಉತ್ತರ ಹೇಗೆ ಕೊಡಬೇಕೆಂದು ಗೊತ್ತಾಗದಿದ್ದರೆ ಬೇರೆಯ ವರನ್ನು ಕೇಳಿ ತಿಳಿದುಕೊಳ್ಳಬಹುದು, ಎಂದು ತರಾಟೆಗೆ ತೆಗೆದುಕೊಂಡರು.

**ವಿಶ್ವಕರ್ಮ ಸಮಾಜದ ಪ್ರತಿಭಟನೆ ಬಿಜೆಪಿ ಬೆಂಬಲ:** ಕಲಬುರಗಿ ಹಿಂದುಳಿದ ವರ್ಗದ ಸಚಿನ್ ಪಾಂಚಾಳ ಅವರ ಹತ್ಯೆ ಖಂಡಿಸಿ ಕುಟುಂಬಕ್ಕೆ ನೆರವು ನೀಡಬೇಕು ಎಂದು ಆಗ್ರಹಿಸಿ ನಗ ರದಲ್ಲಿ ವಿಶ್ವಕರ್ಮ ಸಮಾಜದಿಂದ ಜ.1ರಂದು ನಡೆಯಲಿರುವ ಬೃಹತ್ ಪ್ರತಿಭಟನೆಗೆ ಬಿಜೆಪಿ ಒಬಿಸಿ ಮೋರ್ಚಾ ಬೆಂಬಲ ನೀಡಲಿದೆ ಎಂದು ಮೋರ್ಚಾ ಪ್ರಧಾನ ಕಾರ್ಯ ದರ್ಶಿ ಅವ್ವಣ್ಣ ಮ್ಯಾಕೇರಿ ಹೇಳಿದರು.

ಬೀದರ್ ಜಿಲ್ಲೆಯ ಸಚಿನ ಪಾಂಚಾಳ ಆತ್ಮಹತ್ಯೆ, ಕಲಗುರ್ತಿ ದೇವಾನಂದ ಆತ್ಮಹತ್ಯೆ, ಕಾಳಗಿ ತಾಲ್ಲೂಕಿನ ಕೋಡ್ಲಿಗ್ರಾಮದ ಅಮರ ಆತ್ಮಹತ್ಯೆ, ಆಳಂದ ತಾಲ್ಲೂಕಿನಲ್ಲಿಅಪ್ರಾಪ್ತೆ ಮೇಲೆ ಅತ್ಯಾಚಾರ, ಕೊಲೆ, ಚಿತ್ತಾಪುರದ ಹಾಸ್ಟೆಲ್‌ನಲ್ಲಿ ಆತ್ಮಹತ್ಯೆ, ಸೇಡಂನ ಹಣಮಂತ ಮಡಿವಾಳಗೆ ಕರೆಂಟ್ ಶಾಕ್‌ನಿಂದ ಚಿತ್ರ ಹಿಂಸೆ ಸೇರಿ ಸರಣಿ ಹಿಂಸಾಕೃತ್ಯ ಬಯಲಿಗೆ ಬರುತ್ತಿವೆ. ಇದೀಗ ಒಂದು ಹೆಜ್ಜೆ ಮುಂದೆ ಹೋಗಿ ಆಂದೋಲಾದ ಶ್ರೀ ಸಿದ್ಧಲಿಂಗ ಸ್ವಾಮೀಜಿ, ಶಾಸಕ ಬಸವರಾಜ ಮತ್ತಿಮೂಡ್, ಬಿಜೆಪಿ ಮಹಾನಗರ ಜಿಲ್ಲಾಧ್ಯಕ್ಷ ಚಂದು ಪಾಟೀಲ್, ಮಣಿಕಂಠ ರಾಠೋಡ ಅವರ ಕೊಲೆಗೆ ಸುಫಾರಿ ನೀಡಿರುವ ಸುದ್ದಿ ಹೊರಬಂದಿದೆ.

ಇದೊಂದು ಆತಂಕಕಾರಿ ಸುದ್ದಿಯಾಗಿದ್ದು, ಕೂಡಲೇ ಪ್ರಕರಣವನ್ನು ಸಿಬಿಐ ತನಿಖೆಗೆ ಒತ್ತಾಯಿಸಬೇಕು ಎಂದು ಒತ್ತಾಯಿಸಿದರು.

ಉದಯವಾಹಿನಿ ಚಿತ್ರ




**ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣ ವಿಚಾರವಾಗಿ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಬಿಜೆಪಿ ನಾಯಕರು ಒತ್ತಾಯಿಸುತ್ತಿದ್ದಾರೆ. ಪ್ರಿಯಾಂಕ್ ಖರ್ಗೆ ರಾಜೀನಾಮೆ ಕೊಡಬೇಕೆಂದು ಆಗ್ರಹಿಸಿ ಪೋಸ್ಟರ್ ಅಂಟಿಸುವ ಆಂದೋಲನ ನಡೆಸಿದರು. ನಾನು ರಾಜೀನಾಮೆ ಕೊಡುವುದಿಲ್ಲ ಎನ್ನುವ ಉದ್ದಟತನ ಬದಿಗಿಟ್ಟು, ನೈತಿಕ ಹೊಣೆ ಹೊತ್ತು ರಾಜೀನಾಮೆ ಕೊಡಿ**

**-ಛಲವಾದಿ ನಾರಾಯಣ ಸ್ವಾಮಿ ವಿಧಾನ ಪರಿಷತ್ ಪ್ರತಿಪಕ್ಷದ ನಾಯಕ**

- **ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣ : ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಆಗ್ರಹ**
- **ನಾವೂ ಬಟ್ಟೆ ಹರಿದುಕೊಳ್ಳುವುದಿಲ್ಲ. ನಾವು ನ್ಯಾಯ ಕೇಳುತ್ತಿದ್ದೇವೆ'**

ಉದಯ ವಾಹಿನಿ

ಪ್ರಾದೇಶಿಕ

ಗುರುವಾರ 02 ಜನವರಿ 2025 | 03

# ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ನಾಳೆ ರೈತರ ಪ್ರತಿಭಟನೆ

## ರಸ್ತೆಯಲ್ಲಿ ಹೆಚ್ಚಾಗಿ ಜನಸಂದಣಿ, ತುರ್ತು ಪರಿಸ್ಥಿತಿಯಲ್ಲಿ ಬರುವ ಆಂಬ್ಯುಲೆನ್ಸ್‌ಗಳಿಗೆ ಜಾಗವಿಲ್ಲದೆ ಪರದಾಟ, ಜನಸಾಮಾನ್ಯರಿಗೆ ತೊಂದರೆ

• ಉದಯವಾಹಿನಿ, ಶ್ರೀನಿವಾಸಪುರ

ಕೆಸಿವ್ಯಾಲಿ ಮೂರನೇ ಹಂತದ ಶುದ್ಧೀಕರಣ ಮಾಡಿ ಒತ್ತುವರಿಯಾಗಿರುವ ಸರ್ಕಾರಿ ಆಸ್ತಿಗಳನ್ನು ತೆರವುಗೊಳಿಸಲು ವಿಶೇಷ ನ್ಯಾಯಾಲಯ ಸ್ಥಾಪನೆ ಮಾಡಿ ಅವರೆಕಾಯಿ ವಹಿವಾಟಿಗೆ ಸೂಕ್ತ ಜಾಗ ಗುರುತಿಸಲು ಆಗ್ರಹ ಪಡಿಸಿ ಜ.3ರ ಶುಕ್ರವಾರ ಖಾಲಿ ಬಿಂದಿಗೆಗಳು, ಅವರೆಕಾಯಿ ಸಮೇತ ತಾಲ್ಲೂಕು ಕಚೇರಿ ಮುಂದೆ ಹೋರಾಟ ಮಾಡಲು ತೋಟಗಾರಿಕೆ ಆವರಣದಲ್ಲಿ ಕರೆದಿದ್ದ ರೈತಸಂಘದ ಮುಖಂಡರು ತೀರ್ಮಾನಿಸಿದರು.

ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ ಸುದ್ದಿಗಾರರೊಂದಿಗೆ ನಗರದ ಎಂಜಿ ರಸ್ತೆಯಲ್ಲಿ ನಡೆಯುತ್ತಿರುವ ಅವರೇಕಾಯಿ ವಹಿವಾಟನ್ನು ಕೃಷಿ ಉತ್ಪನ್ನ ಮಾರುಕಟ್ಟೆ ಇಲ್ಲವೇ ಸೂಕ್ತ ಜಾಗವನ್ನು ಗುರುತಿಸುವಲ್ಲಿ ತಾಲ್ಲೂಕು ಆಡಳಿತ ನಗರ ಸಭೆ ವಿಫಲವಾಗಿದೆ. ಕಳೆದ 3 ತಿಂಗಳ ರೈತರ ಕಷ್ಟ



ಉದಯವಾಹಿನಿ ಚಿತ್ರ

ಮೂರೇ ನಿಮಿಷದಲ್ಲಿ ವ್ಯಾಪಾರಸ್ಥರು ಹರಾಜು ಹಾಕಿ ರೈತರ ಶೋಷಣೆ ಮಾಡುತ್ತಿದ್ದರೂ ಸಮಸ್ಯೆ ಗಂಭೀರವಾಗಿ ಏಕೆ ಪರಿಗಣಿಸುತ್ತಿಲ್ಲ.

ರಸ್ತೆಯಲ್ಲಿ ಹೆಚ್ಚಾಗಿ ಜನಸಂದಣಿ, ತುರ್ತು ಪರಿಸ್ಥಿತಿಯಲ್ಲಿ ಬರುವ ಆಂಬ್ಯುಲೆನ್ಸ್ ಗಳಿಗೆ ಜಾಗವಿಲ್ಲದೆ ಪರದಾಡಿ ಜನಸಾಮಾನ್ಯರಿಗೆ ತೊಂದರೆಯಾಗುತ್ತಿದ್ದು, ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಶಾಶ್ವತ ಪರಿ ಹಾರ ನೀಡಬೇಕೆಂದು ತಾಲ್ಲೂಕು ಆಡಳಿತವನ್ನು ಒತ್ತಾಯಿಸಿದರು.

ಜಿಲ್ಲೆಗೆ ಹರಿಯುತ್ತಿರುವ 2ನೇ ಹಂತದ ಶುದ್ಧೀಕರಣದ ಕೆಸಿವ್ಯಾಲಿ ನೀರನ್ನು ಮೂರನೇ ಹಂತದ

> **5 ವರ್ಷಗಳಿಂದ ಜಿಲ್ಲೆಯ ಟೊಮೇಟೊ ಬೆಳೆಗಾರರು ಬೀದಿಗೆ ಬಿದ್ದಿದ್ದಾರೆ. ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ ಬೆಳೆಯುತ್ತಿರುವ ಬೆಳೆಗೆ ಬಾಧಿಸುತ್ತಿರುವ ಸೊಳ್ಳೆ ಊಜಿ, ಬೆಂಕಿ ರೋಗದಿಂದ ಸಂಪೂರ್ಣವಾಗಿ ಬೆಲೆ ಕುಸಿತಕಂಡು ಟೊಮೇಟೊ ಬೆಳೆಗಾರರು ವಿಮುಕ್ತಿ ಹೊಂದುತ್ತಿರುವ ಜೊತೆಗೆ ಕೆಸಿವ್ಯಾಲಿ ನೀರು ಹರಿದ ನಂತರ ಜಿಲ್ಲೆಯ ಬೆಳೆಗಳು ವಿಷಕಾರಿಯಾಗುತ್ತಿವೆ ಎಂದು ಕಳವಳ ವ್ಯಕ್ತ ಪಡಿಸಿದರು.**
> –ತೆರ್ನಹಳ್ಳಿ ಆಂಜಿನಪ್ಪ, ತಾಲ್ಲೂಕು ಅಧ್ಯಕ್ಷ

ಶುದ್ಧೀಕರಣ ಮಾಡುವ ಮುಖಾಂತರ ಜಿಲ್ಲೆಯ ಎಲ್ಲಾ ಕೆರೆಗಳಿಗೆ ಹರಿಸಬೇಕು. ಜೊತೆಗೆ ವಾಣಿಜ್ಯ ಬೆಳೆಗಳಿಗೆ ಬಾಧಿಸುತ್ತಿರುವ ಸೊಳ್ಳೆ ನಿಯಂತ್ರಣಕ್ಕೆ

### ಹಣೆಪಟ್ಟ ನ್ಯಾಯವೇ

**ತೋಟಗಾರಿಕೆ ವಿಜ್ಞಾನಿಗಳ ವರದಿ ರೈತರಿಗೆ ತಲೆನೋವಾಗಿದೆ. ಒಂದು ಕಾಲದಲ್ಲಿ ಇಡೀ ದೇಶಕ್ಕೆ ಹಾಲು, ತರಕಾರಿ, ಚಿನ್ನ ಕೊಟ್ಟಂತಹ ಕೀರ್ತಿಯಿರುವ ಕೋಲಾರ ಜಿಲ್ಲೆಗೆ ವಿಷಕಾರಿ ಅಂಶ ಎಂಬ ಹಣೆಪಟ್ಟ ಕಟ್ಟುತ್ತಿರುವುದು ನ್ಯಾಯವೇ ಎಂದು ವಿಜ್ಞಾನಿಗಳನ್ನು ಪ್ರಶ್ನಿಸಿದರು.**

ಸರ್ಕಾರದಿಂದಲೇ ಉಚಿತವಾದ ಗುಣಮಟ್ಟದ ಔಷಧಿ ನೀಡುವ ಮುಖಾಂತರ ಸಂಕಷ್ಟದಲ್ಲಿರುವ ರೈತರ ರಕ್ಷಣೆಗೆ ನಿಲ್ಲಬೇಕೆಂದು ಸರ್ಕಾರವನ್ನು ಆಗ್ರಹ ಪಡೆಸಿದರು. ಇತ್ತೀಚೆಗೆ ವಾಯುಭಾರ ಕುಸಿತದಿಂದ ಪದೇ ಪದೇ ಬರುತ್ತಿರುವ ಜಡಿಮಳೆಯಿಂದ ನಷ್ಟವಾಗಿರುವ ರಾಗಿ ಹಾಗೂ ವಾಣಿಜ್ಯ ಬೆಳೆ ಸಮೀಕ್ಷೆ ಮಾಡಿ ನಷ್ಟ ಪರಿಹಾರಕ್ಕೆ 100 ಕೋಟಿ ಪರಿಹಾರದ ಹಣ ಬಿಡುಗಡೆ ಮಾಡಿ ಪ್ರತಿ ಎಕರೆಗೆ 3 ಲಕ್ಷಪರಿಹಾರ ವಿತರಣೆ ಮಾಡಬೇಕೆಂದು ಮನವಿ ಮಾಡಿದರು.

ಪೂರ್ವಜರು ಬೆವರು ಸುರಿಸಿ ಕಟ್ಟಿ ಬೆಳೆಸಿದ ಕೆರೆಗಳು ಬುಧವಾರ ಪ್ರಭಾವಿ ರಾಜಕಾರಣಿಗಳ ಭೂರಿಯಲ್ ಎಸ್ಟೇಟ್ ಭೂಗಳ್ಳರ ಕೆಟ್ಟ ದೃಷ್ಟಿ ಬಿದ್ದು ಸಂಪೂರ್ಣವಾಗಿ ಒತ್ತುವರಿಯಾಗಿದ್ದು, ದಾಖಲೆಗಳ ಸಮೇತ ತೆರವುಗೊಳಿಸುವಂತೆ ಕಂದಾಯ ಅಧಿಕಾರಿಗಳಿಗೆ ದೂರು ನೀಡಿದರೂ ಕನಿಷ್ಠ ಒತ್ತುವರಿದಾರರಿಗೆ ನೋ ಟೀಸನ್ನೂ ನೀಡದೆ ಅವರ ಜೊತೆ ಹೊಂದಾಣಿಕೆ ಮಾಡಿಕೊಂಡು ಸರ್ಕಾರಿ ಆಸ್ತಿಗಳನ್ನು ಮಾರಾಟ ಮಾಡಿ ಮುಂಗಾರುಮಳೆ ಸಮಯದಲ್ಲಿ ಸಮರ್ಪಕವಾದ ರಾಜಕಾಲುವೆಗಳಿಲ್ಲದೆ ಕೆರೆಗೆ ಹರಿಯಬೇಕಾದ ಮಳೆ ನೀರು ರೈತರ ಬೆಳೆಗಳಿಗೆ ಹರಿದು 3 ತಿಂಗಳ ಕಷ್ಟದ ಫಲ ಮೂರೇ ನಿಮಿಷದಲ್ಲಿ ನೀರು ಪಾಲಾಗಿರುವುದಕ್ಕೆ ಅಧಿಕಾರಿಗಳ ಬೇಜವಾಬ್ದಾರಿಯೇ ಕಾರಣ ಎಂದು ಆರೋಪಿಸಿದರು.

# ರಾಷ್ಟ್ರಕವಿ ಕುವೆಂಪುರವರ 120ನೇ ಜನ್ಮದಿನಾಚರಣೆ

• ಉದಯವಾಹಿನಿ, ಮಾಲೂರು

ರಾಷ್ಟ್ರಕವಿ ಕುವೆಂಪು ಅವರು ರಚಿಸಿರುವ ಕವನಗಳು, ನಾಟಕ, ಗದ್ಯ, ಕೃತಿಗಳು ಕನ್ನಡಿಗರ ಮನದಾಳದಲ್ಲಿ ಹಾಸುಹೊಕ್ಕಾಗಿದೆ ಎಂದು ಸಾಹಿತಿ ಡಾ.ನಾ ಮುನಿರಾಜು ಹೇಳಿದರು. ಅವರು ಪಟ್ಟಣದ ಯೂನಿಕ್ ಇಂಟರ್ನ್ಯಾಷನಲ್ ಶಾಲೆಯ ಸಭಾಂಗಣದಲ್ಲಿ ಕನ್ನಡ ಸಾಹಿತ್ಯ ಪರಿಷತ್, ಯೂನಿಕ್ ಇಂಟರ್‌ನ್ಯಾಷನಲ್ ಶಾಲೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರಕವಿ ಕುವೆಂಪುರವರ 120ನೇ ಜನ್ಮದಿನಾಚರಣೆ ಅಂಗವಾಗಿ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ವರಕವಿ ಬೇಂದ್ರೆ ಯವರಿಂದ ಯುಗದ ಕವಿ ಜಗದ ಕವಿ ಎನಿಸಿಕೊಂಡವರು. ವಿಶ್ವಮಾನವ ಸಂದೇಶ ನೀಡಿದವರು. ಕನ್ನಡದ ಎರಡನೆಯ ರಾಷ್ಟ್ರಕವಿ, ಜ್ಞಾನಪೀಠ ಪ್ರಶಸ್ತಿಯನ್ನು ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿಯನ್ನು ಮೊದಲ ಬಾರಿಗೆ ಕನ್ನಡಕ್ಕೆ ತಂದುಕೊಟ್ಟವರು. ಕರ್ನಾಟಕ ಕೊಡಮಾಡುವ ಕರ್ನಾಟಕ ರತ್ನ, ಹಾಗೂ ಪಂಪ ಪ್ರಶಸ್ತಿಯನ್ನು ಮೊದಲ ಬಾರಿಗೆ ಪಡೆದವರು.

ಮೈಸೂರಿನ ಮಹಾರಾಜಾ ಕಾಲೇಜಿನಲ್ಲಿ ಓದಿದ



ಉದಯವಾಹಿನಿ ಚಿತ್ರ

ಇವರು ಮೈಸೂರು ವಿಶ್ವವಿದ್ಯಾಲಯದಲ್ಲಿ ಸೇವೆ ಸಲ್ಲಿಸಿ ಉಪಕುಲಪತಿಯಾಗಿ ನಿವೃತ್ತರಾದರು. ಕಲಾಸುಂದರಿ, ನವಿಲು, ಪಕ್ಷಿಕಾಶಿ, ಶ್ರೀರಾಮಾಯಣ ದರ್ಶನಂ ಮಹಾಕಾವ್ಯವೂ ಸೇರಿ 30ಕ್ಕೂ ಹೆಚ್ಚು ಕಾವ್ಯ ಕೃತಿಗಳನ್ನು ಬರೆದಿದ್ದಾರೆ.

ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎಂ.ವಿ ಹನುಮಂತಯ್ಯ ಮಾತನಾಡಿ ರಾಷ್ಟ್ರಕವಿ ಕುವೆಂಪು ಅವರ ವಿಚಾರಧಾರೆಗಳು ಪ್ರಸ್ತುತ ಸಮಾಜಕ್ಕೆ ದಾರಿದೀಪವಾಗಿದೆ ವಿಶ್ವಮಾನವ ಕುವೆಂಪು ಅವರ ಇಡೀ ಸಮಾಜಕ್ಕೆ ವಿಶ್ವ ಮಾನವ ಸಂದೇಶವನ್ನು ಸಾರಿದರು ಸಮಾಜದಲ್ಲಿ ಜಾತಿ ಭೇದ ಧರ್ಮ ತೊರೆದು ವಿಶ್ವಮಾನವ ಬೆಳೆಸಿಕೊಳ್ಳುವಂತೆ ಹೇಳಿದ ಅವರು ಕುವೆಂಪು ಅವರು ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಅಪಾರ ಕೊಡುಗೆಯನ್ನು ನೀಡಿದ್ದು ಅವರು ರಚಿಸಿರುವ ಶ್ರೀ ರಾಮಾಯಣ ದರ್ಶನಂ ಕೃತಿಗೆ

> **ಜಲಗಾರ, ಯಮನಸೋಲು, ಬೊಮ್ಮನಹಳ್ಳಿ ಕಿಂದರಿ ಜೋಗಿ, ವಾಲ್ಮೀಕಿ ಭಾಗ್ಯ ಸ್ಮಶಾನ ಕುರುಕ್ಷೇತ್ರ, ಮಹಾರಾತ್ರಿ, ರಕ್ತಾಕ್ಷಿ, ಬಿರುಗಾಳಿ, ಬೆರಳ್‌ಗೆ ಕೊರಳ್, ಶೂದ್ರ ತಪಸ್ವಿ, ಮುಂತಾದ ನಾಟಕಗಳು, ಕಾನೂರು ಹೆಗ್ಗಡತಿ, ಮಲೆಗಳಲ್ಲಿ ಮದುಮಗಳು ಕಾದಂಬರಿಗಳು, ವಿಮರ್ಶೆ, ಕಾವ್ಯ ಮೀಮಾಂಸೆ-ಕಾವ್ಯ ,ಶಿಶುಸಾಹಿತ್ಯ ಹೀಗೆ ಸಾಹಿತ್ಯ ಲೋಕಕ್ಕೆ ನೀಡಿರುವ ಕೊಡುಗೆ ಅಪಾರವಾದದ್ದು. ಶಾಲಾ ಮಕ್ಕಳು ಅವರ ಸಾಹಿತ್ಯದ ಪುಸ್ತಕಗಳನ್ನು ಓದುವ ಮೂಲಕ ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವಂತೆ ಹೇಳಿದರು.**

ಜ್ಞಾನಪೀಠ ಪ್ರಶಸ್ತಿ ದೊರೆತಿದೆ ವಿದ್ಯಾರ್ಥಿಗಳು ಕುವೆಂಪುರವರು ರಚಿಸಿರುವ ಪುಸ್ತಕಗಳನ್ನು ಕೊಂಡು ಓದಿ ಅರ್ಥೈಸಿಕೊಳ್ಳುವ ಮೂಲಕ ಸಮಾಜದಲ್ಲಿ ಅಸಮಾನತೆಯನ್ನು ತೊಲಗಿಸಲು ಮುಂದಾಗುವಂತೆ ಹೇಳಿದರು.

# ಕೊಳಕು ಬಟ್ಟೆ ಸುತ್ತಿ, ಅಂಬೇಡ್ಕರ್‌ಗೆ ಅಪಮಾನ

• ಉದಯವಾಹಿನಿ, ಚಿಂತಾಮಣಿ

ಸರ್ಕಾರಿ ಶಾಲಾ ಆವರಣದಲ್ಲಿ ಅಂಬೇಡ್ಕರ್ ಪುತ್ಥಳಿ ಅನಾವರಣಕ್ಕೆ ಒತ್ತಾಯಿಸಿ ದಲಿತ, ಹಿಂದುಳಿದ, ಅಲ್ಪಸಂಖ್ಯಾತ, ಪ್ರಗತಿಪರ ಸಂಘಟನೆಗಳ ಒಕ್ಕೂಟ ನೇತೃತ್ವದಲ್ಲಿ ನಡೆಯುತ್ತಿರುವ ಅನಿರ್ಧಿಷ್ಟಾವಧಿ ಧರಣಿಗೆ ಜೆಡಿಎಸ್ ಬೆಂಬಲ ನೀಡಿದೆ. 10ನೇ ದಿನವಾದ ಬುಧವಾರ ಸಂಸದ ಮಲ್ಲೇಶ್ ಬಾಬು, ಮಾಜಿ ಶಾಸಕ ಎಂ.ಕೃಷ್ಣಾರೆಡ್ಡಿ ಸೇರಿದಂತೆ ಜೆಡಿಎಸ್ ಮುಖಂಡರು ಭೇಟಿ ನೀಡಿ ಧರಣಿ ಬೆಂಗಲಿಸಿದರು.

ಸಂಸದ ಎಂ.ಮಲ್ಲೇಶಬಾಬು ಮಾತನಾಡಿ, ಅಂಬೇಡ್ಕರ್ ಪುತ್ಥಳಿಗೆ ಸುತ್ತಿರುವ ಕೊಳಕು ಬಟ್ಟೆಯನ್ನು ಕಳೆದ ನಾಲ್ಕು ತಿಂಗಳಿನಿಂದ ತೆರವುಗೊಳಿಸದಿರುವುದು ನಾಚಿಕೆಗೇಡಿನ ಸಂಗತಿ. ಜಿಲ್ಲಾ ಉಸ್ತುವಾರಿ ಸಚಿವರು ಮನಸ್ಸು ಮಾಡಿದ್ದರೆ 5 ನಿಮಿಷದ ಕೆಲಸ. ಆದರೆ ಅವರು ಸಹ ಮನಸ್ಸು ಮಾಡಿಲ್ಲ. ಮುಂದಿನ ದಿಶಾ ಸಭೆಯಲ್ಲಿ ವಿಷಯಯವನ್ನು ಪ್ರಸ್ತಾಪಿಸಿ ಚರ್ಚೆ ನಡೆಸಲಾಗುವುದು. ಈ ಸಂಬಂಧ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಮಾತನಾಡಲಾಗುವುದು ಎಂದು ತಿಳಿಸಿದರು. ಮಾಜಿ ಶಾಸಕ ಎಂ.ಕೃಷ್ಣಾರೆಡ್ಡಿ, ಕಾಂಗ್ರೆಸ್ ನಾಯಕರು ಸದಾ ಸಂವಿಧಾನ, ಅಂಬೇಡ್ಕರ್ ಎಂದು ಎಂದು ಜಪ ಮಾಡುತ್ತಾರೆ. ಆದರೆ ನಗರದಲ್ಲಿ ಕಳೆದ 4 ತಿಂಗಳಿನಿಂದ ಅಂಬೇಡ್ಕರ್ ಪುತ್ಥಳಿಗೆ ಕೊಳಕು ಬಟ್ಟೆ ಹೊದಿಸಿ ಅವಮಾನ ಮಾಡುತಿದಾರೆ ಎಂದು ಅಸಮಾದಾನ ವ್ಯಕಪಡಿಸಿದರು. ಜಿಲ್ಲಾಡಳಿತ ಮತ್ತು ತಾಲ್ಲೂಕು ಆಡಳಿತ ಸತ್ತು ಹೋಗಿದೆ.

ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಕೊಳಕು ಬಟ್ಟೆಯಲ್ಲಿ ಮುಚ್ಚಿರುವ ಅಂಬೇಡ್ಕರ್ ಪುತ್ಥಳಿಯನ್ನು ಅನಾವರಣಗೊಳಿಸಬೇಕು ಎಂದು ಒತ್ತಾಯಿಸಿ ದಲಿತಪರ ಸಂಘಟನೆಗಳು ಕಳೆದ 10 ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದರೂ ತಾಲ್ಲೂಕು ಆಡಳಿತ, ಜಿಲ್ಲಾಡಳಿತ ಅಥವಾ ಜನಪ್ರತಿನಿಧಿಗಳು ಕ್ಯಾರೆ ಎನ್ನುತ್ತಿಲ್ಲ ಎಂದು ಟೀಕಿಸಿದರು. ಕಾಂಗ್ರೆಸ್ ನಾಯಕರು ಸಂಸತ್ ನಲ್ಲಿ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಎಂದು ಘೋಷಣೆ ಮಾಡುತ್ತಾರೆ. ನಾವು ಅಂಬೇಡ್ಕರ್ ಮತ್ತು ಸಂವಿಧಾನ ಪ್ರತಿಪಾದಕರು ಎಂದು ಇತ್ತೀಚೆಗೆ ಬೆಳಗಾವಿಯಲ್ಲಿ ನಲ್ಲಿ ನಡೆದ ಕಾಂಗ್ರೆಸ್ ವರ್ಕಿಂಗ್ ಕಮಿಟಿ ಸಭೆಯಲ್ಲಿ ಘೋಷಣೆ ಮಾಡಿದರು. ರಾಜ್ಯದ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಸೇರಿದಂತೆ ದೇಶದ ಎಲ್ಲಾ ಪ್ರಮುಖ ನಾಯಕರು ಭಾಗವಹಿಸಿದ್ದರು. ಇಲ್ಲಿ ಅಂಬೇಡ್ಕರ್ ಉತ್ಥಳಿ ಅನಾವರಣಕ್ಕೆ ಏಕೆ ವಿರೋಧ ವ್ಯಕ್ತಪಡಿಸುದ್ದಾರೆ .ಎಂದು ಪ್ರಶ್ನಿಸಿದರು.

# ಭೀಮಾ ಕೋರೇಗಾಂವ್ ಆಚರಣೆ

• ಉದಯವಾಹಿನಿ, ಬಾಗೇಪಲ್ಲಿ

ತಾಲ್ಲೂಕು ಪಂಚಾಯಿತಿಯಲ್ಲಿ ಜನವರಿ 2ರ ಗುರುವಾರ ಬೆಳಗ್ಗೆ ಭೀಮಾ ಕೋರೆಗಾಂವ್ ವಿಜಯೋತ್ಸವದ ಆಚರಣೆ ಹಮ್ಮಿಕೊಳ್ಳಲಾಗಿದೆ ಎಂದು ಭೀಮಾ ಕೋರೆಗಾಂವ್ ವಿಜಯೋತ್ಸವದ ಆಚರಣಾ ಸಮಿತಿ ಅಧ್ಯಕ್ಷ ಎ.ವಿ.ಪೂಜಪ್ಪ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಭೀಮಾ ಕೋರೆಗಾಂವ್ ಆಚರಣಾ ಸಮಿತಿ ಹಾಗೂ ದಲಿತ ಸಂಘಟನೆಗಳ ಒಕ್ಕೂಟದಿಂದ ಆಚರಣೆ ಹಮ್ಮಿಕೊಳ್ಳಲಾಗಿದೆ. ಕೋರೆಗಾಂವ್‌ನ ಸ್ಥಳದ ಹೋರಾಟ, ಮಹತ್ವದ ಬಗ್ಗೆ, ಜನಜಾಗೃತಿ ಮೂಡಿಸಲು ಸಾರ್ವಜನಿಕ ಸಭೆ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಂಗವಾಗಿ ಬಾಗೇಪಲ್ಲಿ, ಚೇಳೂರು ತಾಲ್ಲೂಕುಗಳ ಗ್ರಾಮಗಳ ದಲಿತ ಕೇರಿ, ಕಾಲೋನಿಗಳಿಗೆ ಸಂಚರಿಸಿ ಜಾಗೃತಿ ಮೂಡಿಸಲಾಗಿದೆ. ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.



ಉದಯವಾಹಿನಿ ಚಿತ್ರ

**ಜನಜಾಗೃತಿ ಮೂಡಿಸಲು ಸಾರ್ವಜನಿಕ ಸಭೆ**

ಜಾನಪದ ಗಾಯಕ ಪಿಟಿಎಂ ಶಿವಪ್ರಸಾದ್, ಪ್ರಜಾಗಾಯಕ ಜಿ.ಮುನಿರೆಡ್ಡಿ, ಕಲಾವಿದ ಆನಂದ್. ಕೇಶವ ಸೇರಿದಂತೆ ಅನೇಕ ಕಲಾವಿದರು ಆಗಮಿಸಲಿದ್ದಾರೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಆಚರಣಾ ಸಮಿತಿಯ ವಿ.ರಮೇಶಬಾಬು, ಸಂಘಟನಾ ಕಾರ್ಯದರ್ಶಿ ಜಿ.ಎನ್.ಆಂಜಿನಪ್ಪ, ಜಿ.ನರಸಿಂಹಪ್ಪ, ಸಂಘಟನಾ ಕಾರ್ಯದರ್ಶಿ ಕೋಟಪ್ಪ, ಜೀವಿಕ ನಾರಾ ಯಣಸ್ವಾಮಿ, ವಕೀಲ ವೆಂಕಟೇಶ್, ಅಪ್ಪಣ್ಣ, ಶ್ರೀನಿವಾಸ್, ಆದಿ, ವೆಂಕಟರವಣ, ಬಾಲಕೃಷ್ಣ ಸುಬ್ರಮಣಿ, ನರಸಿಂಹಪ್ಪ, ರಾಮಚಂದ್ರ ಇದ್ದರು.

# ಜ.11 ಬೆಂಗಳೂರಲ್ಲಿ ಗಾಣಿಗರ ಹಬ್ಬ

• ಉದಯವಾಹಿನಿ, ಬಂಗಾರಪೇಟೆ

ಶ್ರೀಕ್ಷೇತ್ರ ತೈಲೇಶ್ವರ ಗಾಣಿಗರ ಮಹಾ ಸಂಸ್ಥಾನ ಮಠಾದೀಶ ಶ್ರೀ ಪೂರ್ಣಾನಂದಪುರಿ ಮಹಾಸ್ವಾಮಿಗಳ ಎರಡನೇ ವರ್ಷದ ಪೀಠಾರೋಹಣ ಕಾರ್ಯಕ್ರಮ ಹಾಗೂ ಗಾಣಿಗರ ಹಬ್ಬ ವನ್ನು ಇದೆ 11ರಂದು ಬೆಂಗಳೂರಿನಲ್ಲಿ ಹಮ್ಮಿಕೊಳ್ಳಲಾಗಿದ್ದು ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಮಠದ ಟ್ರಸ್ಟಿ ಪಿ.ಜಿ. ವಿಜಯ್ ಕುಮಾರ್ ಮನವಿ ಮಾಡಿದರು.

ಪಟ್ಟಣದ ಕನಕ ಭವನದಲ್ಲಿ ಜನವರಿ 11 ರಂದು ನಡೆಯಲಿರುವ ಗಾಣಿಗರ ಹಬ್ಬ ಕಾರ್ಯಕ್ರಮದ ಆಹ್ವಾನ ಪತ್ರಿಕೆಗಳನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು ಗಾಣಿಗರ ಸಮುದಾಯದ ಏಕತೆ ಹಾಗೂ ಸಂಘಟನಾ ಶಕ್ತಿಯನ್ನು ಪ್ರದರ್ಶನ ಮಾಡುವ ಉದ್ದೇಶದಿಂದ ಹಾಗೂ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಹಕ್ಕೋತ್ತಾಯ ಮಾಡಲು ಗಾಣಿಗರ ಹಬ್ಬವನ್ನು ಅತ್ಯಂತ ವೈಭವದಿಂದ ನಡೆಸಲಾಗುತ್ತಿದೆ ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

ಈ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟನೆ ಮಾಡಲಿದ್ದು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಎಂ. ವೀರಪ್ಪಮೊಯ್ಲಿ, ಸಚಿವರಾದ ಹೆಚ್.ಕೆ. ಪಾಟೀಲ್, ಹೆಚ್.ಸಿ. ಮಹದೇವಪ್ಪ, ದಿನೇಶ್‌ಗುಂಡೂರಾವ್, ಶಿವರಾಜ್ ತಂಗಡಗಿ, ಸರಕಾರದ ಗ್ಯಾರಂಟಿ ಯೋಜನೆಯ ಅಧ್ಯಕ್ಷ ಹೆಚ್.ಎಂ. ರೇವಣ್ಣ, ಸ್ವಾಗತಸಮಿತಿ ಅಧ್ಯಕ್ಷ ಜಿ.ಎನ್. ವೇಣುಗೋಪಾಲ್ ಸೇರಿದಂತೆ ಶಾಸಕರು, ಸಂಸದರು ಸಮುದಾಯದ ಹಿರಿಯ ಮುಖಂಡರು ಹಾಜರಾಗಲಿದ್ದಾರೆ ಎಂದು ತಿಳಿಸಿದರು. ಕಾರ್ಯಕ್ರಮದ ನಡೆಯುವ ದಿನದಂದು ಗುರುಗಳಿಗೆ ವಂದನೆ, ವಿಚಾರ ಸಂಕಿರಣ ಏರ್ಪಡಿಸಲಾಗಿದೆ.

> **ಗಾಣಿಗ ಸಮುದಾಯದವರು ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.**

ಶ್ರೀ ಕೈಲಾಸ ಆಶ್ರಮ ಮಹಾ ಸಂಸ್ಥಾನದ ಪೀಠಾಧಿಪತಿಗಳಾದ ಶ್ರೀ ಜಯೇಂದ್ರ ಪುರಿ ಮಹಾ ಸ್ವಾಮಿಗಳು ಮತ್ತು ಇನ್ನಿತರ ಸ್ವಾಮಿಗಳಿಂದ ಮಹಾ ಸ್ವಾಮಿಗಳಿಗೆ ದ್ವಿತೀಯ ಪೀಠಾರೋಹಣ ಸಮಾರಂಭ ನಡೆಯಲಿದೆ. ಇದೇ ದಿವಸ ನೂತನ ಶಾಲಾ ಕಟ್ಟಡ ಹಾಗೂ ಪ್ರಸಾದ ಮನೆಯ ಕಟ್ಟಡಗಳ ಉದ್ಘಾಟನೆ ನಡೆಯಲಿದೆ ಎಂದರು. ಸ್ವಾಮೀಜಿಗಳು ತಮ್ಮ ಸರ್ವಸ್ವವನ್ನು ತ್ಯಾಗ ಮಾಡಿ ಜನಾಂಗದ ಏಳಿಗೆಗಾಗಿ ಅಭಿವೃದ್ಧಿಗಾಗಿ ಶ್ರಮಿಸುತ್ತಿದ್ದು ಅವರಿಗೆ ನಮ್ಮ ಬೆಂಬಲ ನೀಡಬೇಕಾಗಿದೆ ಎಂದರು.

# ಯುವನಿಧಿ ಯೋಜನೆ ನೊಂದಣಿ ಪ್ರಕ್ರಿಯೆಗೆ ಡಿಸಿ ಶಿಲ್ಪಾನಾಗ್ ಚಾಲನೆ

• ಉದಯವಾಹಿನಿ, ಚಾಮರಾಜನಗರ

ಯುವಜನರ ಉಜ್ವಲ ಭವಿಷ್ಯಕ್ಕಾಗಿ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ 'ಯುವನಿಧಿ' ಯೋಜನೆಯ 2024ನೇ ಸಾಲಿನ ನೊಂದಣಿ ಪ್ರಕ್ರಿಯೆಗೆ ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರು ನಗರದಲ್ಲಿ ಚಾಲನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ, ಜೀವನೋಪಾಯ ಇಲಾಖೆ ಹಾಗೂ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ 'ಯುವನಿಧಿ ನೊಂದಣಿ ಪ್ರಕ್ರಿಯೆ ಆರಂಭ' ಕುರಿತ ಪೋಸ್ಟರ್ ಅನ್ನು ಜಿಲ್ಲಾಧಿಕಾರಿ ಬಿಡುಗಡೆಗೊಳಿಸಿದರು.

ಮಾತನಾಡಿದ ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರು ವಿದ್ಯಾಭ್ಯಾಸ ಮುಗಿಸಿರುವ ಪದವಿ ಹಾಗೂ ಸ್ನಾತಕೋತ್ತರ ಪದವಿಧರರು ಹಾಗೂ



ಉದಯವಾಹಿನಿ ಚಿತ್ರ

ಡಿಪ್ಲೋಮಾ ತೇರ್ಗಡೆಯಾಗಿರುವ ನಿರುದ್ಯೋಗಿಗಳಿಗೆ ನೆರವಾಗುವ ನಿಟ್ಟಿನಲ್ಲಿ ಜಾರಿಯಾಗಿರುವ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಲ್ಲಿ ಯುವನಿಧಿ ಯೋಜನೆ ಒಂದಾಗಿದೆ.

ಯೋಜನೆಯ ಸದ್ಬಳಕೆ ಹಾಗೂ ಯಶಸ್ವಿಗಾಗಿ ನೊಂದಣಿ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಜಿಲ್ಲೆಯ ಎಲ್ಲಾ ಪದವಿ, ಸ್ನಾತಕೋತ್ತರ ಪದವಿ, ಡಿಪ್ಲೋಮಾ ಕಾಲೇಜಿನ ಪ್ರಾಂಶುಪಾಲರು, ಮುಖ್ಯಸ್ಥರು ಸಹಕರಿಸಿ ನಿರುದ್ಯೋಗಿ ಅಭ್ಯರ್ಥಿಗಳನ್ನು ಪ್ರೇರೇಪಿಸಬೇಕು ಎಂದರು.

> **2023, 2024ರಲ್ಲಿ ಪದವಿ, ಸ್ನಾತಕೋತ್ತರ ಪದವಿ, ಡಿಪ್ಲೋಮಾ ಉತ್ತೀರ್ಣರಾಗಿ ಕನಿಷ್ಠ 6 ತಿಂಗಳವರೆಗೆ ಸರ್ಕಾರಿ ಅಥವಾ ಖಾಸಗಿ ಉದ್ಯೋಗ ಹೊಂದಿಲ್ಲದವರು, ಸ್ವಯಂ ಉದ್ಯೋಗ ಹೊಂದಿಲ್ಲದವರು, ಉನ್ನತ ವಿದ್ಯಾಭ್ಯಾಸ ಮುಂದುವರಿಸದೇ ಇರುವವರು ಹಾಗೂ ಕರ್ನಾಟಕದಲ್ಲಿ ವಾಸವಿದ್ದು, ಕನಿಷ್ಠ 6 ವರ್ಷಗಳವರೆಗೆ ಅಧ್ಯಯನ ಮಾಡಿರುವ ಅಭ್ಯರ್ಥಿಗಳು ಸೇವಾಸಿಂಧು ಪೋರ್ಟಲ್ ಮೂಲಕ ನೊಂದಾಯಿಸಿಕೊಳ್ಳಬಹುದು. ಕರ್ನಾಟಕ ಒನ್, ಗ್ರಾಮ ಒನ್, ಬಾಪೂಜಿ ಸೇವಾ ಕೇಂದ್ರಗಳಲ್ಲಿ ಉಚಿತವಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದರು.**

# ಎಸ್‌ಜೆಸಿಐಟಿ ಬಿಜಿಎಸ್ ಅರ್ಪಿತ್ ಪೇಲೋಡ್

• ಉದಯವಾಹಿನಿ, ಚಿಕ್ಕಬಳ್ಳಾಪುರ

ಆಂಧ್ರಪ್ರದೇಶದ ಶ್ರೀಹರಿಕೋಟಾದದಿಂದ ನಭಕ್ಕೆ ಜಿಗಿದ ಪಿಎಸ್‌ಎಲ್‌ವಿ ರಾಕೆಟ್ ಹೊತ್ತೊಯ್ದ ಪೇಲೋಡ್‌ಗಳಲ್ಲಿ ಚಿಕ್ಕಬಳ್ಳಾಪುರದ ಆದಿಚುಂಚನಗಿರಿ ಶಿಕ್ಷಣ ಸಂಸ್ಥೆಯ ಎಸ್‌ಜೆಸಿ ತಾಂತ್ರಿಕ ವಿದ್ಯಾಲಯದ ವಿದ್ಯಾರ್ಥಿಗಳು ಅಭಿವೃದ್ಧಿಪಡಿಸಿದ 'ಬಿಜಿಎಸ್ ಅರ್ಪಿತ್' ಪೇಲೋಡ್ ಕೂಡ ಸೇರಿದೆ. ಎಸ್‌ಜೆಸಿಐಟಿಯ ವಿವಿಧ ವಿಭಾಗಗಳ 18 ವಿದ್ಯಾರ್ಥಿಗಳು ಮತ್ತು ಆರು ಅಧ್ಯಾಪಕರ ತಂಡ ಪ್ರೊ. ಶ್ರೀಹರಿ ನೇತೃತ್ವದಲ್ಲಿ ಪೇಲೋಡ್ ವಿನ್ಯಾಸ ಮಾಡಿದೆ. ಅಮ್ಯೆಚೂರ್ ರೇಡಿಯೊ ಪೇಲೋಡ್ ಫಾರ್ ಇನ್ಫಾರ್ಮೇಶನ್ ಪೇಲೋಡ್‌ಗೆ ನಾಮಕರಣ ಮಾಡಲಾಗಿದೆ. ಬಾಹ್ಯಾಕಾಶದಲ್ಲಿ ಎರಡು ಉಪಗ್ರಹ ಗಳನ್ನು ಜೋಡಿಸುವ (ಡಾಕಿಂಗ್) ಸ್ಪೇಡೆಕ್ಸ್ ಯೋಜನೆ ಗಾಗಿ ಪಿಎಸ್‌ಎಲ್‌ವಿ ರಾಕೆಟ್ ಎರಡು ಉಪಗ್ರಹ ಮತ್ತು ಹಲವು ಪೇಲೋಡ್‌ಗಳನ್ನು ಪಿಎಸ್‌ಎಲ್‌ವಿ ರಾಕೆಟ್ ಹೊತ್ತೊಯ್ದಿದೆ. ಎಫ್.ಎಂ ಸಂಕೇತ, ವಿಎಚ್‌ಎಫ್ ಬ್ಯಾಂಡ್ ಮೂಲಕ ಉಪಗ್ರಹದಿಂದ ಉತ್ತಮ ಗುಣಮಟ್ಟದ ಧ್ವನಿ, ಸಂದೇಶ, ಛಾಯಾಚಿತ್ರ, ವಿಡಿಯೋಗಳನ್ನು ಭೂಮಿಗೆ ರವಾನಿಸಲು ಅನುಕೂಲವಾಗುವಂತೆ ಬಿಜಿಎಸ್ ಅರ್ಪಿತ್ ಪೇಲೋಡ್ ವಿನ್ಯಾಸಗೊಳಿಸ ಲಾಗಿದೆ. ಬೆಂಗಳೂರಿನ ಅನಂತ್ ಟೆಕ್ನಾಲಜೀಸ್, ಹೈದರಾಬಾದ್‌ನ ಆಸ್ಟ್ರಾ ಮೈಕ್ರೋವೇವ್‌ನಲ್ಲಿ ಪರೀಕ್ಷಿಸಿದ ನಂತರ ತಿರುವನಂತಪುರದ ವಿಕ್ರಮ್ ಸಾರಾಭಾಯ್ ಬಾಹ್ಯಾಕಾಶ ಕೇಂದ್ರ, ಶ್ರೀಹರಿಕೋಟಾ ಉಡಾವಣಾ ಕೇಂದ್ರಗಳು ಈ ಮಾದರಿಗೆ ಅಂತಿಮ ಮುದ್ರೆ ಒತ್ತಿವೆ. ಎರಡು ವರ್ಷಗಳಿಂದ ನಮ್ಮ ವಿದ್ಯಾಲಯದಲ್ಲಿಯೇ ಬಿಜಿಎಸ್ ಅರ್ಪಿತ್' ಪೇಲೋಡ್ ಅಭಿವೃದ್ಧಿಗೊಳಿಸಲಾಗಿದೆ.

ಇದು ಸಂವಹನ ಕ್ಷೇತ್ರದಲ್ಲಿ ಹೊಸ ಮೈಲುಗಲ್ಲು ಸ್ಥಾಪಿಸಲಿದೆ ಎಂದು ಎಸ್‌ಜೆಸಿಐಟಿ ರಿಜಿಸ್ಟ್ರಾರ್ ಸುರೇಶ್ ತಿಳಿಸಿದ್ದಾರೆ.

# ಪ್ರಿಯಾಂಕ್ ರಾಜೀನಾಮೆ ಪಡೆಯುವ ಪ್ರಶ್ನೆಯೇ ಇಲ್ಲ

## ಸಿಗುತ್ತಿರುವ ಜನಪ್ರಿಯತೆ ಕಡಿಮೆ ಮಾಡಬೇಕು, ಹೆಸರಿಗೆ ಮಸಿ ಬಳಿಯಬೇಕು ಎಂಬ ಉದ್ದೇಶದಿಂದ ಬಿಜೆಪಿಯವರು ಪಿತೂರಿ

• ಉದಯವಾಹಿನಿ, ಮೈಸೂರು

ಬೀದರ್ ಜಿಲ್ಲೆಯ ಗುತ್ತಿಗೆದಾರ ಸಚಿನ್ ಪಾಂಚಾಳ ಆತ್ಮಹತ್ಯೆ ಪ್ರಕರಣದಲ್ಲಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಪಾತ್ರವಿಲ್ಲದಿರುವುದರಿಂದ ಅವರ ರಾಜೀನಾಮೆ ಪಡೆಯುವ ಪ್ರಶ್ನೆಯೇ ಇಲ್ಲ' ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಹೇಳಿದರು.

ಇಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಆ ಗುತ್ತಿಗೆದಾರ ಬರೆದಿಟ್ಟಿರುವ ಡೆತ್‌ನೋಟ್‌ನಲ್ಲಿ ಪ್ರಿಯಾಂಕ್ ಖರ್ಗೆ ಅವರ ಹೆಸರಿದ್ದರೆ, ಏನಾದರೂ ದಾಖಲೆಗಳಿದ್ದರೆ ಅಥವಾ ಅವರ ಪಾತ್ರವೇನಾದರೂ ಇದ್ದರೆ ತೋರಿಸಲಿ ಎಂದು ಸವಾಲು ಹಾಕಿದರು. ಪ್ರಿಯಾಂಕ್ ಸಚಿವರಾಗಿ ಬಹಳ ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿದ್ದಾರೆ.

ಬಿಜೆಪಿಯ ಜನ ವಿರೋಧಿ ಕೆಲಸಗಳ ಬಗ್ಗೆ ಟೀಕಾಪ್ರಹಾರ ನಡೆಸುತ್ತಿದ್ದಾರೆ. ಅದೇ ಅವರಿಗೆ ಮುಳುವಾದಂತೆ ಕಾಣುತ್ತಿದೆ. ಆದರೆ, ಪಕ್ಷದಿಂದ ಬಿಜೆಪಿಯವರ ಆರೋಪಕ್ಕೆ ಸೊಪ್ಪು ಹಾಕುವುದಿಲ್ಲ' ಎಂದು ತಿಳಿಸಿದರು. 'ಆ ಗುತ್ತಿಗೆದಾರ ಡೆತ್‌ನೋಟ್‌ನಲ್ಲಿ ಎಂಟು ಮಂದಿಯ ಹೆಸರು ಬರೆದಿದ್ದಾರೆ. ಅವರ ವಿರುದ್ಧ ಪಕ್ಷದಿಂದ ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ. ಆರೋಪಿ ರಾಜು ಕಪನೂರ ಎಂಬಾತ ಬಿಜೆಪಿ ಮುಖಂಡರ ಜೊತೆಯೂ ಗುರುತಿಸಿಕೊಂಡಿದ್ದಾನೆ. ಹೀಗಿರುವಾಗ, ಬಿಜೆಪಿಯವರು ಪ್ರಿಯಾಂಕ್ ಅವರ ರಾಜೀನಾಮೆ ಕೇಳುತ್ತಿರುವುದು ನಾಚಿಕೆಗೇಡಿನ ಸಂಗತಿ' ಎಂದರು.

ಬಿಜೆಪಿಯವರು ದಲಿತರ ಏಳಿಗೆ ಸಹಿಸಲಾಗದೇ ಪಿತೂರಿ ಮಾಡುತ್ತಿದ್ದಾರೆ. ವಿಷಕಾರುತ್ತಿದ್ದಾರೆ. ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವಹೇಳನ ಮಾಡಿದ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಂದ ಕ್ಷಮೆ ಕೇಳಿಸುವ ಕೆಲಸವನ್ನೂ ಆ ಪಕ್ಷದವರು ಮಾಡಲಿಲ್ಲ ಎಂದು ಆರೋಪಿಸಿದರು.

ಸಚಿವರ ದನಿಯನ್ನು ಅಡಗಿಸಬೇಕು, ತೇಜೋವಧೆ ಮಾಡಬೇಕು, ಅವರಿಗೆ ಸಿಗುತ್ತಿರುವ ಜನಪ್ರಿಯತೆ ಕಡಿಮೆ ಮಾಡಬೇಕು, ಹೆಸರಿಗೆ ಮಸಿ ಬಳಿಯಬೇಕು ಎಂಬ ಉದ್ದೇಶದಿಂದ ಬಿಜೆಪಿಯವರು ಪಿತೂರಿ ಮಾಡುತ್ತಿದ್ದಾರೆ.

ಕೆಆರ್‌ಎಸ್ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಎಂಬ ಹೆಸರಿಡುವುದಕ್ಕೆ ಬಿಜೆಪಿಯವರು ವಿರೋಧ ವ್ಯಕ್ತಪಡಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಲಕ್ಷ್ಮಣ, 'ಸಿದ್ದರಾಮಯ್ಯ ಅವರ ಹೆಸರು ಕೇಳಿದರೆ ಕೆಲವರು ಮೈಮೇಲೆ ಮಲ ಸುರಿದುಕೊಂಡವರಂತೆ ಆಡುತ್ತಿದ್ದಾರೆ' ಎಂದು ತಿರುಗೇಟು ನೀಡಿದರು.

'ವಾಸ್ತವ ತಿಳಿದುಕೊಳ್ಳಲೆಂದು ನನ್ನ ನೇತೃತ್ವದಲ್ಲಿ ಕಾಂಗ್ರೆಸ್ ನಿಯೋಗವು ನಗರಪಾಲಿಕೆ ಆಯುಕ್ತರನ್ನು ಮಂಗಳವಾರ ಭೇಟಿ ಮಾಡಿತ್ತು. ಆ ರಸ್ತೆಗೆ ಪ್ರಿನ್ಸೆಸ್ ರಸ್ತೆ ಎಂಬ ಹೆಸರಿಟ್ಟಿರುವ ಬಗ್ಗೆ ದಾಖಲೆಗಳೇ ಇಲ್ಲ ಎಂದು ಆಯುಕ್ತರು ತಿಳಿಸಿದ್ದಾರೆ.

ಕಾನೂನಾತ್ಮಕವಾಗಿ ನಾಮಕರಣ ಪ್ರಕ್ರಿಯೆ ನಡೆಸಬೇಕು ಎಂದು ನಾವು ಕೇಳಿಕೊಂಡಿದ್ದೇವೆ. ನಾವು ಹೆಸರು ಇಡುವುದರಲ್ಲಿ ಹಿಂದೆ ಸರಿಯುವುದೇ ಇಲ್ಲ ಎಂದರು. ವಿರೋಧ ವ್ಯಕ್ತಪಡಿಸುತ್ತಿರುವ ಸಂಸದ ಯದುವೀರ್ ಅವರು ಪ್ರಿನ್ಸೆಸ್ ರಸ್ತೆ ಎಂದು ನಾಮಕರಣ ಮಾಡಿರು ವುದಕ್ಕೆ ದಾಖಲೆಗಳಿದ್ದರೆ ಕೊಡಲಿ. ಕೆಆರ್‌ಎಸ್ ಸಂಪರ್ಕಿಸುವ ರಸ್ತೆಯಾದ್ದರಿಂದ ಜನರು ಕೆಆರ್‌ಎಸ್ ರಸ್ತೆ ಎಂದು ಕರೆಯುತ್ತಿದ್ದಾರೆ.

ಸಿದ್ದರಾಮಯ್ಯ ಅವರು ಮೈಸೂರಿಗೆ ನೀಡಿರುವ ಕೊಡುಗೆ ಅನನ್ಯವಾದುದು. ಅದನ್ನು ಪರಿಗಣಿಸಿ, ಆ ರಸ್ತೆಗೆ ಅವರ ಹೆಸರು ನಾಮಕರಣ ಮಾಡುವಂತೆ ಜನರ ಒತ್ತಾಸೆಯೂ ಇತ್ತು. ಈ ನಿಟ್ಟಿನಲ್ಲಿ ಪಾಲಿಕೆ ಕ್ರಮ ಕೈಗೊಂಡಿದೆ' ಎಂದು ಹೇಳಿದರು.

ನಾವು ಮಹಾರಾಜರ ವಿರುದ್ಧ ಇದ್ದೇವೆ ಎಂದು ಬಿಂಬಿಸುವುದು ಸರಿಯಲ್ಲ. ಅಸಲಿ ಮೈಸೂರು ರಾಜವಂಶಸ್ಥರಿಗೆ ನಾವು ಟಿಕೆಟ್ ಕೊಟ್ಟು ಗೆಲ್ಲಿಸಿದ್ದೆವು. ಈಗಿರುವವರು ದತ್ತು ಪಡೆದುಕೊಂಡಿರುವವರು; ಡೂಪ್ಲಿಕೇಟ್ ರಾಜವಂಶಸ್ಥ. ಅವರು ಅಭಿವೃದ್ಧಿ ಕೆಲಸಗಳಿಗೆ ಆದ್ಯತೆ ನೀಡಲಿ' ಎಂದು ಹೇಳಿದರು.



> **ಪ್ರಿಯಾಂಕ್ ಇನ್ನೂ ಯುವಕ, ಇಂದಲ್ಲ ನಾಳೆ ಇನ್ನೂ ಉನ್ನತ ಸ್ಥಾನಕ್ಕೆ ಹೋಗಲಿದ್ದಾರೆ. ಅದನ್ನು ಸಹಿಸಲಾಗದೆ ಬಿಜೆಪಿಯವರು ಷಡ್ಯಂತ್ರ ಮಾಡುತ್ತಿದ್ದಾರೆ. ಅದ್ಯಾವುದಕ್ಕೂ ಅವರಾಗಲಿ ಅಥವಾ ಪಕ್ಷವಾಗಲಿ ಜಗ್ಗುವುದಿಲ್ಲ' ಎಂದರು.'ಅಭಿವೃದ್ಧಿ ವಿಚಾರಗಳ ಬಗ್ಗೆ ಮಾತನಾಡದೇ ಕ್ಷುಲ್ಲಕ ಪ್ರಕರಣಗಳನ್ನು ಕೈಗೆತ್ತಿಕೊಂಡು ಗೊಂದಲ ಮೂಡಿಸುವ ಕೆಲಸವನ್ನು ವಿರೋಧಪಕ್ಷದವರು ಮಾಡುತ್ತಿದ್ದಾರೆ. ಹತಾಶರಾಗಿ ಸುಳ್ಳುಗಳನ್ನು ಹೇಳುತ್ತಿದ್ದಾರೆ. ರಾಜಭವನವನ್ನೂ ದುರು ಪಯೋಗ ಮಾಡಿಕೊಳ್ಳುತ್ತಿದ್ದಾರೆ**
> – ಎಂ.ಲಕ್ಷ್ಮಣ, ಕೆಪಿಸಿಸಿ ವಕ್ತಾರ

**ಪಾಲಿಕೆ ಕ್ರಮ ಕೈಗೊಂಡಿದೆ**

# ಮಿನಿ ನ್ಯೂಸ್

## ಬ್ರೇಕ್ ಫೇಲ್ ಆಗಿ ತಡೆಗೋಡೆಗೆ ಗುದ್ದಿದ ಕೆಎಸ್‌ಆರ್‌ಟಿಸಿ ಬಸ್

• ಉದಯವಾಹಿನಿ, ರಾಮನಗರ

ಬ್ರೇಕ್ ಫೇಲ್ ಆದ ಪರಿಣಾಮ ರಸ್ತೆ ತಡೆಗೋಡೆಗೆ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿಯಾಗಿ ಕೂದಲೆಳೆ ಅಂತರದಲ್ಲಿ ಪ್ರಯಾಣಿಕರು ಪಾರಾದ ಘಟನೆ ಕನಕಪುರ ತಾಲ್ಲೂಕಿನ ಸಂಗಮದ ರಸ್ತೆಯಲ್ಲಿ ನಡೆದಿದೆ.

ಕನಕಪುರದಿಂದ ಸಂಗಮದ ಕಡೆ ಹೊರಟಿದ್ದ ಕೆಎಸ್‌ಆರ್‌ಟಿಸಿ ಬಸ್, ಸಂಗಮ ಸಮೀಪದ ತಿರುವಿನ ರಸ್ತೆಯಲ್ಲಿ ಬ್ರೇಕ್ ಫೇಲ್ ಆಗಿದೆ. ಬಸ್ ನಿಯಂತ್ರಣಕ್ಕೆ ತರಲು ಚಾಲಕ ತಡೆಗೋಡೆಗೆ ಬಸ್ ಡಿಕ್ಕಿ ಹೊಡೆಸಿದ ಬಳಿಕ ಬಸ್ ನಿಂತಿದೆ. ಸ್ವಲ್ಪ ಯಾಮಾರಿದ್ದರೂ ಪ್ರಪಾತಕ್ಕೆ ಬಸ್ ಉರುಳಿ ಬಾರಿ ಅನಾಹುತ ಸಂಭವಿಸುವ ಸಾಧ್ಯತೆ ಇತ್ತು.

ಬಸ್‌ನಲ್ಲಿ ಸುಮಾರು 70ಕ್ಕೂ ಅಧಿಕ ಪ್ರಯಾಣಿಕರು ಹೊಸ ವರ್ಷ ಹಿನ್ನೆಲೆ ಸಂಗಮದ ಶಿವನ ದೇವಾಲಯಕ್ಕೆ ಹೋಗುತ್ತಿದ್ದಾಗ ಈ ಅವಘಡ ಸಂಭವಿಸಿದೆ. ಅದೃಷ್ಟವಶಾತ್ ಪ್ರಾಣಾಪಾಯದಿಂದ ಪ್ರಯಾಣಿಕರು ಪಾರಾಗಿದ್ದಾರೆ. ಇನ್ನೂ ಸ್ಥಳಕ್ಕೆ ಸಾತನೂರು ಪೊಲೀಸರು ಹಾಗೂ ಕೆಎಸ್ ಆರ್‌ಟಿಸಿ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಮಾಗಡಿಗೆ ಪಯಣ ಇನ್ನೋವಾ ಪಲ್ಟಿಯಾಗಿ ಇಬ್ಬರು ದುರ್ಮರಣ

• ಉದಯವಾಹಿನಿ, ರಾಮನಗರ

ಇನ್ನೋವಾ ಕಾರು ಪಲ್ಟಿಯಾಗಿ ಇಬ್ಬರು ಸಾವಿಗೀಡಾದ ಘಟನೆ ಮಾಗಡಿಯ ತಾವರೆಕೆರೆ ರಸ್ತೆಯ ಜನತಾ ಕಾಲೋನಿ ಬಳಿ ನಡೆದಿದೆ. ಮೃತರನ್ನು ಬೆಂಗಳೂರು ಮೂಲದ ಮಂಜು (31) ಹಾಗೂ ಕಿರಣ್ (30) ಎಂದು ಗುರುತಿಸಲಾಗಿದೆ. ಕಾರಲ್ಲಿ 8 ಜನ ಸ್ನೇಹಿತರು ಹೊಸ ವರ್ಷದ ಪಾರ್ಟಿ ಮೂಡಲ್ಲಿ ಮುಂಜಾನೆ 3 ಗಂಟೆಗೆ ಟೀ ಕುಡಿಯೋಕೆ ಬೆಂಗಳೂರಿಂದ ಮಾಗಡಿಗೆ ಬಂದಿದ್ದರು. ಟೀ ಕುಡಿದು ವಾಪಾಸ್ ಆಗುತ್ತಿದ್ದ ವೇಳೆ ಈ ಅಪಘಾತ ಸಂಭವಿಸಿದೆ. ಕಾರಿನಲ್ಲಿದ್ದ 6 ಮಂದಿಗೆ ಗಂಭೀರ ಗಾಯಗಳಾಗಿವೆ. ಗಾಯಾಳುಗಳನ್ನ ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಮೃತದೇಹಗಳನ್ನ ಮಾಗಡಿ ಸರ್ಕಾರಿ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಸ್ಥಳಕ್ಕೆ ಮಾಗಡಿ ಪೊಲೀಸರು ಭೇಟಿ ನೀಡಿ, ಪ್ರಕರಣ ದಾಖಲಿಸಿಕೊಂಡು ಪರಿಶೀಲನೆ ನಡೆಸಿದ್ದಾರೆ.

ಮತ್ತೊಂದು ಅಪಘಾತದಲ್ಲಿ, ನಿಂತಿದ್ದ ಕ್ಯಾಂಟರ್‌ಗೆ ಸ್ವಿಫ್ಟ್ ಕಾರು ಡಿಕ್ಕಿಯಾಗಿ ಕಾರಿನಲ್ಲಿದ್ದ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿರುವುದು ಕನಕಪುರ ತಾಲ್ಲೂಕಿನ ಸಾತನೂರು ಬಸ್ ನಿಲ್ದಾಣದ ಮುಂಭಾಗ ನಡೆದಿದೆ.

ಮೃತರನ್ನು ನಿರಂಜನ್ (41) ಹಾಗೂ ವಿಶ್ವನಾಥ್ (43) ಎಂದು ಗುರುತಿಸಲಾಗಿದೆ. ಖಾಸಗಿ ರೆಸಾರ್ಟ್‌ನಲ್ಲಿ ಸ್ನೇಹಿತರ ಜೊತೆ ಪಾರ್ಟಿ ಮುಗಿಸಿ ವಾಪಾಸ್ ಬೆಂಗಳೂರು ಕಡೆಗೆ ಹೋಗುವಾಗ ಈ ಅಪಘಾತ ಸಂಭವಿಸಿದೆ. ರಸ್ತೆ ಬದಿ ನಿಂತಿದ್ದ ಕ್ಯಾಂಟರ್‌ಗೆ ಹಿಂಬದಿಯಿಂದ ಕಾರು ಡಿಕ್ಕಿಯಾಗಿದೆ. ಡಿಕ್ಕಿ ರಭಸಕ್ಕೆ ಸ್ಥಳದಲ್ಲೇ ಇಬ್ಬರು ಸಾವನ್ನಪ್ಪಿದ್ದಾರೆ. ಮತ್ತಿಬ್ಬರಿಗೆ ಗಂಭೀರವಾಗಿ ಗಾಯಗಳಾಗಿದ್ದು, ಗಾಯಾಳುಗಳನ್ನು ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಸಂಬಂಧ ಸಾತನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಹೊಸ ವರ್ಷಕ್ಕೆ ಕೇಕ್ ತರಲು ಹೋದ ಯುವಕ ಅಪಘಾತದಲ್ಲಿ ಸಾವು

• ಉದಯವಾಹಿನಿ, ತುಮಕೂರು

ಹೊಸ ವರ್ಷಕ್ಕೆ ಕೇಕ್ ತರಲು ಹೋದ ಯುವಕ ಅಪಘಾತದಲ್ಲಿ ಸಾವನ್ನಪ್ಪಿದ ಘಟನೆ ತುಮಕೂರು ಜಿಲ್ಲೆ ಕುಣಿಗಲ್ ತಾಲ್ಲೂಕಿನ ವಡ್ಡರಕುಪ್ಪೆ ಬಳಿ ನಡೆದಿದೆ. ಘಟನೆಯಲ್ಲಿ ಮಣಿಕುಪ್ಪೆ ಗ್ರಾಮದ 28 ವರ್ಷದ ಯುವಕ ಮಧು ಸಾವನಪ್ಪಿದ್ದಾನೆ. ಕೇಕ್ ಮತ್ತು ಬಿರಿಯಾನಿ ತೆಗೆದುಕೊಂಡು ಬೈಕಲ್ಲಿ ಬರುವಾಗ ಅಪರಿಚಿತ ವಾಹನ ಡಿಕ್ಕಿಯಾಗಿ ಅಪಘಾತ ಸಂಭವಿಸಿದೆ. ಕೂಡಲೇ ಸ್ಥಳೀಯರು ಕುಣಿಗಲ್ ಆಸ್ಪತ್ರೆಗೆ ದಾಖಲಿಸಿದ್ದರೂ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದಾನೆ. ಘಟನೆ ಸಂಬಂಧ ಕುಣಿಗಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ದುಷ್ಕರ್ಮಿಗಳಿಂದ ಬೆಳೆ ನಾಶ

• ಉದಯವಾಹಿನಿ, ಶಿಡ್ಲಘಟ್ಟ

ತಾಲ್ಲೂಕಿನ ಜಂಗಮಕೋಟೆ ಹೋಬಳಿಯ ಕೆ.ಜಿ.ಚಿಕ್ಕಬಲ್ಲ ಗ್ರಾಮದ ಟಿ.ಎಂ.ರಾಮಕೃಷ್ಣ ಎಂಬುವವರಿಗೆ ಸೇರಿದ ಎರಡು ಎಕರೆ ತೋಟದಲ್ಲಿ ಬೆಳೆದಿದ್ದ ಸುಮಾರು 300 ಚಪ್ಪರ ಬದನೆಕಾಯಿ ಗಿಡಗಳನ್ನು ದುಷ್ಕರ್ಮಿಗಳು ಕತ್ತರಿಸಿ ಹಾಕಿದ್ದಾರೆ. ತೋಟದ ಮಾಲೀಕ ಟಿ.ಎಂ. ರಾಮಕೃಷ್ಣ ಮಾತನಾಡಿ, ಕಳೆದ ಶನಿವಾರ ಮಧ್ಯರಾತ್ರಿ ತೋಟಕ್ಕೆ ನುಗ್ಗಿದ ದುಷ್ಕರ್ಮಿಗಳು ಕಾಯಿ ಬಿಡುವ ಹಂತದಲ್ಲಿದ್ದ ಸುಮಾರು 300ಕ್ಕೂ ಹೆಚ್ಚು ಗಿಡಗಳನ್ನು ಕತ್ತರಿಸಿ ಹಾಕಿದ್ದಾರೆ. ಇದರಿಂದ ನಮಗೆ ಸುಮಾರು 4 ರಿಂದ 5 ಲಕ್ಷ ನಷ್ಟ ಉಂಟಾಗಿದೆ. ಬೆಳೆ ನಾಶವಾಗಿರುವ ಸಂಬಂಧವಾಗಿ ಪೊಲೀಸರಿಗೆ ದೂರು ನೀಡಿದ್ದು, ರಕ್ಷಣೆ ಸೇರಿದಂತೆ ದುಷ್ಕರ್ಮಿಗಳನ್ನು ಪತ್ತೆಹಚ್ಚಿ ನ್ಯಾಯ ಒದಗಿಸಬೇಕು.

## ಚರ್ಚ್‌ಗಳಲ್ಲಿ ಹೊಸ ವರ್ಷ ಆಚರಣೆ

• ಉದಯವಾಹಿನಿ, ಕೊಳ್ಳೇಗಾಲ

ತಾಲ್ಲೂಕಿನಾದ್ಯಂತ ಎಲ್ಲಾ ಚರ್ಚ್‌ಗಳಲ್ಲಿ ಬುಧವಾರ ಹೊಸವರ್ಷ ಆಚರಣೆಯನ್ನು ಸಂಭ್ರಮದಿಂದ ಆಚರಣೆ ಮಾಡಿದರು. ನಗರದ ಬೆತೆಲ್ ಲೂಥರನ್ ಚರ್ಚ್, ಸಂತ ಫ್ರಾನ್ಸಿಸ್ ಅಸಿಸ್ಸಿ ಚರ್ಚ್, ಬ್ರದರನ್ ಚರ್ಚ್, ಸೆವೆಂತ್ ಡೇ ಚರ್ಚ್, ಸಿಎಸ್‌ಐ ಚರ್ಚ್, ಅರುಣೋದಯ ಚರ್ಚ್, ಕಲ್ವಾರಿ ಎಜಿ ಚರ್ಚ್, ಗ್ರೇಸ್ ಚರ್ಚ್ ಸೇರಿದಂತೆ ಎಲ್ಲಾ ಚರ್ಚ್‌ಗಳಲ್ಲಿಯೂ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ನಗರದ ಲೂಥರನ್ ಚರ್ಚ್ ಫಾಸ್ಟರ್ ರೆ. ಜೋಶುವಾ ಪ್ರಸನ್ನ ಕುಮಾರ್, ರೆ. ನಂದಕುಮಾರ್ ಹಾಗೂ ರೆ. ಅಡಿಸ್ ಅರ್ನಾಲ್ಡ್ ಅವರು ಸಭಿಕರಿಗೆ ವಿಶೇಷ ಬೋಧನೆ ನಡೆಸಿ, ಸಂಗೀತದ ಮೂಲಕ ಪ್ರಾರ್ಥನೆ ಸಲ್ಲಿಸಿದರು.

ಮಂಗಳವಾರ ರಾತ್ರಿ 10 ಗಂಟೆಗೆ ಚರ್ಚ್‌ನಲ್ಲಿ ವಿಶೇಷ ಪ್ರಾರ್ಥನೆ ಆರಂಭಿಸಿ ರಾತ್ರಿ ಒಂದು ಗಂಟೆಗೆ ಮುಕ್ತಾಯ ಮಾಡಿದರು. ಬಳಿಕ ಸಭೆಯವರಿಗೆಲ್ಲರಿಗೂ ಚಹಾ, ಕಾಫಿ, ಚಕ್ಕುಲಿ, ನಿಪ್ಪಟ್ಟು ಹಾಗೂ ಕೇಕ್ ಅನ್ನು ವಿತರಿಸಿದರು. ಎಲ್ಲರೂ ಪರಸ್ಪರ ಹೊಸ ವರ್ಷದ ಶುಭಾಶಯ ವಿನಿಮಯ ಮಾಡಿದರು. ಬುಧವಾರ ಬೆಳಿಗ್ಗೆ 10 ಗಂಟೆಗೆ ವಿಶೇಷವಾಗಿ ಪ್ರಾರ್ಥನೆ ಸಲ್ಲಿಸಿ, ಉತ್ತಮ ಮಳೆ, ದೇಶಕ್ಕಾಗಿ ಪ್ರಾರ್ಥನೆಯನ್ನು ಸಲ್ಲಿಸಿದರು. ಎಲ್ಲರಿಗೂ ಕರ್ತನ ಭೋಜನ ನೀಡಿದರು. ಎಲ್ಲರೂ ಒಟ್ಟಾಗಿ ಭೋಜನ ಸೇವಿಸಿದರು. ಮಕ್ಕಳಿಗೆ ಹಾಗೂ ಯವಜನರಿಗೆ ಕ್ರೀಡೆ ಆಯೋಜಿಸಲಾಗಿತ್ತು. ಲೂಥರನ್ ಚರ್ಚ್ ಅಧ್ಯಕ್ಷ ಜಾನ್ ಪೀಟರ್, ಮುಖಂಡ ನರೇಂದ್ರ ನಾಥ್, ಜಾನ್, ಗ್ಯಾಬ್ರಿಯಲ್, ಕಿರಣ್, ಅಮರೇಶ್, ವಿಜಯ್ ಕುಮಾರ್, ಗೆಬ್ರಿಯಲ್, ಅರುಣ್ ಕುಮಾರ್, ಜೀವನ್ ಸನ್, ಮಹಿಳೆಯರು, ಮಕ್ಕಳು, ಹಿರಿಯರು ಭಾಗವಹಿಸಿದ್ದರು.



ನಿರ್ದೇಶನದತ್ತ ರಂಜನಿ ರಾಘವನ್

ಪುಟ್ಟಗೌರಿ ಮದುವೆ, ಕನ್ನಡತಿ ಸೀರಿಯಲ್‌ಗಳ ಮೂಲಕ ಗಮನ ಸೆಳೆದ ಪ್ರತಿಭಾನ್ವಿತ ನಟಿ ರಂಜನಿ ರಾಘವನ್ ನಿರ್ದೇಶನದತ್ತಮುಖ ಮಾಡಿದ್ದಾರೆ. ಹೊಸ ವರ್ಷದಂದು ನಿರ್ದೇಶನ ಮಾಡುತ್ತಿರುವ ಕುರಿತು ಫ್ಯಾನ್ಸ್‌ಗೆ ಗುಡ್ ನ್ಯೂಸ್ ಹಂಚಿಕೊಂಡಿದ್ದಾರೆ. ಸೋಷಿಯಲ್ ಮೀಡಿಯಾದಲ್ಲಿ ನಟಿ ಪೋಸ್ಟ್ ಮಾಡಿದ್ದಾರೆ. ಹೊಸ ವರ್ಷದ ದಿನ ನನ್ನ ಹೊಸ ಕೆಲಸದ ಬಗ್ಗೆ ಹೇಳಿಕೊಳ್ಳಲು ಭಯ ಉತ್ಸಾಹ ಎರಡೂ ಇದೆ. ಈ ಹಿಂದೆ ಬರವಣಿಗೆ ಮತ್ತು ನಟನೆಯ ಮೂಲಕ ಕಥೆಗಳನ್ನ ತಲುಪಿಸೋ ಪ್ರಯತ್ನ ಮಾಡಿದ್ದೇನೆ. ಈಗ ಮೊದಲ ಬಾರಿಗೆ ಕಥೆಯೊಂದನ್ನ ದೊಡ್ಡ ಪರದೆಯ ಮೇಲೆ ನಿಮಗೆ ತೋರಿಸುವತ್ತ ಕೆಲಸ ನಡೆದಿದೆ. ಹೊಸ ಕೆಲಸ ಅನ್ನುವುದಕ್ಕಿಂತ ಸಿನಿಮಾ ನಿರ್ದೇಶಕಿ

# ಕನ್ನಡತಿಯ ಚಿತ್ರಕ್ಕೆ ಇಳಯರಾಜ ಸಾಥ್


ಆಗಬೇಕೆಂಬ ಕನಸು ಹೊತ್ತು ಬಹಳ ವರ್ಷಗಳೇ ಸರಿದಿದೆ. ಈ ಕತೆ ಹುಟ್ಟಿ ಎರಡು ವರ್ಷಗಳಾಗಿವೆ. ಒಂದೂವರೆ ವರ್ಷದಿಂದ ಇದರ ಚಿತ್ರಕತೆಯನ್ನ ಬರೆದು ತಿದ್ದಿದ್ದೇನೆ. ಚಿತ್ರರಂಗದ ಹಲವಾರು ಜನರ ಸಹಾಯ ಪ್ರೋತ್ಸಾಹದಿಂದ, ನಮ್ಮ ನಿರ್ಮಾಪಕರಾದ ಡಾ.ಆನಂದ್ ಮತ್ತು ರಾಮಕೃಷ್ಣ ಸುಬ್ರಮಣ್ಯಂ ಅವರ ಸಹಕಾರದಿಂದ ನಮ್ಮ ಸಿನಿಮಾ ಬಗ್ಗೆ ಮಾತನಾಡುವ ಧೈರ್ಯ ಬಂದಿದೆ ಎಂದು ಬರೆದುಕೊಂಡಿದ್ದಾರೆ. ಈ ಪಯಣದಲ್ಲಿ ಮುಖ್ಯವಾಗಿ ನನಗೆ ಶಕ್ತಿಯಾಗಿರುವವರು ಇಸೈಜ್ಞಾನಿ ಇಳಯರಾಜ ಸರ್. 1000 ಹೆಚ್ಚು ಚಿತ್ರಕ್ಕೆ ಸಂಗೀತ ನೀಡಿರುವವರು ನನ್ನ ಕತೆಯನ್ನ ಮೆಚ್ಚಿ ಜೊತೆಗೆ ನಿಂತಿದ್ದಾರೆ. ಸೆಪ್ಟೆಂಬರ್ 13ರಂದು 2023ರ ವೇಳೆ ಅವರನ್ನ ಭೇಟಿ ಆಗಿ ಕತೆ ಹೇಳುವ ಅದೃಷ್ಟ ಸಿಕ್ಕಾಗ ಚೆನ್ನೈಗೆ ಹೋಗಿ ಅವರನ್ನ ಭೇಟಿ ಆಗಿ, ಕಾಲಿಗೆ ಬಿದ್ದು ಒಂದು ಫೋಟೋ ತೆಗೆಸಿಕೊಂಡು ಬಂದ್ರೆ ಅದೇ ದೊಡ್ಡದು ಅಂತಷ್ಟೇ ಅಂದುಕೊಂಡಿದ್ದು. ಕನ್ನಡದಲ್ಲಿ ಕಥೆ ಹೇಳಮ್ಮ, ಕನ್ನಡ ನನಗೆ ಚೆನ್ನಾಗಿ ಬರುತ್ತೆ ಕೊಲ್ಲೂರು ಮೂಕಾಂಬಿಕೆ ನನ್ನವ್ವ ಎಂದು ಮಾತು ಶುರು ಮಾಡಿದವರು ಮೂರೇ ದಿನದಲ್ಲಿ ಕಥೆ ನನ್ನ ಮನಸ್ಸಿಗೆ ಬಹಳ ಹತ್ತಿರವಾಗಿದೆ ಎಂದು ತಿಳಿಸಿ ನಮ್ಮ ಸಿನಿಮಾದ ಭಾಗವಾಗಿ, ಇವತ್ತಿಗೆ ಇಳಯರಾಜ ಸರ್ ನಮಗೆ 'ಒನ್ ಕಾಲ್ ಅವೇ' ಅನ್ನೋ ಜಂಭ ಹುಟ್ಟಿಸಿದ್ದಾರೆ.

## ಹೊಸ ವರ್ಷದ ದಿನವೇ ಡೆವಿಲ್‌ನಲ್ಲಿ ದರ್ಶನ್ ಬ್ಯುಸಿ



ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜಾಮೀನು ಸಿಕ್ಕ ಬೆನ್ನಲ್ಲೇ ಸಿನಿಮಾ ಕೆಲಸದಲ್ಲಿ ದರ್ಶನ್ ಬ್ಯುಸಿಯಾಗಿದ್ದಾರೆ. ಹೊಸ ವರ್ಷದ ದಿನವೇ 'ಡೆವಿಲ್' ಸಿನಿಮಾದ ಡಬ್ಬಿಂಗ್‌ನಲ್ಲಿ ದರ್ಶನ್ ನಿರತರಾಗಿದ್ದಾರೆ. ಸದ್ಯ ಬೇಲ್ ಮೇಲಿರುವ ದರ್ಶನ್ ಅವರು ಬೆನ್ನು ನೋವಿಗೆ ಚಿಕಿತ್ಸೆ ಕೂಡ ಪಡೆಯುತ್ತಿದ್ದಾರೆ. ಇದರ ನಡುವೆ ಹೊಸ ವರ್ಷದ ದಿನವೇ 'ಡೆವಿಲ್' ಡಬ್ಬಿಂಗ್ ಕಾರ್ಯ ಶುರು ಮಾಡಿದ್ದಾರೆ. ಈ ಹಿಂದೆಯೇ ಅವರು 'ಡೆವಿಲ್' ಸಿನಿಮಾದ 50%ರಷ್ಟು ಚಿತ್ರೀಕರಣ ಮುಗಿಸಿದ್ದರು. ಈಗ ಡಬ್ಬಿಂಗ್‌ನಲ್ಲಿ ತೊಡಗಿಸಿಕೊಂಡಿದ್ದಾರೆ. ದರ್ಶನ್ ಆರೋಗ್ಯದಲ್ಲಿ ಕೊಂಚ ಚೇತರಿಸಿಕೊಂಡ್ಮೇಲೆ ಫೆ.22ರ ಬಳಿಕ 'ಡೆವಿಲ್' ಸಿನಿಮಾದ ಶೂಟಿಂಗ್‌ನಲ್ಲಿ ಭಾಗಿಯಾಗಲಿದ್ದಾರೆ. ಇನ್ನೂ ಈ ಚಿತ್ರವನ್ನು ಮಿಲನಾ ಪ್ರಕಾಶ್ ನಿರ್ದೇಶನ ಮಾಡುತ್ತಿದ್ದಾರೆ. ದರ್ಶನ್‌ಗೆ ಕುಡ್ಲದ ಕುವರಿ ರಚನಾ ರೈ ನಾಯಕಿಯಾಗಲಿದ್ದಾರೆ.

## ಶಿವಣ್ಣ-ಫ್ಯಾನ್ಸ್‌ಗೆ ಗುಡ್ ನ್ಯೂಸ್



ಅಮೆರಿಕದಿಂದಲೇ ಅಭಿಮಾನಿಗಳಿಗೆ ಸಂದೇಶವೊಂದನ್ನು ಶಿವಣ್ಣ ದಂಪತಿ ರವಾನಿಸಿದ್ದಾರೆ. ಗೀತಾ ಶಿವರಾಜ್‌ಕುಮಾರ್ ಮಾತನಾಡಿ, ಎಲ್ಲರಿಗೂ ಹೊಸ ವರ್ಷದ ಶುಭಾಶಯಗಳು. ನೀವೆಲ್ಲರೂ ಮಾಡಿದ ಪ್ರಾರ್ಥನೆಯಿಂದ ಶಿವರಾಜ್‌ಕುಮಾರ್ ಎಲ್ಲಾ ರಿಪೋರ್ಟ್ ನೆಗೆಟಿವ್ ಬಂತು. ಅವರೀಗ ಕ್ಯಾನ್ಸರ್ ಫ್ರೀ ಅಂತ ವೈದ್ಯರು ಅಫಿಷಿಯಲಿ ಹೇಳಿದ್ದಾರೆ. ನಿಮ್ಮೆಲ್ಲರ ಹಾರೈಕೆಯಿಂದ ಅವರು ಗುಣಮುಖರಾಗಿದ್ದಾರೆ. ಇದನ್ನೂ ನಾನು ಎಂದಿಗೂ ಮರೆಯೋದಿಲ್ಲ ಎಂದಿದ್ದಾರೆ. ಬಳಿಕ ಶಿವಣ್ಣ ಮಾತನಾಡಿ, ಎಲ್ಲಾರಿಗೂ ಹೊಸ ವರ್ಷದ ಶುಭಾಶಯಗಳು. ಭಯ ಆಗುತ್ತೆ ಮಾತನಾಡಬೇಕಾದರೆ, ಎಲ್ಲಿ ಎಮೋಷನಲ್ ಆಗಿ ಬಿಡ್ತೀನಿ ಅಂತ. ಇಲ್ಲಿಂದ ಹೋಗುವಾಗ ಎಮೋಷನಲ್ ಆಗಿದ್ದೆ, ಭಯ ಅನ್ನೋದು ಇದ್ದೇ ಇರುತ್ತದೆ. ಆ ಭಯ ಕಮ್ಮಿ ಮಾಡೋಕೆ ಎಂದೇ ಅಭಿಮಾನಿ ದೇವರುಗಳಿದ್ದಾರೆ. ವೈದ್ಯರು ನನ್ನ ನೋಡಿಕೊಂಡ ರೀತಿಯಿಂದ ಇನ್ನಷ್ಟು ಧೈರ್ಯ ಬಂತು. '45' ಚಿತ್ರದ ಶೂಟಿಂಗ್ ಮಾಡುವಾಗ ಕಿಮೋ ಥೆರಾಫಿಯಲ್ಲಿ ಕೆಲಸ ಮಾಡಿದ್ದೀನಿ. ಕ್ಲೈಮ್ಯಾಕ್ಸ್ ಫೈಟ್ ಎಲ್ಲಾ ಮಾಡಿದ್ದೇನೆ ಎಂದು ನಟ ಹಂಚಿಕೊಂಡರು. ಅಮೆರಿಕಗೆ ಚಿಕಿತ್ಸೆಗೆ ಹೊರಡುವ ಡೇಟ್ ಹತ್ತಿರ ಬಂದಾಗ ಸ್ವಲ್ಪ ಟೆನ್ಷನ್ ಜಾಸ್ತಿ ಆಯಿತು. ಆದರೆ ಸದಾ ಪತ್ನಿ ಗೀತಾ ಮತ್ತು ಮಗಳು ನಿವಿ ನನ್ನ ಜೊತೆ ಬೆಂಬಲವಾಗಿ ನಿಂತಿದ್ದಾರೆ. ನನ್ನ ಚಿಕಿತ್ಸೆ ಮಾಡಿದ ವೈದ್ಯ ಮನೋಹರ್ ಅವರು ಮಗುವಿನಂತೆ ನನ್ನ ನೋಡಿಕೊಂಡರು. ಯೂರಿನರಿ ಬ್ಲಾಡ್ ತೆಗೆದು ಹೊಸದು ಬ್ಲಾಡ್ ಹಾಕಿದ್ದಾರೆ. ನಾನು ಆರಾಮ ಆಗಿದ್ದೇನೆ. ಡಬಲ್ ಪವರ್‌ನೊಂದಿಗೆ ಬರುತ್ತೇನೆ. ಎಲ್ಲಾ ಅಭಿಮಾನಿ ದೇವರುಗಳಿಗೂ ಧನ್ಯವಾದಗಳು ಎಂದು ಶಿವಣ್ಣ ಮಾತನಾಡಿದ್ದಾರೆ.

## ಇಲಿಯಾನಾ ಮತ್ತೆ ಪ್ರೆಗ್ನೆಂಟ್

### ಹೊಸ ವರ್ಷದಂದು ಸುಳಿವು ಕೊಟ್ರಾ ನಟಿ



ಬಾಲಿವುಡ್ ಬೆಡಗಿ ಇಲಿಯಾನಾ ಹೊಸ ವರ್ಷದಂದು ಫ್ಯಾನ್ಸ್‌ಗೆ ಅಪ್‌ಡೇಟ್‌ವೊಂದನ್ನು ಹಂಚಿಕೊಂಡಿದ್ದಾರೆ. ಅಭಿಮಾನಿಗಳಿಗೆ ಶುಭಹಾರೈಸುವ ಭರದಲ್ಲಿ ಮತ್ತೆ ಇಲಿಯಾನಾ ಪ್ರೆಗ್ನೆಂಟ್ ಆದ್ರಾ ಎಂಬ ಅನುಮಾನ ಎಲ್ಲರಲ್ಲಿ ಮೂಡಿದೆ. ಇದೀಗ ನಟಿಯ ಹೊಸ ಪೋಸ್ಟ್ ನೆಟ್ಟಿಗರ ಚರ್ಚೆಗೆ ಗ್ರಾಸವಾಗಿದೆ. ಇದೀಗ ಹಂಚಿಕೊಂಡಿರುವ ಪೋಸ್ಟ್‌ನಲ್ಲಿ 2024 ಹೇಗಿತ್ತು ಎಂಬ ಸಣ್ಣ ವಿಡಿಯೋವನ್ನು ನಟಿ ಶೇರ್ ಮಾಡಿದ್ದಾರೆ. ಅದರಲ್ಲಿ ಗಮನ ಸೆಳೆದಿದ್ದು, ಅಕ್ಟೋಬರ್ ತಿಂಗಳು. ಪ್ರೆಗ್ನೆನ್ಸಿ ಪರೀಕ್ಷೆಯ ಕಿಟ್ ಹಿಡಿದು ಎಮೋಷನಲ್ ಆಗಿ ಕಾಣಿಸಿಕೊಂಡಿದ್ದಾರೆ. ಇದರಿಂದ ಅವರು ಮತ್ತೆ ತಾಯಿಯಾಗಿದ್ದಾರಾ ಎಂಬ ಅನುಮಾನ ಅಭಿಮಾನಿಗಳಲ್ಲಿ ಪ್ರಶ್ನೆ ಮೂಡಿದೆ. 2023ರಲ್ಲಿ ಮೈಕಲ್ ಡೋಲನ್ ಎಂಬುವರನ್ನು ನಟಿ ಮದುವೆಯಾದರು. ಕಳೆದ ವರ್ಷ ಚೊಚ್ಚಲ ಮಗುವನ್ನು ಬರಮಾಡಿಕೊಂಡರು.

ಪತಿಯ ಪರಿಚಯದ ಬಗ್ಗೆ ಅವರು ಗೌಪ್ಯವಾಗಿಯೇ ಇಟ್ಟಿದ್ದಾರೆ. ಇನ್ನೂ ಬಹುಭಾಷಾ ನಟಿಯಾಗಿ ಗುರುತಿಸಿಕೊಂಡಿರುವ ಇಲಿಯಾನಾ ಧ್ಯಾನ್ ನಟನೆಯ ಕನ್ನಡದ 'ಹುಡುಗ ಹುಡುಗಿ' ಎಂಬ ಸಿನಿಮಾದ ಹಾಡೊಂದರಲ್ಲಿ ಹೆಜ್ಜೆ ಹಾಕಿದ್ದರು.

## ಸುದೀಪ್ ಅಕ್ಕನ ಮಗ ಎಂಟ್ರಿ



'ಮ್ಯಾಕ್ಸ್' ಸಿನಿಮಾದ ಸಕ್ಸಸ್ ಖುಷಿಯಲ್ಲಿರುವ ಕಿಚ್ಚ ಸುದೀಪ್ ಅಭಿಮಾನಿಗಳಿಗೆ ಮತ್ತೊಂದು ಭರ್ಜರಿ ಸುದ್ದಿ ಕೊಟ್ಟಿದ್ದಾರೆ. ಹೊಸ ವರ್ಷಕ್ಕೆ ನಟ ಹೊಸ ಸಿನಿಮಾ ಅನೌನ್ಸ್ ಮಾಡಿದ್ದಾರೆ. ಕಿಚ್ಚನ ಕಡೆಯಿಂದ ಬಂದ ಸುದ್ದಿ ಕೇಳಿ ಫ್ಯಾನ್ಸ್ ಫುಲ್ ಥ್ರಿಲ್ ಆಗಿದ್ದಾರೆ. ಅಂದಹಾಗೆ, ಇದು ಸುದೀಪ್ ನಾಯಕನಾಗಿ ನಟಿಸುತ್ತಿರುವ ಸಿನಿಮಾ ಅಲ್ಲ, ಬದಲಾಗಿ ಸುದೀಪ್ ನಿರ್ಮಾಣ ಮಾಡುತ್ತಿರುವ ಚಿತ್ರ. ಕಿಚ್ಚನ ಸುಪ್ರಿಯಾನ್ವಿ ಪ್ರೊಡಕ್ಷನ್ ಮತ್ತು ಏಖಲು ಪ್ರೊಡಕ್ಷನ್ಸ್ ಜಂಟಿಯಾಗಿ ನಿರ್ಮಾಣ ಮಾಡುತ್ತಿರುವ ಸಿನಿಮಾ ಇದಾಗಿದೆ. ಈ ಸಿನಿಮಾಗೆ ನಾಯಕನಾಗಿ ಸುದೀಪ್ ಅಕ್ಕನ ಮಗ ಸಂಚಿತ್ ಸಂಜೀವ್ ನಾಯಕನಾಗಿ ನಟಿಸುತ್ತಿದ್ದಾರೆ. ಸಂಚಿತ್ ಚೊಚ್ಚಲ ಸಿನಿಮಾವಾಗಿದ್ದು, ಮೊದಲ ಸಿನಿಮಾಗೆ ಸುದೀಪ್ ಬಂಡವಾಳ ಹೂಡುತ್ತಿರೋದು ಸಿನಿಮಾ ಮೇಲಿನ ನಿರೀಕ್ಷೆಯನ್ನ ದುಪ್ಪಟ್ಟು ಮಾಡಿದೆ. ಇನ್ನು 'ಎಕ್ಕ' ಸಿನಿಮಾದ ಬಳಿಕ ಸ್ಟುಡಿಯೋಸ್ ಮತ್ತೊಂದು ಸಿನಿಮಾ ಅನೌನ್ಸ್ ಮಾಡಿದೆ. ಏಖಲು ಕಡೆಯಿಂದ ಬ್ಯಾಕ್ ಟು ಬ್ಯಾಕ್ ಸಿನಿಮಾಗಳು ಬರುತ್ತಿದೆ. ಸುದೀಪ್ ಸಹೋದರಿಯ ಪುತ್ರನ ಸಿನಿಮಾ ಆಗಿರೋದ್ರಿಂದ ಈ ಪ್ರಾಜೆಕ್ಟ್ ಮೇಲೆ ನಿರೀಕ್ಷೆ ಹೆಚ್ಚಾಗಿದೆ.

## ಇತಿಹಾಸ ಸೃಷ್ಟಿಸಿದ ಜಸ್ಪ್ರೀತ್ ಬುಮ್ರಾ



### ಬುಮ್ರಾ ಪ್ರದರ್ಶನ ಅಮೋಘ

ವರ್ಷದ ಮೊದಲ ದಿನವೇ ಇತಿಹಾಸ ಸೃಷ್ಟಿಸಿದ ಜಸ್ಪ್ರೀತ್ ಬುಮ್ರಾ ಆಸ್ಟ್ರೇಲಿಯಾ ವಿರುದ್ಧದ ಬಾರ್ಡರ್-ಗವಾಸ್ಕರ್ ಟ್ರೋಫಿಯಲ್ಲಿ ಅದ್ಭುತ ಪ್ರದರ್ಶನ ನೀಡುತ್ತಿರುವ ಟೀಂ ಇಂಡಿಯಾ ವೇಗಿ ಜಸ್ಪ್ರೀತ್ ಬುಮ್ರಾ, ಐಸಿಸಿ ಟೆಸ್ಟ್ ಬೌಲರ್ ಶ್ರೇಯಾಂಕದಲ್ಲಿ ನಂಬರ್ ಒನ್ ಸ್ಥಾನವನ್ನು ಪಡೆದು ಕೊಂಡಿದ್ದಾರೆ. ಇದೀಗ 907 ರೇಟಿಂಗ್ ಪಾಯಿಂಟ್‌ಗಳನ್ನು ಕಲೆಹಾಕಿರುವ ಬುಮ್ರಾ, ಭಾರತೀಯ ಟೆಸ್ಟ್ ಬೌಲರ್‌ಗಳ ಇತಿಹಾಸದಲ್ಲಿ ಹೆಚ್ಚು ರೇಟಿಂಗ್ ಪಾಯಿಂಟ್‌ಗಳನ್ನು ಪಡೆದ ಮೊದಲ ವೇಗಿ ಎಂಬ ಇತಿಹಾಸ ಸೃಷ್ಟಿಸಿದ್ದಾರೆ.

ಟೀಂ ಇಂಡಿಯಾದ ವೇಗದ ಬೌಲರ್ ಜಸ್ಪ್ರೀತ್ ಬುಮ್ರಾ ಪ್ರಸ್ತುತ ನಡೆಯುತ್ತಿರುವ ಆಸ್ಟ್ರೇಲಿಯಾ ವಿರುದ್ಧದ ಬಾರ್ಡರ್ ಗವಾಸ್ಕರ್ ಟ್ರೋಫಿಯಲ್ಲಿ ಅದ್ಭುತ ಪ್ರದರ್ಶನ ನೀಡುತ್ತಿದ್ದಾರೆ. ಈ ಮೂಲಕ ಈ ಸರಣಿಯಲ್ಲಿ ಅತಿ ಹೆಚ್ಚು ವಿಕೆಟ್ ಪಡೆದ ಬೌಲರ್ ಎನಿಸಿಕೊಂಡಿದ್ದಾರೆ. ಇದರ ಲಾಭ ಪಡೆದಿರುವ ಬುಮ್ರಾ, ಐಸಿಸಿ ಟೆಸ್ಟ್ ಶ್ರೇಯಾಂಕದಲೂ ನಂಬರ್ 1 ಬೌಲರ್ ಎನಿಸಿಕೊಂಡಿದ್ದಾರೆ. ಇದೀಗ ಐಸಿಸಿ 2025ರ ಮೊದಲ ರ್‍ಯಾಂಕಿಂಗ್ ಪಟ್ಟಿಯನ್ನು ಬಿಡುಗಡೆ ಮಾಡಿದ್ದು, ಇದರಲ್ಲಿ ಯಾರ್ಕರ್ ಕಿಂಗ್ ಜಸ್ಪ್ರೀತ್ ಬುಮ್ರಾ, ಹೊಸ ಇತಿಹಾಸ ಸೃಷ್ಟಿಸಿದ್ದಾರೆ. ಜಸ್ಪ್ರೀತ್ ಬುಮ್ರಾ ಈ ಹಿಂದೆ ಯಾವುದೇ ಭಾರತೀಯ ಬೌಲರ್ ಮಾಡದ ಸಾಧನೆ ಮಾಡಿದ್ದಾರೆ. ಮೆಲ್ಬೋರ್ನ್ ಟೆಸ್ಟ್‌ನಲ್ಲಿ 9 ವಿಕೆಟ್ ಪಡೆದಿದ್ದ ಜಸ್ಪ್ರೀತ್ ಬುಮ್ರಾ, ಇದೀಗ ಬಿಡುಗಡೆಯಾಗಿರುವ ಐಸಿಸಿ ಟೆಸ್ಟ್ ಬೌಲರ್‌ಗಳ ರ್‍ಯಾಂಕಿಂಗ್ ಪಟ್ಟಿಯಲ್ಲಿ ತಮ್ಮ ಅಗ್ರಸ್ಥಾನವನ್ನು ಉಳಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

## ರೋಹಿತ್-ಕೊಹ್ಲಿಗೆ ಹಿಂಬಡ್ತಿ ಯಾರ್ಯಾರಿಗೆ ಮುಂಬಡ್ತಿ




### ಜೈಸ್ವಾಲ್‌ಗೆ ಮುಂಬಡ್ತಿ ಸಿಗುವ ಸಾಧ್ಯತೆ

2024ರಲ್ಲಿ ಟೀಂ ಇಂಡಿಯಾದ ಆಟಗಾರರ ಪ್ರದರ್ಶನದ ಆಧಾರದ ಮೇಲೆ 2025ರ ಬಿಸಿಸಿಐ ಕೇಂದ್ರ ಒಪ್ಪಂದದಲ್ಲಿ ಬದಲಾವಣೆಗಳನ್ನು ನಿರೀಕ್ಷಿಸಲಾಗಿದೆ. ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಅವರಿಗೆ ಹಿಂಬಡ್ತಿ ಸಿಗುವ ಸಾಧ್ಯತೆಯಿದ್ದರೆ, ಜೈಸ್ವಾಲ್ ಮತ್ತು ನಿತೀಶ್ ರೆಡ್ಡಿ ಅವರಿಗೆ ಬಡ್ತಿ ಸಿಗುವ ನಿರೀಕ್ಷೆಯಿದೆ. ಪಂತ್ ಮತ್ತು ಜಡೇಜಾ ಅವರ ಗ್ರೇಡ್ ಕೂಡ ಬದಲಾಗಬಹುದು. ಕೆಎಲ್ ರಾಹುಲ್ ಮತ್ತು ಗಿಲ್ ಅವರ ಪ್ರದರ್ಶನದ ಆಧಾರದ ಮೇಲೆ ನಿರ್ಧಾರ ಕೈಗೊಳ್ಳಲಾಗುವುದು. 2024 ರಲ್ಲಿ ಟೀಂ ಇಂಡಿಯಾದ ಪ್ರದರ್ಶನ ಸಾಕಷ್ಟು ಏರಿಳಿತಗಳಿಂದ ಕೂಡಿತ್ತು. ಕಳೆದ ವರ್ಷ ತಂಡ ಟಿ20 ವಿಶ್ವಕಪ್ ಗೆದ್ದುಕೊಂಡಿದ್ದನ್ನು ಬಿಟ್ಟರೆ ಉಳಿದಂತೆ ಯಾವುದೇ ಗಮನಾರ್ಹ ಪ್ರದರ್ಶನ ನೀಡಲಿಲ್ಲ. ಒಂದೆಡೆ ತಂಡದ ಅನುಭವಿಗಳು ಕಳಪೆ ಫಾರ್ಮ್‌ಗೆ ತುತ್ತಾದರೆ, ಮತ್ತೊಂದೆಡೆ ಯುವ ಆಟಗಾರರು ಗಮನಾರ್ಹ ಪ್ರದರ್ಶನ ನೀಡಿದರು. ಹೀಗಾಗಿ 2025ರಲ್ಲಿ ಟೀಂ ಇಂಡಿಯಾದ ಅನುಭವಿಗಳಿಗೆ ಬಿಸಿಸಿಐ ದೊಡ್ಡ ಹೊಡೆತ ನೀಡುವ ಸಾಧ್ಯತೆಗಳಿದ್ದು, ಕೇಂದ್ರ ಗುತ್ತಿಗೆಯಲ್ಲಿ ಸಾಕಷ್ಟು ಬದಲಾವಣೆಗಳಾಗಬಹುದು ಎನ್ನಲಾಗುತ್ತಿದೆ. ಆ ಪ್ರಕಾರ ಪ್ರಸ್ತುತ ಎ+ ಗ್ರೇಡ್‌ನಲ್ಲಿರುವ ಆಟಗಾರರು ಹಿಂಬಡ್ತಿ ಪಡೆಯುವ ಸಾಧ್ಯತೆ ಇದೆ. ಹಾಗೆಯೇ ಉತ್ತಮ ಪ್ರದರ್ಶನ ನೀಡಿದ ಜೈಸ್ವಾಲ್ ಮತ್ತು ನಿತೀಶ್ ರೆಡ್ಡಿಯಂತಹ ಯುವ ಆಟಗಾರರು ಮುಂಬಡ್ತಿ ಪಡೆಯುವ ಅವಕಾಶ ಹೊಂದಿದ್ದಾರೆ. ಅಷ್ಟಕ್ಕೂ ಕೇಂದ್ರ ಗುತ್ತಿಗೆಯಲ್ಲಿ ಯಾರ್ಯಾರಿಗೆ ಹಿಂಬಡ್ತಿ ಹಾಗೂ ಮುಂಬಡ್ತಿ ಸಿಗಬಹುದು ಎಂಬುದನ್ನು ನೋಡುವುದಾದರೆ.. 2024 ರಲ್ಲಿ ಟೆಸ್ಟ್ ಮತ್ತು ಏಕದಿನ ತಂಡದ ನಾಯಕ ರೋಹಿತ್ ಶರ್ಮಾ ಅವರ ಪ್ರದರ್ಶನ ತೀರ ಕಳಪೆಯಾಗಿತ್ತು. ರೋಹಿತ್ 2024 ರಲ್ಲಿ ತಂಡವನ್ನು ಟಿ20 ವಿಶ್ವಕಪ್ ಚಾಂಪಿಯನ್ ಮಾಡಿದನ್ನು ಬಿಟ್ಟರೆ, ಉಳಿದಂತೆ ಅವರ ಪ್ರದರ್ಶನ ಅಷ್ಟಕಷ್ಟೆ. ಹೀಗಾಗಿ ರೋಹಿತ್ ಅವರ ಕಳಪೆ ಪ್ರದರ್ಶನದಿಂದಾಗಿ ಬಿಸಿಸಿಐ ಅವರನ್ನು ಎ+ ಗ್ರೇಡ್‌ನಿಂದ ಎ ಗ್ರೇಡ್‌ಗೆ ಹಿಂಬಡ್ತಿ ನೀಡುವ ಸಾಧ್ಯತೆಯಿದೆ. ಸದ್ಯ ಎ+ ಗ್ರೇಡ್‌ನಲ್ಲಿರವ ರೋಹಿತ್ ವಾರ್ಷಿಕವಾಗಿ 7 ಕೋಟಿ ರೂ. ಸಂಭಾವನೆ ಪಡೆಯುತ್ತಿದ್ದಾರೆ. ಆದರೆ ಅವರು ಎ ಗ್ರೇಡ್‌ಗೆ ಹಿಂಬಡ್ತಿ ಪಡೆದರೆ ವಾರ್ಷಿಕ 5 ಕೋಟಿ ರೂ. ಸಂಭಾವನೆ ಪಡೆಯಬೇಕಾಗುತ್ತದೆ.

ವಿರಾಟ್ ಕೊಹ್ಲಿ ಸ್ಥಿತಿ ಕೂಡ ರೋಹಿತ್‌ಗಿಂತ ವಿಭಿನ್ನವಾಗಿಲ್ಲ. 2024 ರಲ್ಲಿ ವಿರಾಟ್ ಅವರ ಅಂಕಿಅಂಶಗಳು ಸಹ ರೋಹಿತ್ ಅವರ ಅಂಕಿಅಂಶಗಳನ್ನು ಹೋಲುತ್ತವೆ. ಹೀಗಾಗಿ ಪ್ರಸ್ತುತ ಎ+ ಗ್ರೇಡ್‌ನಲ್ಲಿರುವ ವಿರಾಟ್ ಕೊಹ್ಲಿ ಕೂಡ ಹಿಂಬಡ್ತಿ ಪಡೆಯಬಹುದಾಗಿದ್ದು, ವೇತನದ ವಿಚಾರದಲ್ಲಿ 2 ಕೋಟಿ ರೂ. ನಷ್ಟ ಅನುಭವಿಸಲಿದ್ದಾರೆ. 2024 ಯಶಸ್ವಿ ಜೈಸ್ವಾಲ್‌ಗೆ ಸ್ಮರಣೀಯ ವರ್ಷವಾಗಿದೆ. ಈ ವರ್ಷ ಟೆಸ್ಟ್‌ನಲ್ಲಿ 1478 ರನ್ ಕಲೆಹಾಕಿದ ಜೈಸ್ವಾಲ್ ಕಳೆದ ವರ್ಷ ಅತಿ ಹೆಚ್ಚು ಟೆಸ್ಟ್ ರನ್ ಗಳಿಸಿದ ಎರಡನೇ ಬ್ಯಾಟ್ಸ್‌ಮನ್ ಎನಿಸಿಕೊಂಡಿದ್ದಾರೆ. ಹೀಗಾಗಿ ಬಿಸಿಸಿಐ ಗುತ್ತಿಗೆಯಲ್ಲಿ ಜೈಸ್ವಾಲ್‌ಗೆ ಮುಂಬಡ್ತಿ ಸಿಗುವ ಸಾಧ್ಯತೆ ಇದೆ. ಪ್ರಸ್ತುತ ಜೈಸ್ವಾಲ್ ಬಿಸಿಸಿಐನ ಕೇಂದ್ರ ಗುತ್ತಿಗೆಯ ಬಿ ಗ್ರೇಡ್‌ನಲ್ಲಿದ್ದು ವಾರ್ಷಿಕವಾಗಿ 3 ಕೋಟಿ ರೂ. ವೇತನ ಪಡೆಯುತ್ತಿದ್ದಾರೆ. ಇತ್ತೀಚಿಗಷ್ಟೇ ಅಂತರಾಷ್ಟ್ರೀಯ ಕ್ರಿಕೆಟ್‌ಗೆ ಕಾಲಿಟ್ಟಿರುವ ನಿತೀಶ್ ಕುಮಾರ್ ರೆಡ್ಡಿ ಆಸ್ಟ್ರೇಲಿಯಾ ಪ್ರವಾಸದಲ್ಲಿ ಅದ್ಭುತ ಪ್ರದರ್ಶನ ನೀಡಿದ್ದಾರೆ. ನಿತೀಶ್ ಇದುವರೆಗೆ ನಾಲ್ಕು ಟೆಸ್ಟ್ ಪಂದ್ಯಗಳನ್ನು ಆಡಿರುವುದರಿಂದ ಅವರನ್ನು ಬಿಸಿಸಿಐನ ಕೇಂದ್ರ ಒಪ್ಪಂದದಲ್ಲಿ ಸಿ-ಗ್ರೇಡ್‌ಗೆ ಸೇರಿಸಲಾಗಿದೆ. ಈ ವಿಭಾಗದ ಆಟಗಾರರು ವಾರ್ಷಿಕ 1 ಕೋಟಿ ರೂ. ವೇತನ ಪಡೆಯಲಿದ್ದಾರೆ ಆದಾಗ್ಯೂ, ರೆಡ್ಡಿ ಅವರ ಅತ್ಯುತ್ತಮ ಪ್ರದರ್ಶನವನ್ನು ಪರಿಗಣಿಸಿ, ಬಿಸಿಸಿಐ ಅವರ ಗ್ರೇಡ್ ಅನ್ನು ಹೆಚ್ಚಿಸಬಹುದು.

## ರೋಹಿತ್-ಗಂಭೀರ್ ಇಬ್ಬರಿಗೂ ತಂಡದಿಂದ ಗೇಟ್‌ಪಾಸ್

ಆಸ್ಟ್ರೇಲಿಯಾ ಪ್ರವಾಸದಲ್ಲಿ ಟೀಂ ಇಂಡಿಯಾದ ನಿರಾಶಾದಾಯಕ ಪ್ರದರ್ಶನದಿಂದ ರೋಹಿತ್ ಶರ್ಮಾ ಮತ್ತು ಗೌತಮ್ ಗಂಭೀರ್ ಅವರ ನಾಯಕತ್ವದ ಮೇಲೆ ಪ್ರಶ್ನೆಗಳು ಎದ್ದಿವೆ. ಟೆಸ್ಟ್ ತಂಡದಿಂದ ರೋಹಿತ್ ಅವರನ್ನು ತೆಗೆದುಹಾಕುವ ಮತ್ತು ಗಂಭೀರ್ ಅವರ ಕೋಚ್ ಹುದ್ದೆಯನ್ನು ಬದಲಾಯಿಸುವ ಬಗ್ಗೆ ಚರ್ಚೆಗಳು ನಡೆಯುತ್ತಿವೆ. ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿ ಮುಗಿದ ನಂತರ ಬಿಸಿಸಿಐ ಈ ಬಗ್ಗೆ ನಿರ್ಧಾರ ಕೈಗೊಳ್ಳುವ ಸಾಧ್ಯತೆಯಿದೆ. ರೋಹಿತ್ ಶರ್ಮಾ ಮತ್ತು ಗೌತಮ್ ಗಂಭೀರ್ ಜೋಡಿ ಟೀಂ ಇಂಡಿಯಾದ ನೇತೃತ್ವವನ್ನು ಜಂಟಿಯಾಗಿ ವಹಿಸಿಕೊಂಡ ಬಳಿಕ ತಂಡ ಗೆಲುವು ಸಾಧಿಸಿದಕ್ಕಿಂತ ಸೋತಿದ್ದೆ ಹೆಚ್ಚು.

ಅದು ಬರಿ ಸೋಲಲ್ಲ ದಾಖಲೆಯ, ಅವಮಾನಕರ ಸೋಲು. ಲಂಕಾದಲ್ಲಿ ಏಕದಿನ ಸರಣಿಯಲ್ಲಿ ಕ್ಲೀನ್ ಸ್ವೀಪ್ ಮುಖಭಂಗಕ್ಕೆ ಒಳಗಾಗಿದ್ದ ರೋಹಿತ್ ಪಡೆ ಆಬಳಿಕ ತವರಿನ ಟೆಸ್ಟ್ ಸರಣಿಯಲ್ಲಿಯೂ ನ್ಯೂಜಿಲೆಂಡ್ ವಿರುದ್ಧ ಹೀನಾಯವಾಗಿ ಸೋತಿತ್ತು. ಇದೀಗ ಆಸ್ಟ್ರೇಲಿಯಾ ಪ್ರವಾಸದಲ್ಲೂ ಭಾರತ ತಂಡದ ಕಳಪೆ ಪ್ರದರ್ಶನ ಮುಂದುವರೆದಿದೆ. ಹೀಗಾಗಿ ತಂಡದ ನಾಯಕ ರೋಹಿತ್ ಶರ್ಮಾ ಹಾಗೂ ಮುಖ್ಯ ಕೋಚ್ ಗೌತಮ್ ಗಂಭೀರ್ ಮೇಲೆ ತೂಗುಗತ್ತಿ ನೇತಾಡಲು ಪ್ರಾರಂಭಿಸಿದೆ. ಒಂದೆಡೆ ನಾಯಕತ್ವದ ಜೊತೆಗೆ ರೋಹಿತ್‌ರನ್ನು ಟೆಸ್ಟ್ ತಂಡದಿಂದ ಹೊರಗಿಡುವ ಬಗ್ಗೆ ಚರ್ಚೆ ನಡೆಯುತ್ತಿದ್ದರೆ, ಮತ್ತೊಂದೆಡೆ ಮುಖ್ಯ ಕೋಚ್ ಹುದ್ದೆಯಲ್ಲಿ ಗಂಭೀರ್ ಅವರನ್ನು ಮುಂದುವರೆಸಬೇಕಾ ಎಂಬುದು ಕೂಡ ಚರ್ಚೆ ಆಗುತ್ತಿದೆ. ಹೀಗಾಗಿ ಆಸೀಸ್ ವಿರುದ್ಧದ ಟೆಸ್ಟ್ ಸರಣಿಯ ನಂತರ ಟೀಂ ಇಂಡಿಯಾದಲ್ಲಿ ಬದಲಾವಣೆಯ ಪರ್ವ ಆರಂಭವಾಗುವುದು ಖಚಿತ ಎಂದು ಹೇಳಲಾಗುತ್ತಿದೆ.

**ಟೆಸ್ಟ್‌ನಿಂದ ರೋಹಿತ್ ಶರ್ಮಾ ಔಟ್**

ವಾಸ್ತವವಾಗಿ ಆಸ್ಟ್ರೇಲಿಯಾದಲ್ಲಿ ಟೀಂ ಇಂಡಿಯಾದ ಕಳಪೆ ಪ್ರದರ್ಶನ ಬಿಸಿಸಿಐನ ನಿದ್ದೆಗೆಡಿಸಿದೆ. ಹೀಗಾಗಿ ತಂಡದ ಮುಖ್ಯ ಆಯ್ಕೆಗಾರ ಅಜಿತ್ ಅಗರ್ಕರ್ ಆಸ್ಟ್ರೇಲಿಯಾಕ್ಕೆ ಪ್ರಯಾಣ ಬೆಳೆಸಿದ್ದಾರೆ.

ಮೆಲ್ಬೋರ್ನ್ ಟೆಸ್ಟ್ ವೇಳೆ, ನಾಯಕತ್ವ ಮತ್ತು ನಿವೃತ್ತಿಯ ಬಗ್ಗೆ ಅವರ ಮತ್ತು ರೋಹಿತ್ ಶರ್ಮಾ ನಡುವೆ ಮಾತುಕತೆ ನಡೆದಿದೆ ಎಂದು ಹೇಳಲಾಗಿದೆ. ಆದರೆ ಕ್ರಿಕ್‌ಬಝ್‌ನ ವರದಿಯ ಪ್ರಕಾರ, ಜನವರಿ 3 ರಿಂದ ಪ್ರಾರಂಭವಾಗುವ ಸಿಡ್ನಿ ಟೆಸ್ಟ್‌ನಲ್ಲಿ ರೋಹಿತ್ ಟೀಂ ಇಂಡಿಯಾದ ನಾಯಕನಾಗಿ ಕಾಣಿಸಿಕೊಳ್ಳಲಿದ್ದು, ಅವರು ತಂಡದಲ್ಲಿ ಆಡುವುದು ಖಚಿತವಾಗಿದೆ. ಆದರೆ ಬಾರ್ಡರ್ ಗವಾಸ್ಕರ್ ಟ್ರೋಫಿಯ ನಂತರ ರೋಹಿತ್ ಅವರ ನಾಯಕತ್ವದಲ್ಲಿ ತಂಡದ ಪ್ರದರ್ಶನ, ಟೆಸ್ಟ್ ತಂಡದಲ್ಲಿ ಅವರ ಸ್ಥಾನ ಮತ್ತು ನಿವೃತ್ತಿಯ ಬಗ್ಗೆ ಚರ್ಚೆ ನಡೆಯಲಿದೆ ಎಂದು ಹೇಳಲಾಗುತ್ತಿದೆ.

### ಗೌತಮ್ ಗಂಭೀರ್ ಮೇಲೆ ತೂಗುಗತ್ತಿ




## 2024ರಲ್ಲಿ ಕಿಂಗ್ ಕೊಹ್ಲಿ ಕಂಗಾಲು!



ವಿರಾಟ್ ಕೊಹ್ಲಿ ಪಾಲಿಗೆ 2024 ಸಿಹಿಯೊಂದಿಗೆ ಕಹಿ ತುಂಬಿದ ವರ್ಷ. ಏಕೆಂದರೆ ಈ ವರ್ಷ ಟಿ20 ವಿಶ್ವಕಪ್ ಗೆಲ್ಲುವ ಮೂಲಕ ಕಿಂಗ್ ಕೊಹ್ಲಿ ತಮ್ಮ ಬಹುಕಾಲದ ಕನಸನ್ನು ಈಡೇರಿಸಿಕೊಂಡಿದ್ದಾರೆ. ಆದರೆ ಇದೇ ವರ್ಷ ಅವರು ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತ್ಯಂತ ಕಳಪೆ ಪ್ರದರ್ಶನವನ್ನೂ ಸಹ ನೀಡಿದ್ದಾರೆ. ಇದಕ್ಕೆ ಸಾಕ್ಷಿ ಈ ಅಂಕಿ ಅಂಶಗಳು... ವಿರಾಟ್ ಕೊಹ್ಲಿ ಈ ವರ್ಷ ಒಟ್ಟು 23 ಅಂತಾರಾಷ್ಟ್ರೀಯ ಪಂದ್ಯಗಳನ್ನಾಡಿದ್ದಾರೆ. ಈ ವೇಳೆ 32 ಇನಿಂಗ್ಸ್‌ಗಳಲ್ಲಿ ಬ್ಯಾಟ್ ಬೀಸಿದ್ದಾರೆ. ಆದರೆ ಕೊಹ್ಲಿಯ ಬ್ಯಾಟ್‌ನಿಂದ ಮೂಡಿಬಂದ ಶತಕಗಳ ಸಂಖ್ಯೆ ಕೇವಲ 1. ಇನ್ನು ಐವತ್ತರ ಗಡಿದಾಟಿದ್ದು ಕೇವಲ 2 ಬಾರಿ ಮಾತ್ರ ಎಂದರೆ ನಂಬಲೇಬೇಕು. ಈ ವರ್ಷ 10 ಟೆಸ್ಟ್ ಪಂದ್ಯಗಳಲ್ಲಿ 19 ಇನಿಂಗ್ಸ್ ಆಡಿರುವ ವಿರಾಟ್ ಕೊಹ್ಲಿ 673 ಎಸೆತಗಳಲ್ಲಿ 417 ರನ್ ಕಲೆಹಾಕಿದ್ದಾರೆ. ಅದು ಕೂಡ ಕೇವಲ 24.52 ರ ಸರಾಸರಿಯಲ್ಲಿ. ಈ ವೇಳೆ ಒಂದು ಶತಕ ಹಾಗೂ ಒಂದು ಅರ್ಧಶತಕವನ್ನು ಬಾರಿಸಲಷ್ಟೇ ಶಕ್ತರಾಗಿದ್ದಾರೆ. 2024ರಲ್ಲಿ ವಿರಾಟ್ ಕೊಹ್ಲಿ ಕೇವಲ 3 ಏಕದಿನ ಪಂದ್ಯಗಳಲ್ಲಿ ಮಾತ್ರ ಕಾಣಿಸಿಕೊಂಡಿದ್ದಾರೆ. ಈ ವೇಳೆ ಕಲೆಹಾಕಿರುವುದು ಕೇವಲ 58 ರನ್‌ಗಳು.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**